ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೨೪

**ಪಟ್ಟಿ – ೦೬**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಐವತ್ತಾರನೆಯ ಅಧಿವೇಶನ**

**ಮಂಗಳವಾರ, ದಿನಾಂಕ : ೧೯ನೇ ಆಗಸ್ಟ್, ೨೦೨೫**

---

## ಸಮೂಹ – II

೧. ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು

೨. ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

೩. ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು

೪. ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು

೫. ಪೌರಾಡಳಿತ ಮತ್ತು ಹಜ್ ಸಚಿವರು

೬. ಸಹಕಾರ ಸಚಿವರು

೭. ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು

---

# ಸರ್ಕಾರಿ ವಕೀಲರನ್ನು (ಪಬ್ಲಿಕ್ ಪ್ರಾಕ್ಸಿಕ್ಯೂಟರ್) ನೇಮಿಸುವ ಕುರಿತು

**ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೧೮ (೮೩೯) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಕಳೆದ ಐದು ವರ್ಷಗಳಿಂದ ಇಲ್ಲಿಯವರೆಗೆ ನಗರ ಸ್ಥಳೀಯ ಸಂಸ್ಥೆಗಳ ಆಸ್ತಿಗಳಿಗೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಿರುವ ಪ್ರಕರಣಗಳೆಷ್ಟು; ಇತ್ಯರ್ಥವಾಗಿರುವ ಪ್ರಕರಣಗಳೆಷ್ಟು ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಆ) ನಗರ ಸ್ಥಳೀಯ ಸಂಸ್ಥೆಗಳಲ್ಲಿನ ನ್ಯಾಯಾಲಯದಲ್ಲಿರುವ ಪ್ರಕರಣಗಳಿಗೆ ಧಾವೆಗಳಿಗೆ ಹಾಗೂ ಕಾನೂನು ಸಲಹೆಗಳನ್ನು ಪಡೆಯಲು ಸರ್ಕಾರದಿಂದ ನೇಮಕಗೊಂಡ ಸರ್ಕಾರಿ ವಕೀಲರ ಮಾಹಿತಿ ನೀಡುವುದು ;

(ಇ) ಹೆಚ್ಚಿನ ಪ್ರಕಾರಗಳಲ್ಲಿ ಸ್ಥಳೀಯ ಸಂಸ್ಥೆಗಳಿಗೆ ನ್ಯಾಯಯುತವಾದ ತೀರ್ಪು ಕೊಡಿಸಲು ವಿಫಲವಾಗುತ್ತಿದ್ದು ಸರ್ಕಾರಿ ಒಡೆತನದ ಆಸ್ತಿ-ಪಾಸ್ತಿಗಳು ಖಾಸಗಿ ವ್ಯಕ್ತಿಗಳ ಪಾಲಾಗುತ್ತಿದ್ದು, ಕೆಲವೊಂದು ಪ್ರಕರಣಗಳು ಹಲವಾರು ವರ್ಷಗಳಿಂದ ಇತ್ಯರ್ಥಪಡಿಸಲಾಗದೆ ಇರುವುದರಿಂದ ಅಭಿವೃದ್ಧಿಗೆ ಮಾರಕವಾಗಿರುವುದು ಸರ್ಕಾರದ ಗಮನಕ್ಕಿದೆಯೇ ; ಹಾಗೂ ಇನ್ನಷ್ಟು ಸರ್ಕಾರಿ ವಕೀಲರನ್ನು ನಿಯೋಜಿಸಲು ಚಿಂತಿಸಿದೆಯೇ ; ಚಿಂತಿಸಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಸರ್ಕಾರಿ ವಕೀಲರನ್ನು ನಿಯೋಜಿಸಲಾಗುವುದು ?

## ಇತ್ತೀಚಿನ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ನಿವೇಶನ ಹಂಚಿಕೆಯಲ್ಲಿನ ಹಗರಣಗಳ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೮೯ (೮೮೦) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚೆಗೆ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಿವೇಶನ ಹಂಚಿಕೆ ಸಂಬಂಧ ನಡೆದಿರುವ ಹಗರಣಗಳು ಯಾವುವು ; (ವಿವರ ಒದಗಿಸುವುದು)

(ಆ) ಈ ಅಕ್ರಮದ ಬಗ್ಗೆ ವಿಚಾರಣೆ ನಡೆಸಲು ಏಕ ಸದಸ್ಯ ವಿಚಾರಣೆ ಆಯೋಗಕ್ಕೆ ಸಮಯ ನಿಗದಿಪಡಿಸಲಾಗಿದೆಯೇ ;

(ಇ) ಪ್ರಸ್ತುತ ಸದರಿ ವಿಚಾರಣೆಗಳು ಯಾವ ಹಂತದಲ್ಲಿವೆ ;

(ಈ) ವಿಚಾರಣೆ ವ್ಯಾಪ್ತಿಗೆ ಒಳಪಟ್ಟಿರುವ ಪ್ರಕಾರಗಳು ಯಾವುವು ; ಹೆಸರು ಸರ್ವೆ ನಂಬರ್ ಸೈಟ್ ನಂಬರ್ ವಿವರಗಳೊಂದಿಗೆ ಮಾಹಿತಿ ಒದಗಿಸುವುದು ;

(ಉ) ಈ ಆಯೋಗವು ತನ್ನ ವರದಿಯನ್ನು ಯಾವ ಕಾಲಮಿತಿಯಲ್ಲಿ ಸಲ್ಲಿಸುವುದು ?

## ರಾಜ್ಯದ ಸಹಕಾರಿ ಮಾರಾಟ ಸಂಸ್ಕರಣ ಸಂಘ (ಹಾಪ್‌ಕಾಮ್ಸ್) ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೨೦ (೮೮೧) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ರೈತರಿಗೆ ನೆರವಾಗಬೇಕಾದ ತೋಟದ ಬೆಳೆಗಾರರ ಸಹಕಾರಿ ಮಾರಾಟ ಮತ್ತು ಸಂಸ್ಕರಣಾ ಸಂಘ (ಹಾಪ್ ಕಾಮ್ಸ್) ನಷ್ಟದಲ್ಲಿದ್ದು ಸಾಲದ ಸುಳಿಗೆ ಸಿಲುಕಿರುವುದು ನಿಜವೇ ;

(ಆ) ಇದ್ದಲ್ಲಿ ನಷ್ಟಕ್ಕೆ ಸಿಲುಕಲು ಹಾಗೂ ಸಾಲ ಪಡೆಯಲು ಕಾರಣವಾದ ಅಂಶಗಳೇನು ;

(ಇ) ಎಷ್ಟು ಮೊತ್ತದ ಸಾಲವನ್ನು ಎಷ್ಟು ಬಡ್ಡಿ ದರಕ್ಕೆ ಪಡೆಯಲಾಗಿದೆ ;

(ಈ) ೩೦೦ ಕ್ಕೂ ಹೆಚ್ಚು ಇದ್ದ ಮಾರಾಟ ಮಳಿಗೆಗಳು ೧೮೦ ಕ್ಕೆ ಕುಸಿಯಲು ಕಾರಣಗಳೇನು ;

(ಉ) ಸರ್ಕಾರ ಹಾಪ್ ಕಾಮ್ಸ್‌ನ್ನು ಖಾಸಗಿ ಅವರಿಗೆ ವಹಿಸಿಕೊಡಲು ಮುಂದಾಗಿದೆಯೇ ?

## ಕಳೆದ ಎರಡು ವರ್ಷಗಳಲ್ಲಿ ರಾಜ್ಯಕ್ಕೆ ಬಂದ ಬಂಡವಾಳ ಕುರಿತು

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೨೧ (೮೮೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ರಾಜ್ಯಕ್ಕೆ ಹರಿದುಬಂದ ಬಂಡವಾಳ ಹೂಡಿಕೆ ಪ್ರಮಾಣವೆಷ್ಟು ; ಯಾವ ಯಾವ ಉದ್ದಿಮೆಗಳು ರಾಜ್ಯಕ್ಕೆ ಆಗಮಿಸಿವೆ ಹಾಗೂ ಎಷ್ಟು ಬಂಡವಾಳವನ್ನು ತೊಡಗಿಸಿವೆ ; (ವಿವರಗಳನ್ನು ಒದಗಿಸುವುದು)

(ಆ) ಸರ್ಕಾರದ ನಿರೀಕ್ಷೆಯಂತೆ ಉದ್ಯೋಗ ಸೃಷ್ಠಿ ಆಗಿದೆಯೇ ಒಂದು ವೇಳೆ ಆಗಿಲ್ಲದಿದ್ದಲ್ಲಿ ಅದಕ್ಕೆ ಕಾರಣಗಳೇನು ;

(ಇ) ಸರ್ಕಾರ ಘೋಷಿಸಿದ ಹೂಡಿಕೆಗೂ ಹಾಗೂ ವಾಸ್ತವ ಹೂಡಿಕೆಗೂ ಅಜಗಜಾಂತರ ವ್ಯತ್ಯಾಸವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ರಾಜ್ಯದಲ್ಲಿ ಉದ್ಯಮ ಸ್ನೇಹಿ ವಾತಾವರಣಕ್ಕೆ ಕೈಗೊಂಡ ಕ್ರಮಗಳೇನು ?

## ಸಕ್ಕರೆ ಕಾರ್ಖಾನೆಗಳ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೭೨೨ (೮೩೧) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಭದ್ರಾವತಿ ಎಂಪಿಎಂ ಸಕ್ಕರೆ ಕಾರ್ಖಾನೆ ಮುಚ್ಚಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ಕಾರ್ಖನೆಯನ್ನು ಪುನಃಶ್ಚೇತನ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಪುನಃಶ್ಚೇನಗೊಳಿಸಲು ಎಷ್ಟು ಅನುದಾನ ಬೇಕಾಗಬಹುದು ;

(ಇ) ಎಂಪಿಎಂ ಸಕ್ಕರೆ ಕಾರ್ಖಾನೆಗೆ ಕಬ್ಬು ಸರಬರಾಜು ಮಾಡಿದ ಬೆಳೆಗಾರರಿಗೆ ನೀಡಬೇಕಾದ ಬಾಕಿ ಮೊತ್ತ ಎಷ್ಟು ; ಇದನ್ನು ರೈತರಿಗೆ ನೀಡದಿರಲು ಕಾರಣಗಳೇನು ? (ವಿವರ ನೀಡುವುದು)

## ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸುವ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೭೨೩ (೮೩೨) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸಲು ಇರುವ ನಿಯಮಗಳೇನು ; (ವಿವರ ನೀಡುವುದು)

(ಆ) ಹೊಳೆಹೊನ್ನೂರು ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸಲು ಯಾವ ಯಾವ ಗ್ರಾಮ ಪಂಚಾಯಿತಿಗಳ ಗ್ರಾಮಗಳನ್ನು ಸೇರಿಸಿಕೊಳ್ಳಲಾಗಿದೆ ;

(ಇ) ಹೊಳೆಹೊನ್ನೂರು ಪಟ್ಟಣ ಪಂಚಾಯಿತಿಗೆ ಸೇರ್ಪಡೆಗೊಂಡ ಗ್ರಾಮ ಪಂಚಾಯಿತಿಯ ಗ್ರಾಮಗಳನ್ನು ಕೈಬಿಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ? (ವಿವರ ನೀಡುವುದು)

## ಸಿಂಧನೂರು ನಗರದ ಹೊಸ ಬಡಾವಣೆಗಳಲ್ಲಿ ಉದ್ಯಾವನವನ್ನು ನಿರ್ಮಿಸುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು):–**

೭೨೪ (೮೪೯) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ನಗರದಲ್ಲಿ ಇರುವ ಹೊಸ ಬಡಾವಣೆಗಳಲ್ಲಿ ಉದ್ಯಾನವನಗಳನ್ನು ನಿರ್ಮಿಸಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ; ಇದ್ದಲ್ಲಿ ಕೈಗೊಂಡಿರುವ ಕ್ರಮಗಳೇನು ;

(ಆ) ಸಿಂಧನೂರು ನಗರಸಭೆಗೆ ಸರ್ಕಾರದಿಂದ ಕಳೆದ ೨೦೨೩–೨೪ನೇ ಸಾಲಿನಿಂದ ಇಲ್ಲಿವರೆಗೆ ಬಂದ ಅನುದಾನ ಎಷ್ಟು ;

(ಇ) ಯಾವ ಯಾವ ಕಾಮಗಾರಿಗಳಿಗೆ ಎಷ್ಟು ಅನುದಾನ ಬಿಡುಗಡೆಯಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)

# ಸಿಂಧನೂರಿನಲ್ಲಿ ಸುಸಜ್ಜಿತವಾದ ತೋಟಗಾರಿಕೆ ಸಂಶೋಧನಾ ಕೇಂದ್ರ ಸ್ಥಾಪಿಸುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು):–**

೭೨೫ (೮೫೦) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರಿನ ಹೃದಯ ಭಾಗದಲ್ಲಿ ರಾಯಚೂರು ಗಂಗಾವತಿ ರಸ್ತೆಗೆ ಹೊಂದಿಕೊಂಡು ಸುಮಾರು ೨೦ ಎಕರೆ ಜಾಗ ತೋಟಗಾರಿಕಾ ಇಲಾಖೆಯ ಹೆಸರಿನಲ್ಲಿದ್ದು, ಸಿಂಧನೂರಿನಲ್ಲಿ ಸುಸಜ್ಜಿತವಾದ ತೋಟಗಾರಿಕಾ ಸಂಶೋಧನಾ ಕೇಂದ್ರವನ್ನು ಸ್ಥಾಪಿಸಲು ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಆ) ಸರ್ಕಾರವು ಇಲ್ಲಿ ಯಾವ ಯಾವ ಬೆಳೆಗಳನ್ನು ತೋಟಗಾರಿಕೆ ಬೆಳೆಗಳನ್ನಾಗಿ ಪರಿಗಣಿಸಿದೆ ಮತ್ತು ರಾಯಚೂರು ಜಿಲ್ಲೆಯಲ್ಲಿ ತೋಟಗಾರಿಕೆ ಬೆಳೆ ಬೆಳೆಯುವ ಪ್ರದೇಶದ ವಿಸ್ತೀರ್ಣವೆಷ್ಟು ;

(ಇ) ಈ ಪ್ರದೇಶದಲ್ಲಿ ಯಾವ ಯಾವ ಬೆಳೆಗಳನ್ನು ಎಷ್ಟು ಪ್ರಮಾಣದಲ್ಲಿ ಬೆಳೆಯಲಾಗುತ್ತಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ರಾಯಚೂರು ಜಿಲ್ಲೆಯಲ್ಲಿ ತೋಟಗಾರಿಕೆ ಇಲಾಖೆಯಿಂದ ಎಷ್ಟು ಕೃಷಿ ಹೊಂಡಗಳನ್ನು ನಿರ್ಮಾಣ ಮಾಡಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಉ) ಸಿಂಧನೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಗೆ ತೋಟಗಾರಿಕೆ ಇಲಾಖೆಯಿಂದ ಬಿಡುಗಡೆಯಾದ ಅನುದಾನ ಎಷ್ಟು ; ಈ ಅನುದಾನ ಯಾವ ಯಾವ ಯೋಜನೆಗಳಿಗೆ ಬಳಕೆಯಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಸಿಂಧನೂರಿನಲ್ಲಿ ಜವಳಿ ಪಾರ್ಕ್ ನಿರ್ಮಾಣ ಮಾಡುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು):–**

೭೨೬ (೮೫೧) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಸಿಂಧನೂರಿನಲ್ಲಿ ಜವಳಿ ಪಾರ್ಕ್ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಈ ಪಾರ್ಕ್ ನಿರ್ಮಾಣಕ್ಕೆ ಜಮೀನು ಗುರುತಿಸಲಾಗಿದೆಯೇ ;

(ಇ) ಇದ್ದಲ್ಲಿ ಸರ್ಕಾರ ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು ?

## ಸಿಂಧನೂರು ಕೃಷಿ ಮಾರುಕಟ್ಟೆಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನದ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು):–**

೭೨೭ (೮೫೨) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಗೆ ಬರುವ ಕೃಷಿ ಮಾರುಕಟ್ಟೆಗೆ ಕಳೆದ ೨೦೨೩-೨೪ನೇ ಸಾಲಿನಿಂದ ಇಲ್ಲಿಯವರೆಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು ;

(ಆ) ಯಾವ ಯಾವ ಯೋಜನೆಗಳಿಗೆ ಅನುದಾನ ಬಳಕೆಯಾಗಿದೆ ಸಂಪೂರ್ಣ ಮಾಹಿತಿ ನೀಡುವುದು ;

(ಇ) ಸಿಂಧನೂರಲ್ಲಿ ಕೃಷಿ ಮಾರುಕಟ್ಟೆಗೆ ಸಂಬಂಧಿಸಿದ ಜಾಗ ಎಷ್ಟಿದೆ ;

(ಈ) ಕಳೆದ ೧೫ ವರ್ಷಗಳಿಂದ ಕೃಷಿ ಮಾರುಕಟ್ಟೆಗೆ ಸಂಬಂಧಿಸಿದ ಜಾಗ ಎಷ್ಟು ಹಂಚಿಕೆಯಾಗಿದೆ ಯಾವ ಆಧಾರದ ಮೇಲೆ ಹಂಚಿಕೆಯಾಗಿದೆ ಹಾಗೂ ಇನ್ನು ಎಷ್ಟು ಜಾಗ ಉಳಿದಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಸಹಕಾರಿ ಸಂಘಗಳಿಂದ ರೈತರಿಗೆ ಸಾಲ ನೀಡುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು):-**

೭೨೮ (೮೫೩) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೪-೨೫ ನೇ ಸಾಲಿನಲ್ಲಿ ಸಹಕಾರ ಸಂಘ ಬ್ಯಾಂಕ್‌ಗಳಿಂದ ಈ ಹಿಂದೆ ರೈತರಿಗೆ ಶೂನ್ಯ ಬಡ್ಡಿ ದರದಲ್ಲಿ ನೀಡಲಾಗಿರುವ ಸಾಲದ ಮೊತ್ತ ಎಷ್ಟು ;

(ಆ) ರಾಜ್ಯದಲ್ಲಿ ಸಹಕಾರ ಸಂಘ ಬ್ಯಾಂಕ್‌ಗಳಿಂದ ರೈತರಿಗೆ ಶೂನ್ಯ ಬಡ್ಡಿ ದರದಲ್ಲಿ (೨೦೨೫-೨೬ನೇ ಸಾಲಿನಲ್ಲಿ) ನೀಡಲು ಉದ್ದೇಶಿಸಿರುವ ಸಾಲದ ಮೊತ್ತ ಎಷ್ಟು ;

(ಇ) ಪ್ರಸ್ತುತ ಈವರೆಗೆ ಎಷ್ಟು ಸಾಲ ವಿತರಣೆ ಮಾಡಲಾಗಿದೆ ; (ಜಿಲ್ಲಾ ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಸಿಂಧನೂರು ವಿಧಾನಸಭಾ ಕ್ಷೇತ್ರದ ಸಹಕಾರಿ ಸಂಸ್ಥೆಗೆ ಸಂಬಂಧಿಸಿದ ಜಾಗ ಎಷ್ಟಿದೆ ; ಇದು ಯಾರು ಯಾರಿಗೆ ಯಾವ ಆಧಾರದ ಮೇಲೆ ಹಂಚಿಕೆಯಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ರೈಲ್ವೆ ಸೇತುವೆ ನಿರ್ಮಾಣ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೭೨೯ (೮೦೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಪಟ್ಟಣದ ಹಳೆ ಆದರ್ಶ ಕಾಲೋನಿ, ಶಹಾಪೂರ ಗೇಟ್ ಹತ್ತಿರ ಸೇತುವೆ ಇಲ್ಲದೇ ಜನರು ಜೀವ ಭಯದಲ್ಲಿ ರೈಲ್ವೆ ಕ್ರಾಸಿಂಗ್ ದಾಟುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ;

(ಆ) ಹೊಸದಾಗಿ ಸೇತುವೆಗಳ ನಿರ್ಮಾಣಕ್ಕೆ ಜಿಲ್ಲಾಡಳಿತದಿಂದ ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ?

## ಎಪಿಎಂಸಿಯಲ್ಲಿ ಮೂಲಭೂತ ಸೌಕರ್ಯ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೭೩೦ (೮೦೯) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆ ಬೀದರ್ ನಗರದ ಗಾಂಧಿಗಂಜ್ ಕೃಷಿ ಉತ್ಪನ್ನ ಮಾರುಕಟ್ಟೆ ಪ್ರಾಂಗಣವು ರೈತರು ಬೆಳೆದ ಬೆಳೆಗಳನ್ನು ಮಾರಾಟ ಮಾಡಲು ಮತ್ತು ವಾಹನಗಳಿಗೆ ಸ್ಥಳಾವಕಾಶ ಸಮಸ್ಯೆಯಿಂದ ವಾಹನಗಳಲ್ಲಿ ತುಂಬಿದ ಬೆಳೆಗಳನ್ನು ಇಳಿಸಲಾಗದೆ ಮತ್ತು ಇತರೇ ಮೂಲಭೂತ ಸೌಕರ್ಯವಿಲ್ಲದೇ ರೈತರಿಗೆ ಸಾಕಷ್ಟು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮವೇನು ;

(ಆ) ಸದರಿ ಮಾರುಕಟ್ಟೆಯಲ್ಲಿ ರಸ್ತೆಯ ಜಾಗದಲ್ಲಿ ಅತಿಕ್ರಮಿಸಿಕೊಂಡು ಮಳಿಗೆಗಳನ್ನು ನಿರ್ಮಿಸಿ ಮಾರುಕಟ್ಟೆ ಸ್ವರೂಪ ಬದಲಾಯಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಕ್ರಮವೇನು ;

(ಇ) ಗಾಂಧಿಗಂಜ್ ಕೃಷಿ ಉತ್ಪನ್ನ ಮಾರುಕಟ್ಟೆ ಬೇರೆ ಕಡೆ ಸ್ಥಳಾಂತರಿಸುವ ಕುರಿತು ಸರ್ಕಾರ ಕ್ರಮವಹಿಸುವುದೆ ? (ಮಾಹಿತಿ ನೀಡುವುದು)

## KIADB ಸ್ವಾಧೀನ ಪಡಿಸಿಕೊಳ್ಳಲು ಉದ್ದೇಶಿಸಿರುವ ಹೆಚ್ಚುವರಿ ಜಮೀನಿನ ಬಗ್ಗೆ

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೭೩೧ (೧೧೮೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಇದುವರೆಗೂ ಕೆ.ಐ.ಎ.ಡಿ.ಬಿ ಸ್ವಾಧೀನಪಡಿಸಿಕೊಂಡಿರುವ ಒಟ್ಟು ಜಮೀನಿನ ವಿಸ್ತೀರ್ಣ ಎಷ್ಟು ;

ಮತ್ತು ಇದರಲ್ಲಿ ಕೈಗಾರಿಕಾಭಿವೃದ್ಧಿಗೆ ಹಂಚಿಕೆಯಾಗಿರುವ ಜಮೀನಿನ ವಿಸ್ತೀರ್ಣ ಎಷ್ಟು ; (ವಿವರಗಳನ್ನು ಗ್ರಾಮವಾರು ನೀಡುವುದು)

(ಆ) ರೈತರಿಂದ ಈಗಾಗಲೇ ಸ್ವಾಧೀನಪಡಿಸಿಕೊಂಡ ಜಮೀನಿಗೆ ನೀಡಿರುವ ಪರಿಹಾರ ಧನದ ಮೊತ್ತ ಎಷ್ಟು ; (ವಿವರಗಳನ್ನು ಗ್ರಾಮವಾರು ನೀಡುವುದು)

(ಇ) ನೆಲಮಂಗಲ ತಾಲ್ಲೂಕಿನ ಸೋಂಪುರ ಹೋಬಳಿಯ ಕೆಲವು ಗ್ರಾಮಗಳಲ್ಲಿನ ಜಮೀನುಗಳನ್ನು ಇತ್ತೀಚೆಗೆ ಹೆಚ್ಚುವರಿಯಾಗಿ ಸ್ವಾಧೀನಪಡಿಸಿಕೊಳ್ಳಲು ಉದ್ದೇಶಿಸಿರುವುದು ನಿಜವೇ ; ಹಾಗಿದ್ದಲ್ಲಿ, ಯಾವ ಯಾವ ಗ್ರಾಮಗಳಲ್ಲಿ ಎಷ್ಟೆಷ್ಟು ಜಮೀನುಗಳನ್ನು ಸ್ವಾಧೀನಪಡಿಸಿಕೊಳ್ಳಲು ಉದ್ದೇಶಿಸಲಾಗಿದೆ ? (ಸರ್ವೆ ನಂಬರ್, ವಿಸ್ತೀರ್ಣವಾರು ವಿವರ ನೀಡುವುದು)

## ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯ ಮೂಲ ಉದ್ದೇಶದ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೭೩೨ (೯೦೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩ರಲ್ಲಿ ಧಾರವಾಡ ಜಿಲ್ಲೆ, ಹುಬ್ಬಳ್ಳಿ ತಾಲ್ಲೂಕು, ಗಾಮನಹಟ್ಟಿ ಕೈಗಾರಿಕಾ ಪ್ರದೇಶ ವ್ಯಾಪ್ತಿಯಲ್ಲಿ ನಿರ್ಮಿಸಿದ ವಸತಿ ಗೃಹಗಳ ಕಾಮಗಾರಿಯನ್ನು ರೂ.೨೧.೦೦ ಕೋಟಿ ಅಂದಾಜು ವೆಚ್ಚದಲ್ಲಿ ಕೈಗೆತ್ತಿಕೊಳ್ಳಲಾಗಿದ್ದು, ಈ ಕಾಮಗಾರಿಯನ್ನು ಯಾವ ಆಧಾರದ ಮೇಲೆ (ಬೇಡಿಕೆ ಸಮೀಕ್ಷೆ) ಕೈಗೆತ್ತಿಕೊಳ್ಳಲಾಗಿದೆ ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಆ) ಈ ಯೋಜನೆಯ ಭೂ ಸ್ವಾಧೀನಕ್ಕಾಗಿ ಎಷ್ಟು ಮೊತ್ತದ ಭೂ ಪರಿಹಾರವನ್ನು ನೀಡಲಾಗಿದೆ ; ಇದರಲ್ಲಿ ಸರ್ಕಾರಿ ಭೂಮಿ ಇದೆಯೇ ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಇ) ಈ ಕಾಮಗಾರಿಯನ್ನು ಎಷ್ಟು ಬ್ಲಾಕ್‌ಗಳಲ್ಲಿ ಕೈಗೆತ್ತಿಕೊಳ್ಳಲಾಗಿದೆ ; ಎಷ್ಟು ಬ್ಲಾಕ್‌ಗಳು ಮುಕ್ತಾಯವಾಗಿದೆ ; ಇಲ್ಲಿಯವರೆಗೆ ಗುತ್ತಿಗೆದಾರರಿಗೆ ಪಾವತಿ ಮಾಡಿರುವ ಮೊತ್ತವೆಷ್ಟು ; (ಪೂರ್ಣವಾದ ಮಾಹಿತಿ ನೀಡುವುದು)

(ಈ) ಇಲ್ಲಿಯವರೆಗೆ ವಸತಿ ಗೃಹಗಳನ್ನು ಯಾರ್ಯಾರಿಗೆ ನೀಡಲಾಗಿದೆ ; ಈ ವಸತಿ ಯೋಜನೆಗೆ ಫಲಾನುಭವಿಗಳಿಂದ ವಸೂಲಿ ಮಾಡಿರುವ ಮೊತ್ತವೆಷ್ಟು ; (ಫಲಾನುಭವಿವಾರು ಸಂಪೂರ್ಣವಾದ ಮಾಹಿತಿ ನೀಡುವುದು)

(ಉ) ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯ ಮೂಲ ಉದ್ದೇಶ ಸರ್ಕಾರಿ ಮತ್ತು ಖಾಸಗಿ ಭೂಮಿಗಳನ್ನು ಸ್ವಾಧೀನ ಪಡಿಸಿಕೊಂಡು ಕೈಗಾರಿಕಾ ಪ್ರದೇಶಗಳನ್ನಾಗಿ ಅಭಿವೃದ್ಧಿ ಪಡಿಸಬಹುದಾಗಿದ್ದು, ಇದಕ್ಕೆ ಬದಲಾಗಿ, ವಸತಿ ಯೋಜನೆಯನ್ನು ಕೈಗೆತ್ತಿಕೊಳ್ಳಲು ಕಾರಣವೇನು ? (ಸಂಪೂರ್ಣವಾದ ಮಾಹಿತಿ ನೀಡುವುದು)

## ತೋಟಗಾರಿಕಾ ಇಲಾಖೆಯ ಯೋಜನೆಗಳ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೭೩೩ (೧೧೮೭) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ತೋಟಗಾರಿಕಾ ಇಲಾಖೆಯಿಂದ ವಿವಿಧ ಲೆಕ್ಕ ಶೀರ್ಷಿಕೆಗಳ ಅಡಿಯಲ್ಲಿ ಚಿಕ್ಕಮಗಳೂರು ಜಿಲ್ಲೆಯಲ್ಲಿ ಕೈಗೊಂಡ ಕಾಮಗಾರಿಗಳು ಯಾವುವು ; (ತಾಲ್ಲೂಕುವಾರು, ವಾರ್ಷಿಕವಾರು ಹಾಗೂ ಲೆಕ್ಕ ಶೀರ್ಷಿಕೆವಾರು ಅನುದಾನದ ವಿವರ ನೀಡುವುದು)

(ಆ) ಚಿಕ್ಕಮಗಳೂರು ಜಿಲ್ಲೆಯ ವ್ಯಾಪ್ತಿಯಲ್ಲಿ ತೋಟಗಾರಿಕಾ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ತೋಟಗಾರಿಕಾ ಕ್ಷೇತ್ರಗಳು/ನರ್ಸರಿಗಳು ಯಾವುವು ;

(ಇ) ಈ ನರ್ಸರಿಗಳ ಅಭಿವೃದ್ಧಿ, ನಿರ್ವಹಣೆಗೆ ವಿವಿಧ ಲೆಕ್ಕ ಶೀರ್ಷಿಕೆಯಡಿ ಬಿಡುಗಡೆಗೊಂಡ ಅನುದಾನವೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ರೈತರಿಗೆ ಸಹಾಯಧನ ನೀಡಿ ತೋಟಗಾರಿಕಾ ಕ್ಷೇತ್ರವನ್ನು ಉತ್ತೇಜಿಸಲು ಸರ್ಕಾರ ರೂಪಿಸಿರುವ ಕಾರ್ಯಕ್ರಮಗಳು ಹಾಗೂ ಪ್ರೋತ್ಸಾಹದಾಯಕ ಯೋಜನೆಗಳು ಯಾವುವು ; ಕಳೆದ ೩ ವರ್ಷದಿಂದ ಈವರೆಗೂ ಚಿಕ್ಕಮಗಳೂರು ಜಿಲ್ಲೆಗೆ ಯಾವ ಯಾವ ಯೋಜನೆಯಡಿಯಲ್ಲಿ ರೈತರಿಗೆ ಸಹಾಯಧನ, ಪ್ರೋತ್ಸಾಹದಾಯಕ ಯೋಜನೆಯನ್ನು ನೀಡಲಾಗಿದೆ ? (ತಾಲ್ಲೂಕುವಾರು ಫಲಾನುಭವಿವಾರು ಸಂಪೂರ್ಣವಾದ ಮಾಹಿತಿ ನೀಡುವುದು)

## ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಡಾಟಾ ಎಂಟ್ರಿ ಆಪರೇಟರ್, ಕಂಪ್ಯೂಟರ್ ಆಪರೇಟರ್ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೭೩೪ (೧೧೮೮) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ನಗರ ಸ್ಥಳೀಯ ಸಂಸ್ಥೆಗಳಾದ ಮಹಾನಗರ ಪಾಲಿಕೆ, ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳಲ್ಲಿ ಸುಮಾರು ೦೫ ರಿಂದ ೨೫ ವರ್ಷಗಳವರೆಗೆ ಹೊರ ಗುತ್ತಿಗೆಯಡಿ ಡಾಟಾ ಎಂಟ್ರಿ ಆಪರೇಟರ್ /ಕಂಪ್ಯೂಟರ್ ಆಪರೇಟರ್ ಹುದ್ದೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವವರಿಗೆ ನೇರಪಾವತಿ/ ನೇರ

ನೇಮಕಾತಿ ಪರಿಗಣಿಸುವ ಕುರಿತು ಸರ್ಕಾರವು ಯಾವ ರೀತಿಯ ಚಿಂತನೆ ನಡೆಸಿದೆ ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಆ) ಡಾಟಾಎಂಟ್ರಿ ಆಪರೇಟರ್/ಕಂಪ್ಯೂಟರ್ ಆಪರೇಟರ್‌ರವರುಗಳನ್ನು ಪೌರಕಾರ್ಮಿಕರ ಮಾದರಿಯಲ್ಲಿ ಹೊರ ಗುತ್ತಿಗೆ ರದ್ದುಪಡಿಸಿ ನೇರ ಪಾವತಿಗೆ ಒಳಪಡಿಸುವಂತೆ ಸಂಬಂಧಪಟ್ಟ ಸಂಘಗಳಿಂದ ಹಲವಾರು ಬಾರಿ ಮನವಿ ಮಾಡಿದ್ದರೂ ಸಹ ಸರ್ಕಾರವು ಯಾವುದೇ ಕ್ರಮಕೈಗೊಳ್ಳದಿರಲು ಕಾರಣವೇನು ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಇ) ಇವರುಗಳಿಗೆ ಸರ್ಕಾರದಿಂದ ಮಾಸಿಕ ನೀಡುತ್ತಿರುವ ವೇತನ ಮತ್ತು ಇತರೆ ಭತ್ಯೆ ಎಷ್ಟು ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಈ) ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಡಾಟಾ ಎಂಟ್ರಿ ಆಪರೇಟರ್/ಕಂಪ್ಯೂಟರ್ ಆಪರೇಟರ್‌ಗಳ ಮಾಹಿತಿ ನೀಡುವುದು ; ಸದರಿಯವರುಗಳನ್ನು ಯಾವ ಯಾವ ಆಧಾರದ ಮೇಲೆ ಕರ್ತವ್ಯಕ್ಕೆ ತೆಗೆದುಕೊಳ್ಳಲಾಗಿದೆ ? (ತಾಲ್ಲೂಕುವಾರು ಪ್ರತ್ಯೇಕ ಸಂಪೂರ್ಣವಾದ ಮಾಹಿತಿ ನೀಡುವುದು)

## ಚಿಕ್ಕಬಾಣಾವರ ಪುರಸಭೆಯ ತೆರಿಗೆ ವಸೂಲಿ ಮತ್ತು ಖಾತಾ ವಿತರಣೆ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೭೩೫ (೮೯೬) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಬಾಣಾವರ ಪುರಸಭೆ ವ್ಯಾಪ್ತಿಯ ಎಷ್ಟು ಗ್ರಾಮಗಳು ಬಿ.ಡಿ.ಎ. ನಿರ್ಮಾಣ ಮಾಡುತ್ತಿರುವ ಡಾ॥ ಕೆ ಶಿವರಾಮ ಕಾರಂತ ಬಡಾವಣೆಯ ಅಧಿಸೂಚನೆ ವ್ಯಾಪ್ತಿಗೆ ಒಳಪಟ್ಟಿವೆ ;

(ಆ) ಸದರಿ ಗ್ರಾಮಗಳ ಜನತೆಯಿಂದ ತೆರಿಗೆ ಪಾವತಿಸಿಕೊಳ್ಳದಂತೆ, ಖಾತಾ ಮಾಡದಂತೆ ಬಿ.ಡಿ.ಎ.ಯಿಂದ ಪತ್ರ ಬರೆಯಲಾಗಿದೆಯೇ ; ಬರೆಯಲಾಗಿದ್ದಲ್ಲಿ, ಪತ್ರದ ಪ್ರತಿಯನ್ನು ನೀಡುವುದು ;

(ಇ) ಬಿ.ಡಿ.ಎ ಅಧಿಸೂಚನೆಯ ಕಾರಣ ನೀಡಿ ಸೋಮಶೆಟ್ಟಿಹಳ್ಳಿ ಗ್ರಾಮದ ಗ್ರಾಮ ಠಾಣಾ ವ್ಯಾಪ್ತಿಯ ಸಾರ್ವಜನಿಕರಿಂದ ತೆರಿಗೆಯನ್ನು ಪಾವತಿಸಿಕೊಳ್ಳದೆ ಅವರಿಗೆ ಇ–ಖಾತವನ್ನು ಸಹ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ಗ್ರಾಮಸ್ಥರಿಂದ ತೆರಿಗೆ ಪಾವತಿಸಿಕೊಂಡು, ಇ– ಖಾತಾ ವಿತರಿಸಲು ಸರ್ಕಾರ ಕೈಗೊಂಡ ಕ್ರಮವೇನು ;

(ಈ) ಮುಂದಿನ ಆರ್ಥಿಕ ವರ್ಷಗಳಲ್ಲಿ ಸಾರ್ವಜನಿಕರು ತೆರಿಗೆ ಪಾವತಿಸಿದ್ದಲ್ಲಿ, ಸಾರ್ವಜನಿಕರಿಂದ ತೆರಿಗೆ, ದಂಡ ಮತ್ತು ಬಡ್ಡಿಯನ್ನು ವಸೂಲಿ ಮಾಡಲಾಗುವುದೇ ; ಮಾಡಿದ್ದಲ್ಲಿ, ಸಾರ್ವಜನಿಕರು ತಮ್ಮದಲ್ಲದ ತಪ್ಪಿಗೆ ಬಡ್ಡಿ ಮತ್ತು ದಂಡ ಪಾವತಿಸಬೇಕೇ ; ಇಲ್ಲದಿದ್ದಲ್ಲಿ, ದಂಡ ಮತ್ತು ಬಡ್ಡಿಯನ್ನು ಮನ್ನಾ ಮಾಡಲಾಗುವುದೇ ;

(ಉ) ಚಿಕ್ಕಬಾಣಾವರ ಪುರಸಭೆಗೆ ೨೦೨೫ ರಲ್ಲಿ ಇ–ಖಾತಾಗಾಗಿ ಬಂದ ಅರ್ಜಿಗಳ ಸಂಖ್ಯೆ ಎಷ್ಟು ; ವಿತರಿಸಿದ ಇ–ಖಾತಾಗಳ ಸಂಖ್ಯೆ ಎಷ್ಟು ; (ಗ್ರಾಮವಾರು ವಿವರ ನೀಡುವುದು) ಬಾಕಿಯಿರುವ ಅರ್ಜಿಗಳ ಸಂಖ್ಯೆ ಎಷ್ಟು ?

## ರಾಜ್ಯದಲ್ಲಿ ಸರ್ಕಾರದ ವತಿಯಿಂದ ಕೋಲ್ಡ್ ಸ್ಟೋರೆಜ್‌ಗಳನ್ನು ನಿರ್ಮಾಣ ಮಾಡುವ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :–**

೭೩೬ (೮೪೩) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರೈತರು ಬೆಳೆದ ತರಕಾರಿ ಮತ್ತು ಹಣ್ಣುಗಳನ್ನು ಕೆಡದಂತೆ ದಾಸ್ತಾನು ಮಾಡಲು ಅಗತ್ಯ ಪ್ರಮಾಣದಲ್ಲಿ ಸರ್ಕಾರದ ವತಿಯಿಂದ ಕೋಲ್ಡ್ ಸ್ಟೋರೆಜ್‌ಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿರುವ ಈ ಶಿಥಲೀಕರಣ ಘಟಕಗಳ (ಕೋಲ್ಡ್ ಸ್ಟೋರೇಜ್) ಗಳ ಸಂಖ್ಯೆ ಎಷ್ಟು ; (ಸರ್ಕಾರಿ ಮತ್ತು ಖಾಸಗಿ ಸಂಸ್ಥೆವಾರು ಹಾಗೂ ಜಿಲ್ಲಾವಾರು ಮಾಹಿತಿ ನೀಡುವುದು) ;

(ಇ) ಅನೇಕ ಜಿಲ್ಲೆಗಳಲ್ಲಿ ಶಿಥಿಲೀಕರಣ ಆರಂಭಕ್ಕೆ ರೈತರ ಬೇಡಿಕೆ ಇದ್ದರೂ ಶಿಥಿಲೀಕರಣ ಸೌಲಭ್ಯವಿಲ್ಲದೆ ರೈತರ ಬೆಳೆಗಳಿಗೆ ರಕ್ಷಣೆ ಇಲ್ಲದೆ ಸಂಕಷ್ಟಕ್ಕೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಪ್ರತಿ ಜಿಲ್ಲೆಗಳಲ್ಲಿ ಹಾಗೂ ಅಗತ್ಯ ಸಾಮರ್ಥ್ಯದ ಶಿಥಲೀಕರಣದ ಘಟಕ ಸ್ಥಾಪನೆ ಮಾಡಿ ರೈತರು ಬೆಳೆಯುವ ಬೆಳೆಗಳನ್ನು ಸಂರಕ್ಷಿಸಿ ರೈತರ ಹಿತ ಕಾಪಾಡುವಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಸಹಕಾರಿ ಇಲಾಖೆಯ ಕೆ.ಎಂ.ಎಫ್.ಗಳ ಮಾಹಿತಿ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೩೭ (೯೧೭) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಹಕಾರ ಇಲಾಖೆಯಡಿಯಲ್ಲಿ ಬರುವ ಕೆ.ಎಂ.ಎಫ್ ಗಳ ಸಂಖ್ಯೆ ಎಷ್ಟು ;

(ಆ) ಹಾಲು ಒಕ್ಕೂಟಗಳಲ್ಲಿ ನೇಮಕಾತಿ ಪ್ರಕ್ರಿಯೆಗೆ ಇರುವಂತಹ ನಿಯಮಗಳಾವುವು ;

(ಇ) ಕಳೆದ ಎರಡು ೨ ವರ್ಷಗಳಲ್ಲಿ ರಾಜ್ಯದಲ್ಲಿ ಎಷ್ಟು ನೇಮಕಾತಿಗಳನ್ನು ಮಾಡಲಾಗಿದೆ ; (ವೃಂದವಾರು ಮಾಹಿತಿ ನೀಡುವುದು)

(ಈ) ಕೆ.ಎಂ.ಎಫ್ ಗಳಲ್ಲಿ ಬಡ್ತಿಗೆ ನಿಗದಿಪಡಿಸಿರುವ ನಿಯಮಗಳು ಮತ್ತು ಹಿರಿತನದ ಮೇಲೆ ಇದುವರೆವಿಗೂ ನೀಡಿರುವ ಬಡ್ತಿಗಳು ಎಷ್ಟು ; (ವೃಂದವಾರು ಮಾಹಿತಿ ನೀಡುವುದು)

(ಉ) ಕೆ.ಎಂ.ಎಫ್ ನಲ್ಲಿ ಎಷ್ಟು ಹುದ್ದೆಗಳು ಖಾಲಿ ಇವೆ ? (ವಿವರ ನೀಡುವುದು)

## ಬೆಂಗಳೂರು ನಗರ ಜಿಲ್ಲೆಯಲ್ಲಿ ಬೃಹತ್ ಕೈಗಾರಿಕೆಗಾಗಿ ಭೂ ಸ್ವಾಧೀನ ಪಡೆಯುವ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೩೮ (೯೧೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಜಿಲ್ಲೆಯಲ್ಲಿ ಬೃಹತ್ ಕೈಗಾರಿಕೆಗಳಿಗಾಗಿ ಎಷ್ಟು ಭೂಮಿಯನ್ನು ಸಾರ್ವಜನಿಕರಿಂದ ಪಡೆದುಕೊಳ್ಳಲು ತೀರ್ಮಾನಿಸಲಾಗಿದೆ ; ಯಾವ ಯಾವ ಯೋಜನೆಗಳಿಗಾಗಿ ಭೂಸ್ವಾಧೀನ ಮಾಡಲಾಗಿದೆ ; ( ವಿವರ ನೀಡುವುದು)

(ಆ) ಕೆ.ಐ.ಎ.ಡಿ.ಬಿ ನಿಂದ ಕೈಗಾರಿಕೆಗಾಗಿ ವಶಪಡಿಸಿಕೊಂಡಿರುವ ಭೂಮಿಯನ್ನು ಸದರಿ ಉದ್ದೇಶಕ್ಕಾಗಿ ಬಳಕೆ ಮಾಡದಿದ್ದಾಗ ಅದನ್ನು ಮತ್ತೆ ಜಮೀನುದಾರರಿಗೆ ನೀಡುವ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆಯೇ ; ಈ ಬಗ್ಗೆ ಸರ್ಕಾರದ ನಿಲುವೇನು ; (ವಿವರ ನೀಡುವುದು)

(ಇ) ಬೃಹತ್ ಕೈಗಾರಿಕೆಗಾಗಿ ಪ್ರಸ್ತುತ ಯಾವ ಯಾವ ಯೋಜನೆಗಾಗಿ ಯಾವ ಯಾವ ಪ್ರದೇಶಗಳಲ್ಲಿ ಭೂ ಸ್ವಾಧೀನ ಪ್ರಕ್ರಿಯೆ ಚಾಲ್ತಿಯಲ್ಲಿದೆ ; (ವಿವರ ನೀಡುವುದು)

(ಈ) ಈಗಾಗಲೇ ಭೂಸ್ವಾಧೀನ ಮಾಡಿಕೊಂಡಿರುವ ಜಮೀನಿಗೆ ಎಷ್ಟು ದರವನ್ನು ನಿಗದಿಪಡಿಸಲಾಗಿದೆ ? (ವಿವರ ನೀಡುವುದು)

## ಸಿ.ಎಸ್.ಆರ್ ಅನುದಾನವನ್ನು ಬಳಕೆ ಮಾಡುವ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೩೯ (೯೧೯) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಿ.ಎಸ್.ಆರ್. (ಕಾರ್ಪೋರೇಟ್ ಸೋಷಿಯಲ್ ರೆಸ್ಪಾನ್ಸಿಬಿಲಿಟಿ) ಯೋಜನೆಯಡಿ ರಾಜ್ಯದಲ್ಲಿರುವ ಸರ್ಕಾರಿ ಕಾರ್ಪೋರೇಟ್ ಕಂಪನಿಗಳು, ನಿಗಮಗಳು, ಮಂಡಳಗಳು ಅಭಿವೃದ್ಧಿ ಪ್ರಾಧಿಕಾರಗಳು ಹಾಗೂ ಖಾಸಗಿ ಕಾರ್ಪೋರೇಟ್ ಕಂಪನಿಗಳು ಶೇಕಡವಾರು ಎಷ್ಟು ಪ್ರಮಾಣದಲ್ಲಿ ಸಿ.ಎಸ್.ಆರ್ ನಿಧಿಯನ್ನು ಕೊಡಲು ಅವಕಾಶವಿದೆ ; (ಸಂಪೂರ್ಣ ಮಾಹಿತಿಯೊಂದಿಗೆ ಆದೇಶ/ ಸುತ್ತೋಲೆಗಳನ್ನು ಒದಗಿಸುವುದರೊಂದಿಗೆ ವಿವರ ನೀಡುವುದು ;

(ಆ) ಕಳೆದ ೩ ವರ್ಷಗಳಲ್ಲಿ ಸಿ.ಎಸ್.ಆರ್ (ಕಾರ್ಪೋರೇಟ್ ಸೋಷಿಯಲ್ ರೆಸ್ಪಾನ್ಸಿಬಿಲಿಟಿ) ಯೋಜನೆಯಡಿಯಲ್ಲಿ ಯಾವ ಯಾವ ಕಾಮಗಾರಿಗಳನ್ನು ತೆಗೆದುಕೊಂಡು ಅಭಿವೃದ್ಧಿ ಅಥವಾ ಪುನಃಶ್ಚೇತನಗೊಳಿಸಲಾಗಿದೆ ; (ಸಂಪೂರ್ಣ ಮಾಹಿತಿಯೊಂದಿಗೆ ವಿವರ ನೀಡುವುದು)

(ಇ) ಬೆಂಗಳೂರು ನಗರ ಜಿಲ್ಲೆ ಸೇರಿದಂತೆ ರಾಜ್ಯದ ಕೆಲವು ಜಿಲ್ಲೆಗಳಲ್ಲಿ ಸರ್ಕಾರಿ ಶಾಲಾ ಕಾಲೇಜುಗಳ ಕಟ್ಟಡ ಅಂಗನವಾಡಿ ಕಟ್ಟಡಗಳು ಬೆಂಗಳೂರು ನಗರದಲ್ಲಿರುವ ಕೆರೆಗಳ ದುರಸ್ಥಿ ಮತ್ತು ಪುನಃಶ್ಚೇತನ

ಕಾಮಗಾರಿಗಳನ್ನು ಕೈಗೊಳ್ಳಲು ಸಿ.ಎಸ್.ಆರ್. ನಿಧಿಯ ಅನುದಾನವನ್ನು ಇದುವರೆವಿಗೂ ಏಕೆ ಬಳಕೆ ಮಾಡಿಕೊಂಡಿಲ್ಲ (ವಿವರ ನೀಡುವುದು)

(ಈ) ಈ ಯೋಜನೆಯಡಿ ರಾಜ್ಯದಲ್ಲಿರುವ ಸರ್ಕಾರಿ ಕಾರ್ಪೋರೇಟ್ ಕಂಪನಿಗಳು ನಿಗಮಗಳು ಮಂಡಳಿಗಳು ಅಭಿವೃದ್ಧಿ ಪ್ರಾಧಿಕಾರಗಳು ಹಾಗೂ ಖಾಸಗಿ ಕಾರ್ಪೋರೇಟ್ ಕಂಪನಿಗಳು ಶೇಕಡವಾರು ಇಂತಹ ಕಾಮಗಾರಿಗಳಿಗೆ ಅನುದಾನವನ್ನು ನೀಡುವಂತೆ ಕಟ್ಟು ನಿಟ್ಟಿನ ಆದೇಶ ಹೊರಡಿಸಲಾಗುವುದೇ ? (ಸ್ಪಷ್ಟನೆ ನೀಡುವುದು)

## ಅಕ್ರಮ ಗಣಿಗಾರಿಕೆಯ ತನಿಖೆಯ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೭೪೦ (೮೪೦) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಲೋಕಾಯುಕ್ತ ಸಂಸ್ಥೆ ತನಿಕ ಅಂದಾಜಿನಂತೆ ೨೦೦೬ ರಿಂದ ೨೦೧೦ರ ಅವಧಿಯಲ್ಲಿ ೨.೯೮ ಟನ್ ಅದಿರು ಅಕ್ರಮ–ರಫ್ತು ಆಗಿರುವುದರಿಂದ ರಾಜ್ಯದ ಖಜಾನೆಗೆ ರೂ.೧೨.೨೨೮ ಕೋಟಿ ನಷ್ಟವಾಗಿರುವುದು ನಿಜವೇ ಹಾಗೂ ಇದಕ್ಕಿಂತ ಹೆಚ್ಚಾಗಿ ರಾಜ್ಯ ಬೊಕ್ಕಸಕ್ಕೆ ನಷ್ಟ ಉಂಟಾಗಿದ್ದರೆ ಪೂರ್ಣ ಮಾಹಿತಿ ನೀಡುವುದು ;

(ಆ) ಅಕ್ರಮ ಮಾಡಿರುವ ವ್ಯಕ್ತಿ/ಸಂಸ್ಥೆಗಳು ಯಾವುವು ಹಾಗೂ ಇವರ ಮೇಲೆ ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಇ) ಅಕ್ರಮ ಗಣಿಗಾರಿಕೆಯ ಶೇಕಡ ೯೨.೪ ರಷ್ಟು ಪ್ರಕರಣಗಳು ತನಿಖೆಗೆ ಒಳಪಡದಿರುವುದರಿಂದ ವಶಪಡಿಸಿಕೊಂಡ ಬಹುಲಕ್ಷ ಕೋಟಿ ರೂ ಸಂಪತ್ತು ಖಜಾನೆಗೆ ವಾಪಸ್ಸು ಆಗಿಲ್ಲದಿರುವುದು ನಿಜವೇ ;

(ಈ) ಹಾಗಿದ್ದಲ್ಲಿ, ಇದಕ್ಕೆ ಕಾರಣಕರ್ತರು ಯಾರು ಇಷ್ಟು ದೊಡ್ಡ ಮೊತ್ತದ ಹಣವನ್ನು ಸರ್ಕಾರ ಯಾವಾಗ ಮರಳಿ ಪಡೆಯುತ್ತದೆ ಹಾಗೂ ಎಷ್ಟು ಅಧಿಕಾರಿಗಳ ಮೇಲೆ ಕ್ರಮ ಕೈಗೊಂಡಿದೆ ? (ಪೂರ್ಣ ವಿವರ ನೀಡುವುದು)

## ಗ್ರಾಮೀಣ ಬ್ಯಾಂಕಿನಲ್ಲಿ ೨೦ ವರ್ಷದ ಹಿಂದೆ ಪಡೆದ ಸಾಲಕ್ಕೆ ಈಗ ನೋಟಿಸ್ ನೀಡುತ್ತಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೭೪೧ (೮೪೧) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ತಾಲ್ಲೂಕಿನಲ್ಲಿರುವ ಕರ್ನಾಟಕ ಗ್ರಾಮೀಣ ಬ್ಯಾಂಕಿನಲ್ಲಿ ಕಳೆದ ೧೦ ವರ್ಷಗಳ ಅವಧಿಯಲ್ಲಿ ಸ್ತ್ರೀಶಕ್ತಿ ಸ್ವ–ಸಹಾಯ ಸಂಘಗಳಿಗೆ ನೀಡಲಾಗಿರುವ ಸಾಲದ ಮೊತ್ತವೆಷ್ಟು ;

(ಆ) ೨೦ ವರ್ಷಗಳ ಬಳಿಕ ಪಡೆದ ಸಾಲಕ್ಕೆ ಸ್ತ್ರೀಶಕ್ತಿ ಸ್ವ–ಸಹಾಯ ಸಂಘದ ಸದಸ್ಯರು ಅಷ್ಟು ವರ್ಷದ ಬಡ್ಡಿ ಸೇರಿಸಿ ಹಣವನ್ನು ಕಟ್ಟಬೇಕೆಂದು ನೋಟಿಸ್ ನೀಡಲಾಗಿದೆಯೇ ; ಹಾಗಿದ್ದಲ್ಲಿ, ಬ್ಯಾಂಕಿಗೆ ಬರಬೇಕಾಗಿರುವ ಬಾಕಿ ಹಣವೆಷ್ಟು ;

(ಇ) ೨೦೧೩ರಲ್ಲಿ ಸರ್ಕಾರ ರೈತರ ಮತ್ತು ಸ್ತ್ರೀಶಕ್ತಿ ಸ್ವ–ಸಹಾಯ ಸಂಘಗಳ ಸಾಲ ಮನ್ನಾ ಘೋಷಣೆ ಮಾಡಿರುವುದು ಇನ್ನು ಜಾರಿಗೆ ಬಂದಿಲ್ಲವೇ ; ಬಂದಿದ್ದರೆ, ಪೂರ್ಣ ಮಾಹಿತಿ ಒದಗಿಸುವುದು ;

(ಈ) ರಾಜ್ಯದಲ್ಲಿ ಒಟ್ಟು ಎಷ್ಟು ಕರ್ನಾಟಕ ಗ್ರಾಮೀಣ ಬ್ಯಾಂಕ್‌ಗಳಿವೆ ; ಬೇರೆ ಜಿಲ್ಲೆಯಲ್ಲಿಯೂ ಇದೆ ರೀತಿಯ ನೋಟಿಸ್ ನೀಡಲಾಗುತ್ತಿದೆಯೇ ; ಒಟ್ಟು ಎಷ್ಟು ಬಾಕಿ ಹಣ ವಸೂಲಿಯಾಗಬೇಕಾಗಿದೆ ;

(ಉ) ರಾಜ್ಯದಲ್ಲಿರುವ ಡಿಸಿಸಿ ಬ್ಯಾಂಕ್‌ಗಳನ್ನು ಸೇರಿಸಿಕೊಂಡು ಎಲ್ಲಾ ಸಹಕಾರಿ ಬ್ಯಾಂಕ್‌ನಲ್ಲಿಯೂ ಸಹ ಇದೇ ರೀತಿಯಾಗಿ ಬಾಕಿ ವಸೂಲಿ ಮಾಡಲಾಗುತ್ತಿದೆಯೇ ?

## ಬಂಡವಾಳ ಹೂಡಿಕೆಯ ಸಮಾವೇಶದ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೭೪೨ (೮೪೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) 'ಇನ್ವೆಸ್ಟ್ ಕರ್ನಾಟಕ ೨೦೨೫' ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶಕ್ಕಾಗಿ ಸರ್ಕಾರದಿಂದ ಎಷ್ಟು ಹಣವನ್ನು ವೆಚ್ಚ ಮಾಡಲಾಗಿದೆ ಹಾಗೂ ಕಳೆದ ಸಾಲಿನ ಸಮಾವೇಶದ ವೆಚ್ಚದ ಮೊತ್ತ ಎಷ್ಟು ; (ವಿವರಗಳನ್ನು ಒದಗಿಸುವುದು)

(ಆ) ಈ ಸಾಲಿನ ಸಮಾವೇಶದಲ್ಲಿ ಭಾಗವಹಿಸಿದ ಕಂಪನಿಗಳು ಯಾವುವು ; ಎಷ್ಟು ಕಂಪನಿಗಳು ರಾಜ್ಯದಲ್ಲಿ ಬಂಡವಾಳ ಹೂಡಲು ಒಡಂಬಡಿಕೆಗೆ ಸಹಿ ಮಾಡಿವೆ ; ಬಂಡವಾಳದ ಮೊತ್ತ ಹಾಗೂ ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಕಂಪನಿ ಪ್ರಾರಂಭಿಸುವ ಉದ್ದೇಶ ಹೊಂದಿದ್ದಾರೆ ; (ಕಂಪನಿಯ ವಿವರ ನೀಡುವುದು)

(ಇ) ಬಂಡವಾಳ ಹೂಡುವ ಕಂಪನಿಗಳಿಗೆ ಯಾವ ಯಾವ ಸೌಲಭ್ಯಗಳನ್ನು ಒದಗಿಸಲಾಗುವುದು ; ಎಷ್ಟು ಉದ್ಯೋಗಗಳು ಸೃಷ್ಟಿಯಾಗುವುದು ;

(ಈ) ಈ ಹಿಂದೆ ನಡೆದ ಸಮಾವೇಶದಲ್ಲಿ ಒಡಂಬಡಿಕೆಗೆ ಸಹಿ ಮಾಡಿರುವ ಕಂಪನಿಗಳು ಪ್ರಾರಂಭಗೊಂಡಿದೆಯೇ ; ಎಷ್ಟು ನಿರೋದ್ಯೋಗಿಗಳಿಗೆ ಉದ್ಯೋಗ ದೊರಕಿದೆ ;

(ಉ) ಉತ್ತರ ಕನ್ನಡ ಜಿಲ್ಲೆಯಲ್ಲಿ ಸುಮಾರು ೩೦ಕ್ಕೂ ಅಧಿಕ ಕಂಪನಿಗಳು ಮುಂದೆ ಬಂದಿದ್ದು, ಅವರಿಗೆ ಜಮೀನು ನೀಡಲು ಜಿಲ್ಲಾಡಳಿತದಲ್ಲಿ ಜಮೀನು ಲಭ್ಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಕೋಲಾರ ಜಿಲ್ಲೆಯಲ್ಲಿ ಸಾಕಷ್ಟು ಪ್ರಮಾಣದಲ್ಲಿ ಕೈಗಾರಿಕಾ ಪ್ರದೇಶದ ಜಮೀನುಗಳು ಲಭ್ಯವಿದ್ದು ಇದನ್ನು ಬಳಸಿಕೊಳ್ಳಲಾಗುತ್ತಿದೆಯೇ ?

## ಕಳೆದ ೨ ವರ್ಷಗಳಲ್ಲಿ ಕೊಪ್ಪಳ ಜಿಲ್ಲೆಯಲ್ಲಿ ವಿವಿಧ ಖನಿಜ ಹಾಗೂ ಉಪ ಖನಿಜಗಳ ಗಣಿಗಾರಿಕೆಗೆ ನೀಡಿರುವ ಪರವಾನಿಗೆ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೪೩ (೯೦೮) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಲ್ಲಿ ಕೊಪ್ಪಳ ಜಿಲ್ಲೆಯಲ್ಲಿ ವಿವಿಧ ಖನಿಜ ಹಾಗೂ ಉಪ ಖನಿಜಗಳ ಗಣಿಗಾರಿಕೆ ನಡೆಸಲು ಎಷ್ಟು ಲೈಸೆನ್ಸ್‌ಗಳನ್ನು ಮಂಜೂರು ಮಾಡಲಾಗಿದೆ ; ಮಂಜೂರು ಮಾಡಲಾದ ವಿಸ್ತೀರ್ಣವೆಷ್ಟು ; (ತಾಲ್ಲೂಕುವಾರು ವಿವರಗಳೊಂದಿಗೆ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಅನಧಿಕೃತ ಗಣಿ ಚಟುವಟಿಕೆಗಳು ಅವ್ಯಾಹತವಾಗಿ ನಡೆಯುತ್ತಿದ್ದು, ಈ ಅನಧಿಕೃತ ಗಣಿಗಾರಿಕೆಗಳನ್ನು ತಡೆಗಟ್ಟಲು ಸರ್ಕಾರ ಯಾವ ಯಾವ ಕ್ರಮ ಕೈಗೊಂಡಿದೆ ; (ವಿವರಗಳನ್ನು ಒದಗಿಸುವುದು)

(ಇ) ಕೊಪ್ಪಳ ಜಿಲ್ಲೆಯಲ್ಲಿ ಕಳೆದ ೩ ವರ್ಷದಲ್ಲಿ ಮಂಜೂರಾದ ಗಣಿ/ಕಲ್ಲುಗಣಿ ಗುತ್ತಿಗೆ ಪ್ರದೇಶಗಳನ್ನು ಹೊರತುಪಡಿಸಿ, ಗುತ್ತಿಗೆ ಪ್ರದೇಶದ ಹೊರಭಾಗದಲ್ಲಿ ಒತ್ತುವರಿ ಮಾಡಿ ನಿಯಮ ಉಲ್ಲಂಘಿಸಿ ಗಣಿಗಾರಿಕೆಯನ್ನು ನಡೆಸಿರುವ ಪ್ರಕರಣಗಳು ಎಷ್ಟು ; (ವಿವರಗಳನ್ನು ಒದಗಿಸುವುದು)

(ಈ) ಇಂತಹ ಅಕ್ರಮದಲ್ಲಿ ತೊಡಗಿಸಿಕೊಂಡಿರುವ ಗಣಿ ಗುತ್ತಿಗೆದಾರರ ವಿರುದ್ಧ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ? (ವಿವರಗಳನ್ನು ಒದಗಿಸುವುದು)

## ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿನ ರೈತರ ಸಾಲಮನ್ನಾ ಜಾರಿಗೆ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೪೪ (೯೦೯) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿ ರೈತರ ಸಾಲಮನ್ನಾ ಜಾರಿಗೆ ತರಲಾಗಿದೆಯೇ ; ತಂದಿದ್ದಲ್ಲಿ, ಜಿಲ್ಲಾವಾರು ಮಾಹಿತಿ ಹಾಗೂ ಸಾಲ ಮನ್ನಾ ಮಾಡಲಾದ ರೈತರ ಸಂಖ್ಯೆ ಮತ್ತು ಮೊತ್ತವನ್ನು ಒದಗಿಸುವುದು ;

(ಆ) ಚುನಾವಣೆ ಮೊದಲು ಘೋಷಿಸಿದ್ದ ರೈತರ ಸಂಪೂರ್ಣ ಸಾಲ ಮನ್ನಾ ವಾಗ್ದಾನವನ್ನು ಈವರೆಗೆ ಜಾರಿಗೆ ತರಲಿಲ್ಲ ಎಂಬ ಆರೋಪಗಳ ಹಿನ್ನೆಲೆಯಲ್ಲಿ ಸರ್ಕಾರದ ಸ್ಪಷ್ಟನೆ ಏನು ; (ವಿವರಗಳನ್ನು ಒದಗಿಸುವುದು)

(ಇ) ರಾಜ್ಯದಲ್ಲಿ ಸಹಕಾರ ಬ್ಯಾಂಕ್‌ಗಳ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು (ಪಿ.ಎ.ಸಿ.ಎಸ್) ಮತ್ತು ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿ ರೈತರ ಸಾಲ ಮನ್ನಾ ಕುರಿತು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ; ಈ ಕುರಿತಂತೆ ಯಾವುದಾದರೂ ಆದೇಶ ಅಥವಾ ಮಾರ್ಗಸೂಚಿ ಹೊರಡಿಸಲಾಗಿದೆಯೇ ; (ವಿವರಗಳನ್ನು ಒದಗಿಸುವುದು)

(ಈ) ಸಾಲಮನ್ನಾ ಜಾರಿಗೆ ವಿಫಲವಾಗಿರುವುದರಿಂದ ಸಾವಿರಾರು ರೈತರು ಸಂಕಷ್ಟದಲ್ಲಿದ್ದು, ಸರ್ಕಾರ ರೈತರ ಆತ್ಮಹತ್ಯೆ ಪ್ರಕರಣಗಳಲ್ಲಿ ಸಾಲ ಭಾರವೇ ಕಾರಣ ಎಂಬುದರ ಬಗ್ಗೆ ಸರ್ಕಾರದ ನಿಲುವೇನು ? (ವಿವರಗಳನ್ನು ಒದಗಿಸುವುದು)

# ಕೊಪ್ಪಳ ಜಿಲ್ಲೆಯಲ್ಲಿ ಸರ್ಕಾರಿ ಅಥವಾ ಅರಣ್ಯ ಜಮೀನನ್ನು ಒತ್ತುವರಿ ಮಾಡಿ ನಿಯಮ ಉಲ್ಲಂಘಿಸಿ ಗಣಿಗಾರಿಕೆಯನ್ನು ನಡೆಸಿರುವ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೪೫ (೯೧೦) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಲ್ಲಿ ಅನುಮತಿ ನೀಡಿರುವ ಗುತ್ತಿಗೆ ಪ್ರದೇಶಗಳನ್ನು ಹೊರತುಪಡಿಸಿ, ಇತರೆ ಸರ್ಕಾರಿ ಅಥವಾ ಅರಣ್ಯ ಜಮೀನುಗಳನ್ನು ಒತ್ತುವರಿ ಮಾಡಿ ನಿಯಮ ಉಲ್ಲಂಘಿಸಿ ಗಣಿಗಾರಿಕೆಯನ್ನು ನಡೆಸಿರುವ ಪ್ರಕರಣಗಳ ಸಂಖ್ಯೆ ಎಷ್ಟು ; (ವಿವರಗಳನ್ನು ಒದಗಿಸುವುದು)

(ಆ) ಕೊಪ್ಪಳ ಜಿಲ್ಲೆಯಲ್ಲಿ ಕಳೆದ ೧೦ ವರ್ಷಗಳಲ್ಲಿ ಅನಧಿಕೃತ ಗಣಿಗಾರಿಕೆಯನ್ನು ಮಾಡಿರುವ ಎಷ್ಟು ಜನ ಗುತ್ತಿಗೆದಾರರ ಲೈಸೆನ್ಸ್‌ಗಳನ್ನು ರದ್ದುಪಡಿಸಲಾಗಿದೆ ; (ಮಾಹಿತಿ ಒದಗಿಸುವುದು)

(ಇ) ಮಂಜೂರಾದ ಗುತ್ತಿಗೆಗಳ ಲೆಕ್ಕಪರಿಶೋಧನೆ ಒಳಪಡಿಸಲು ನಿಯಮಾವಳಿಗಳಲ್ಲಿ ಅವಕಾಶವಿದೆಯೇ ; ಇದ್ದಲ್ಲಿ, ಇಲ್ಲಿಯವರೆಗೆ ಕೊಪ್ಪಳ ಜಿಲ್ಲೆಯಲ್ಲಿ ಎಷ್ಟು ಗುತ್ತಿಗೆಗಳ ಲೆಕ್ಕಪರಿಶೋಧನೆ ಮಾಡಲಾಗಿದೆ ; ಲೆಕ್ಕಪರಿಶೋಧನೆಗೆ ಬಾಕಿ ಇರುವ ಗುತ್ತಿಗೆಗಳ ಸಂಖ್ಯೆ ಎಷ್ಟು ? (ವಿವರಗಳನ್ನು ಒದಗಿಸುವುದು)

# ೨೦೧೭ನೇ ಸಾಲಿನಲ್ಲಿ ಕಲಬುರಗಿ, ಯಾದಗಿರಿ ಮತ್ತು ಬೀದರ್ ಹಾಲು ಒಕ್ಕೂಟದ ಅಧಿಕಾರಿ, ಸಿಬ್ಬಂದಿ ನೇರ ನೇಮಕಾತಿ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೪೬ (೯೧೧) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೭ನೇ ಸಾಲಿನಲ್ಲಿ ಕಲಬುರಗಿ, ಬೀದರ್ ಮತ್ತು ಯಾದಗಿರಿ ಹಾಲು ಒಕ್ಕೂಟಕ್ಕೆ ಅಧಿಕಾರಿ, ಸಿಬ್ಬಂದಿಗಳ ನೇರ ನೇಮಕಾತಿಗೆ ಸ್ವೀಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು ; ಅದರಲ್ಲಿ ಅಕ್ರಮಗಳುಂಟಾಗಿದೆ ಎಂಬ ದೂರಿನ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; (ಸಂಪೂರ್ಣ ದಾಖಲಾತಿಗಳನ್ನು ಒದಗಿಸುವುದು)

(ಆ) ಈ ನೇಮಕಾತಿಗೆ ಘನ ಕರ್ನಾಟಕ ಉಚ್ಚ ನ್ಯಾಯಾಲಯವು ನೀಡಿದ ತಡೆಯಾಜ್ಞೆಯಿಂದಾಗಿ ೨೦೧೭ನೇ ಸಾಲಿನಲ್ಲಿ ಅದೇ ಹುದ್ದೆಗಳಿಗೆ ಪುನಃ ಅರ್ಜಿ ಕರೆಯಲಾಗಿದ್ದು, ಈ ಎರಡು ಬಾರಿಯೂ ಸ್ವೀಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು ; ತಿರಸ್ಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು ಮತ್ತು ತಿರಸ್ಕರಿಸಲು ಕಾರಣಗಳೇನು ; (ಸಂಪೂರ್ಣ ವಿವರಗಳನ್ನು ನೀಡುವುದು)

(ಇ) ಅಂಗೀಕೃತಗೊಂಡ ಅರ್ಜಿಗಳಲ್ಲಿ ಲಿಖಿತ ಪರೀಕ್ಷೆಗೆ ಅರ್ಹಗೊಂಡ ಅಭ್ಯರ್ಥಿಗಳ ಸಂಖ್ಯೆ ಎಷ್ಟು ಮತ್ತು ಉತ್ತೀರ್ಣಗೊಂಡು ವಿವಿಧ ವೃಂದಗಳಿಗೆ ನೇಮಕಾತಿಯಾದ ಅಭ್ಯರ್ಥಿಗಳ ಸಂಖ್ಯೆ ಎಷ್ಟು ; ಹಾಗೂ ಈ ನೇಮಕಾತಿ ಪ್ರಕ್ರಿಯೆಯು ನಿಯಮಾನುಸಾರ ನಡೆದಿರುವುದಿಲ್ಲ ಮತ್ತು ಅಕ್ರಮಗಳುಂಟಾಗಿದೆ ಎಂಬ ಆಪಾದನೆ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಕೈಗೊಂಡ ಕ್ರಮಗಳೇನು ; (ಮಾಹಿತಿ ಒದಗಿಸುವುದು)

(ಈ) ಈ ನೇಮಕಾತಿಗಳು ನಿಯಮಬಾಹಿರ ಮತ್ತು ಅಕ್ರಮಗಳುಂಟಾಗಿವೆ ಎಂಬ ಆಪಾದನೆಯ ಬಗ್ಗೆ ಕೈಗೊಂಡ ಕ್ರಮಗಳು ಅಂತಿಮವಾಗಿ ಫಲಿತಾಂಶವೇನು ಹಾಗೂ ಈ ಅಂತಿಮ ಫಲಿತಾಂಶದ ಆಧಾರದಲ್ಲಿ ಕೈಗೊಂಡ ಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಉ) ಕಲಬುರಗಿ, ಬೀದರ್ ಯಾದಗಿರಿ ಹಾಲು ಒಕ್ಕೂಟದಲ್ಲಿ ೨೦೨೩ನೇ ಸಾಲಿನಲ್ಲಿ ವಿವಿಧ ವೃಂದಗಳಲ್ಲಿ ನೇಮಕಗೊಂಡ ಅಭ್ಯರ್ಥಿಗಳ ವಿದ್ಯಾರ್ಹತೆ ಮತ್ತು ಅನುಭವ ಪ್ರಮಾಣ ಪತ್ರ ಮತ್ತು ನೇಮಕಾತಿಗೆ ಸಂಬಂಧಿಸಿದ ಸಂಪೂರ್ಣ ದಾಖಲಾತಿಗಳನ್ನು ಒದಗಿಸುವುದು ?

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಕ್ರಮ ಮರಳು ಮತ್ತು ಕೆಂಪು ಕಲ್ಲು ಸಾಗಾಟದ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೪೭ (೮೨೭) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಕ್ರಮ ಮರಳು ಮತ್ತು ಕೆಂಪು ಕಲ್ಲು ಸಾಗಾಟಕ್ಕೆ ಸಂಬಂಧಿಸಿದಂತೆ ೨೦೨೩–೨೪, ೨೦೨೪–೨೫ರಲ್ಲಿ ದಾಖಲಾದ ಕೇಸುಗಳೆಷ್ಟು ; ವಸೂಲಿ ಮಾಡಲಾದ ದಂಡ ಎಷ್ಟು ; (ವಿವರ ನೀಡುವುದು)

(ಆ) ಅಕ್ರಮ ಮರಳುಗಾರಿಕೆಯನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮ ಮತ್ತು ಸಕ್ರಮ ಮಾಡಲು ಮುಂದಿರುವ ಯೋಜನೆಗಳಾವುವು ; (ವಿವರ ನೀಡುವುದು)

(ಇ) ಕೆಂಪು ಕಲ್ಲುಗಳನ್ನು ತೆಗೆಯಲು ನೀಡುವ ಪರವಾನಿಗೆ ಯಾವುದು ; ಎಷ್ಟು ಮಂದಿಗೆ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಈವರೆಗೆ ನೀಡಲಾಗಿದೆ ? (ವಿವರ ನೀಡುವುದು)

## ಕರಾವಳಿ ಕರ್ನಾಟಕದಲ್ಲಿ ಇನ್ವೆಸ್ಟರ್ ಮೀಟ್ ನಡೆಸುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೪೮ (೮೨೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರಾವಳಿ ಕರ್ನಾಟಕದಲ್ಲಿ ಇನ್ವೆಸ್ಟರ್ ಮೀಟ್ ನಡೆಸಬೇಕೆಂಬ ಬೇಡಿಕೆ ಸಾರ್ವಜನಿಕರಿಂದ ಇದ್ದು, ಈ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಆ) ಪ್ರವಾಸೋದ್ಯಮ ಮತ್ತು ಕೈಗಾರಿಕೆ, ಐ.ಟಿ.ಬಿ.ಟಿ. ಗಳಲ್ಲಿ ಅವಕಾಶಗಳು ಇದ್ದು, ಈ ಭಾಗದಲ್ಲಿ ಹೂಡಿಕೆದಾರರ ಸಮಾವೇಶ ನಡೆಸಿದ್ದಲ್ಲಿ ಕರಾವಳಿ ಭಾಗದ ಅಭಿವೃದ್ಧಿಗೆ ತುಂಬಾ ಸಹಕಾರಿ ಆಗುವುದೆಂದು ಭಾವಿಸಲಾಗಿದ್ದು, ಈ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದೇ ; (ವಿವರ ನೀಡುವುದು)

(ಇ) ಈ ಜಿಲ್ಲೆಯಲ್ಲಿರುವ ಬೃಹತ್ ಕೈಗಾರಿಕೆಗಳಿಂದ ಸ್ಥಳೀಯರಿಗೆ ಉದ್ಯೋಗ ನೀಡಬೇಕೆಂಬ ಬೇಡಿಕೆಗಳಿದ್ದರೂ ಅದನ್ನು ನೀಡುವಲ್ಲಿ ಕೈಗಾರಿಕೆಗಳು ವಿಫಲವಾಗಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಈ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಭೂಮಿ ಕಳೆದುಕೊಂಡವರಿಗೆ ನೀಡಿದ ಉದ್ಯೋಗಗಳು ಎಷ್ಟು ; ಭೂಮಿ ನೀಡಿದ ಕುಟುಂಬಗಳೆಷ್ಟು ? (ವಿವರ ನೀಡುವುದು)

## ೨೦೨೨-೨೫ರವರೆಗೆ ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನಲ್ಲಿ ರೈಲ್ವೆ ಇಲಾಖೆಯಿಂದ ಕೈಗೊಂಡ ಕಾಮಗಾರಿಗಳು

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೪೯ (೮೨೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೨-೨೩, ೨೦೨೩-೨೪ ಮತ್ತು ೨೦೨೪-೨೫ನೇ ಸಾಲಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನಲ್ಲಿ ರೈಲ್ವೆ ಇಲಾಖೆಯಿಂದ ಕೈಗೊಂಡ ಅಭಿವೃದ್ಧಿ ಕಾಮಗಾರಿಗಳು ಯಾವುವು ; ರಾಜ್ಯ ಸರ್ಕಾರದಿಂದ ವಿನಿಯೋಗಿಸಿದ ಹಣ ಎಷ್ಟು ; ರೈಲ್ವೆ ಇಲಾಖೆಯಿಂದ ಬಿಡುಗಡೆ ಮಾಡಿದ ಹಣ ಎಷ್ಟು ; (ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನ ಮಹಾಕಾಳಿಪಡವು ನಿರ್ಮಿಸಲು ಉದ್ದೇಶಿಸಿದ ಅಂಡರ್ ಪಾಸ್ ಬ್ರಿಡ್ಜ್ ಕಾಮಗಾರಿ ವಿಳಂಬಗೊಳ್ಳಲು ಕಾರಣಗಳೇನು ; ಈ ಕಾಮಗಾರಿ ಎಂದು ಪೂರ್ಣಗೊಳ್ಳಲಿದೆ ; ಕಳೆದ ಎರಡು ವರ್ಷಗಳಿಂದ ಈ ಭಾಗದ ಜನರು ಸ್ಪಂದನೆಗಳಿಗೆ ರೈಲ್ವೆ ಇಲಾಖೆ ಸ್ಪಂದಿಸದೇ ಇರಲು ಕಾರಣವೇನು ;

(ಇ) ಮಂಗಳೂರು ರೈಲ್ವೆ ನಿಲ್ದಾಣವು ಅವ್ಯವಸ್ಥೆಯ ಗೂಡಾಗಿದ್ದು, ಕಳೆದ ಹತ್ತು ವರ್ಷಗಳಿಂದ ಯಾವುದೇ ಪ್ರಗತಿ ಕಾಣದೆ ಪ್ರಯಾಣಿಕರಿಗೆ ಅನಾನುಕೂಲತೆ ಉಂಟಾಗಿರುವುದು ಸರ್ಕಾರ ಗುರುತಿಸಿದೆಯೇ ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ; (ವಿವರ ನೀಡುವುದು)

(ಈ) ಅಡ್ಯಾರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೆಮ್ಮೆಜೂರು ನೀರು ಮಾರ್ಗ ಸಂಪರ್ಕ ರಸ್ತೆಯ ರೈಲ್ವೆ ಲೆವೆಲ್ ಕ್ರಾಸಿಂಗ್ ಓವರ್ ಬ್ರಿಡ್ಜ್ ಸ್ಥಾಪನೆ ಮಾಡಬೇಕೆಂಬ ಪ್ರಸ್ತಾವನೆಯು ಯಾವ ಹಂತದಲ್ಲಿದೆ ; ಇದಕ್ಕೆ ತಗಲುವ ವೆಚ್ಚ ಎಷ್ಟು ? (ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯ ಮೂಲ್ಕಿ ತಾಲ್ಲೂಕಿನ ಬಳ್ಕುಂಜೆ, ಕೊಲ್ಲೂರು ಮತ್ತು ಉಳೆಪಾಡಿ ಗ್ರಾಮಗಳನ್ನು ವಶಪಡಿಸಿಕೊಳ್ಳುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೫೦ (೮೩೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯ ಮೂಲ್ಕಿ ತಾಲೂಕಿನ ಬಳ್ಕುಂಜೆ, ಕೊಲ್ಲೂರು ಮತ್ತು ಉಳೆಪಾಡಿ ಗ್ರಾಮಗಳ ೧೯ ೧ ಎಕರೆ ಜಮೀನಿನಲ್ಲಿ ಕೈಗಾರಿಕೆ ಪ್ರದೇಶಗಳಿಗಾಗಿ ಸ್ವಾಧೀನ ಪಡಿಸಿಕೊಳ್ಳಲು ಕೆ. ಐ. ಎ. ಡಿ. ಬಿ. ಯ ಪ್ರಕ್ರಿಯೆ ಲ್ಯಾಂಡ್ ಮಾಫಿಗಳು ಮತ್ತು ಬ್ರೋಕರ್ಗಳ ಉದ್ದೇಶಕ್ಕಾಗಿ ಭೂಮಿ ವಶಪಡಿಸಿಕೊಳ್ಳಲಾಗುತ್ತದೆ ಎಂಬ ದೂರುಗಳಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಆ) ೨೦೧೭ರಲ್ಲಿ ಮುಲ್ಕಿ ತಾಲೂಕಿನ ಕರ್ನಿರೆ, ಅತಿಕಾರಿ ಬೆಟ್ಟು, ತೆಂಕ ಎಕ್ಕಾರು ಗ್ರಾಮಗಳನ್ನು ಸ್ವಾಧೀನಪಡಿಸಿಕೊಳ್ಳಲು ನಿರ್ಧಾರ ಕ್ರಮ ಕೈಗೊಳ್ಳಲಾಗಿದ್ದು, ತದನಂತರ ಈ ಗ್ರಾಮಗಳನ್ನು ಬದಲಾವಣೆ ಮಾಡಲು ಕಾರಣವೇನು ; (ವಿವರ ನೀಡುವುದು)

(ಇ) ಪ್ರಸ್ತುತ ಸ್ವಾಧೀನಪಡಿಸಿಕೊಳ್ಳಲು ಉದ್ದೇಶಿಸಿರುವ ಭೂಮಿಗಳು ಕೃಷಿ ಭೂಮಿಗಳಾಗಿದ್ದು, ಸಣ್ಣ ಹಿಡುವಳಿದಾರರು ಮತ್ತು ಪ್ರಸ್ತುತ ಸ್ಥಳವು ಕೈಗಾರಿಕೆ ನಡೆಸಲು ಮೂಲಭೂತ ಸೌಕರ್ಯ ಇಲ್ಲದೆ ಗುಡ್ಡ ಪ್ರದೇಶಗಳಾಗಿದ್ದು, ಈ ಸ್ಥಳವು ಕೈಗಾರಿಕೆ ಸ್ಥಾಪಿಸಲು ಅಸಾಧ್ಯ ಪರಿಸ್ಥಿತಿ ಇದ್ದು, ಸದರಿ ಪ್ರದೇಶಗಳನ್ನು ವಶಪಡಿಸಿಕೊಳ್ಳಲು ಸರ್ಕಾರದ ನಿಲುವೇನು ;

(ಈ) ಸದರಿ ಪ್ರದೇಶಗಳಿಗೆ ಇಲಾಖೆಯು ಭೇಟಿ ನೀಡಿ, ಸ್ಥಳೀಯರ ಜನರೊಂದಿಗೆ ಮಾತುಕತೆ ನಡೆಸಲಾಗಿದೆಯೇ ; ಸಂಗ್ರಹಿಸಿದ ಮಾಹಿತಿ ಏನು ; (ವಿವರ ನೀಡುವುದು) ಯಾವ ಕಾರಣಕ್ಕಾಗಿ ಬಳ್ಕುಂಜೆ, ಕೊಲ್ಲೂರು ಮತ್ತು ಉಳೆಪಾಡಿ ಭೂಮಿಯನ್ನು ವಶಪಡಿಸಿಕೊಳ್ಳಲು ತೀರ್ಮಾನಿಸಲಾಗಿದೆ ; ಮಂಗಳೂರು ತಾಲ್ಲೂಕು ಮುಡುಪಿನಲ್ಲಿ ಸ್ವಾಧೀನಪಡಿಸಿದ ೩೦೦ ಎಕರೆ ಭೂಮಿ ನಿರುಪಯುಕ್ತ ಆಗಿ ಬಳಕೆ ಆಗದೇ ಸರ್ಕಾರದ ಬೊಕ್ಕಸಕ್ಕೆ ಉಂಟಾದ ನಷ್ಟ ಎಷ್ಟು; ಬಳ್ಕುಂಚೆ, ಕೊಲ್ಲೂರು ಮತ್ತು ಉಳೆಪಾಡಿ ಗ್ರಾಮಗಳಲ್ಲಿ ಮಾಡಲು ಉದ್ದೇಶಿಸಲು ಕಾರಣವೇನು ? (ವಿವರ ನೀಡುವುದು)

## ಕಲಬರಗಿಯಲ್ಲಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಹೈಟೆಕ್ ಫ್ಲೈಓವರ್ ನಿರ್ಮಾಣದ ಬಗ್ಗೆ

**ಶ್ರೀ ಜಗದೇವ್ ಗುತ್ತೇದಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೫೧ (೮೦೧) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ದಿನೇ ದಿನೇ ಜನದಟ್ಟಣೆ ಹೆಚ್ಚುತ್ತಿರುವ ಕಾರಣದಿಂದ ಇದರ ನಿಯಂತ್ರಣಕ್ಕಾಗಿ ಹಾಗೂ ಅಪಘಾತಗಳನ್ನು ತಪ್ಪಿಸಲು ಹೈಟೆಕ್ ಫ್ಲೈ–ಓವರ್ ನಿರ್ಮಾಣ ಮಾಡುವ ಯೋಜನೆ ಸರ್ಕಾರದ ಮುಂದೆ ಇದೆಯೇ ;

(ಆ) ಇದ್ದರೆ, ಹೈಟೆಕ್ ಫ್ಲೈಓವರ್ ಕಾರ್ಯ ಯಾವಾಗ ಪ್ರಾರಂಭಿಸಲಾಗುವುದು ಹಾಗೂ ಯಾವಾಗ ಮುಕ್ತಾಯಗೊಳಿಸಲಾಗುವುದು ;

(ಇ) ಕಲಬುರಗಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಿರ್ಮಾಣಗೊಳ್ಳಲಿರುವ ಹೈಟೆಕ್ ಫ್ಲೈ–ಓವರ್ ನಿರ್ಮಾಣಕ್ಕೆ ತಗಲುವ ವೆಚ್ಚವೆಷ್ಟು ಹಾಗೂ ಇದುವರೆಗೆ ಅದಕ್ಕೆ ಮೀಸಲಾಗಿಟ್ಟಿರುವ ಮೊತ್ತವೆಷ್ಟು ;

(ಈ) ಹೈಟೆಕ್ ಫ್ಲೈ–ಓವರ್ ನಿರ್ಮಾಣದ ವಿಳಂಬಕ್ಕೆ ಕಾರಣವೇನು ; ಹಾಗೂ ಅದಕ್ಕೆ ಕೈಗೊಂಡಿರುವ ಪರಿಹಾರವೇನು ?

## ಬೆಂಗಳೂರಿನಲ್ಲಿ ೨ನೇ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಬಗ್ಗೆ

**ಶ್ರೀ ಟಿ.ಎನ್ ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೫೨ (೭೯೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜಧಾನಿ ಬೆಂಗಳೂರಿಗೆ ೨ನೇ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣ ಸಂಬಂಧ ಅಂತಿಮವಾಗಿ ಯಾವ ಸ್ಥಳವನ್ನು ಗುರುತಿಸಲಾಗಿದೆ ; (ವಿವರ ನೀಡುವುದು)

(ಆ) ಈ ವಿಮಾನ ನಿಲ್ದಾಣವನ್ನು ನಿರ್ಮಾಣ ಮಾಡುವ ಸಲುವಾಗಿ ಆಯ್ಕೆ ಮಾಡಿರುವ ಸ್ಥಳವನ್ನು ಭಾರತೀಯ ವಿಮಾನಯಾನ ಪ್ರಾಧಿಕಾರದವರು ಸ್ಥಳ ಪರಿಶೀಲನೆ ಮಾಡಿದ್ದಾರೆಯೇ ; (ವಿವರ ನೀಡುವುದು)

(ಇ) ಸರ್ಕಾರ ೩–೪ ಸ್ಥಳಗಳನ್ನು ಆಯ್ಕೆ ಮಾಡಿಕೊಂಡಿರುವುದರಿಂದ ಆ ಭಾಗದ ರೈತರು ಗೊಂದಲದಲ್ಲಿ ಇದ್ದು, ಅವರ ಜಮೀನುಗಳಲ್ಲಿ ವ್ಯವಸಾಯ ಮಾಡದೆ ಜಮೀನುಗಳಲ್ಲಿ ಅಭಿವೃದ್ದಿ ಕಾರ್ಯ ಚಟುವಟಿಕೆಗಳನ್ನು ಮಾಡದೆ ಇರುವುದರಿಂದ ರೈತರಿಗೆ ತೊಂದರೆಯಾಗುವುದಿಲ್ಲವೆ ? (ಅಂತಿಮ ಸ್ಥಳದ ಬಗ್ಗೆ ಸ್ಪಷ್ಟತೆ ನೀಡುವುದು)

## ಮಂಗಳೂರು ವಿಮಾನ ನಿಲ್ದಾಣ ರನ್ ವೇ ವಿಸ್ತರಣೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೫೩ (೮೭೩) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ 'ಸೇಫ್ಟೀ ಬೇಸಿಕ್ ಸ್ಟ್ರಿಪ್' ನಿರ್ಮಾಣ ಮಾಡುವ ಪ್ರಸ್ತಾವನೆ ಯಾವ ಹಂತದಲ್ಲಿದೆ ;

(ಆ) ವಿಮಾನ ನಿಲ್ದಾಣದ ರನ್ ವೇ ವಿಸ್ತರಣೆಗೆ ಎಷ್ಟು ಭೂಮಿ ಸ್ವಾಧೀನ ಪಡಿಸಬೇಕಾಗಿದೆ ; ಭೂಮಿ ಸ್ವಾಧೀನ ಪ್ರಕ್ರಿಯೆ ಯಾವ ಹಂತದಲ್ಲಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ರನ್ ವೇ ವಿಸ್ತರಣೆ ಮತ್ತು 'ಸೇಫ್ಟೀ ಬೇಸಿಕ್ ಸ್ಟ್ರಿಪ್' ಕಾರ್ಯಗಳಿಗೆ ವೆಚ್ಚವಾಗುವ ಅನುದಾನ ಎಷ್ಟು ; ಎಷ್ಟು ಅನುದಾನವನ್ನು ಈವರೆಗೆ ವೆಚ್ಚ ಮಾಡಲಾಗಿದೆ ;

(ಈ) ಸದರಿ ಕಾಮಗಾರಿಗಳನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ?

## ಬೆಳೆ ಸಮೀಕ್ಷೆ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೫೪ (೮೭೪) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೪–೨೫ನೇ ಸಾಲಿನಲ್ಲಿ ಬೆಳೆ ಸಮೀಕ್ಷೆ ಮಾಡದ ರೈತರಿಗೆ ಈ ವರ್ಷ ಹವಾಮಾನ ಆಧಾರಿತ ಬೆಳೆ ವಿಮೆ ಪರಿಹಾರಕ್ಕೆ ನೋಂದಣಿ ಮಾಡಿ ಪ್ರಿಮಿಯಮ್ ಹಣ ಪಾವತಿಸಲು ಅವಕಾಶ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಪ್ರಸಕ್ತ ಸಾಲಿನಲ್ಲಿ ನೋಂದಣಿ ಮಾಡಿ ಪ್ರಿಮಿಯಂ ಕಟ್ಟಲು ಅವಕಾಶ ಇಲ್ಲದೆ ಕರಾವಳಿ ಜಿಲ್ಲೆಗಳ ಸಾವಿರಾರು ರೈತರು ಯೋಜನೆ ಸೌಲಭ್ಯ ಪಡೆಯಲು ವಂಚಿತರಾಗಿರುವುದರಿಂದ ಸಮಸ್ಯೆ ಪರಿಹಾರಕ್ಕೆ ಸರ್ಕಾರ ಕೈಗೊಂಡಿರುವ ಕ್ರಮವೇನು ;

(ಇ) ಕಳೆದ ಸಾಲಿನಲ್ಲಿ ಬೆಳೆ ಸಮೀಕ್ಷೆ ಮಾಡದ ರೈತರಿಗೂ ೨೦೨೫–೨೬ನೇ ಸಾಲಿನಲ್ಲಿ ಹವಾಮಾನ ಆಧಾರಿತ ಬೆಳೆ ವಿಮೆಗೆ ಪ್ರಿಮಿಯಂ ಕಟ್ಟಲು ಅವಕಾಶ ಮಾಡಿಕೊಡುವ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು ;

(ಈ) ಬೆಳೆ ವಿಮೆ ಪ್ರಿಮಿಯಂ ಕಟ್ಟುವ ಅವಧಿಯನ್ನು ಇನ್ನೂ ಒಂದು ತಿಂಗಳು ವಿಸ್ತರಿಸುವ ಬಗ್ಗೆ ಕ್ರಮ ಕೈಗೊಳ್ಳಲಾವುದೇ ?

## ಪುತ್ತೂರು ನಗರಸಭೆಯ ಅಭಿವೃದ್ಧಿ

**ಶ್ರೀ ಕಿಶೋರ್ ಕುಮಾರ್ ಪುತ್ತೂರು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೫೫ (೮೭೫) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ನಗರಸಭೆಗೆ ಕಳೆದ ೨ ವರ್ಷಗಳಲ್ಲಿ ಎಷ್ಟು ಅನುದಾನ ಮಂಜೂರುಗೊಂಡಿದೆ ; ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; ಯಾವೆಲ್ಲ ಅಭಿವೃದ್ಧಿ ಕಾರ್ಯಗಳನ್ನು ಮಾಡಲಾಗಿದೆ ವಿವರ ನೀಡುವುದು ; ಎಷ್ಟು ಅನುದಾನ ಖರ್ಚಾಗಿದೆ ;

(ಆ) ೨೦೨೫–೨೬ನೇ ಸಾಲಿನಲ್ಲಿ ಸದರಿ ನಗರಸಭೆಗೆ ಎಷ್ಟು ಅನುದಾನ ಮೀಸಲಿಡಲಾಗಿದೆ ;

(ಇ) ನಗರಸಭೆ ವ್ಯಾಪ್ತಿಯ ರಸ್ತೆಗಳು ತೀರಾ ಹದೆಗಟ್ಟಿದ್ದು ೨೦೨೫–೨೬ನೇ ಸಾಲಿನ ಆರ್ಥಿಕ ವರ್ಷದಲ್ಲಿ ಸದರಿ ರಸ್ತೆಗಳ ಅಭಿವೃದ್ಧಿ ಕಾರ್ಯಗಳಿಗೆ ಎಷ್ಟು ಅನುದಾನ ಮೀಸಲಿಡಲಾಗಿದೆ ; ಯಾವೆಲ್ಲಾ ರಸ್ತೆಗಳ ಅಭಿವೃದ್ಧಿಗೆ ಕ್ರಿಯಾ ಯೋಜನೆ ರೂಪಿಸಲಾಗಿದೆ ;

(ಈ) ಪುತ್ತೂರು ನಗರಸಭೆಯ ೨೦೨೨–೨೩ರ ಸಾಲಿನ ಮುಖ್ಯಮಂತ್ರಿಗಳ ಅಮೃತ ನಗರೋಸ್ಥಾನ ಯೋಜನೆಯಡಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಹಾಗೂ ವಿಕಲಚೇತನ ಫಲಾನುಭವಿಗಳಿಗೆ ಸಹಾಯಧನ ಪಾವತಿಸಲು ಮೀಸಲಿಟ್ಟ ಅನುದಾನವನ್ನು ಯಾವ ಕಾಲಮಿತಿಯೊಳಗಡೆ ಬಿಡುಗಡೆ ಮಾಡಲಾಗುವುದು ?

## ರಾಜ್ಯದಲ್ಲಿರುವ ಹಾಲು ಉತ್ಪಾದಕರ ಒಕ್ಕೂಟಗಳ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೫೬ (೮೩೩) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಹಾಲು ಉತ್ಪಾದಕರ ಒಕ್ಕೂಟಗಳೆಷ್ಟು ಹಾಲು ಉತ್ಪಾದಕರ ಸಹಕಾರ ಸಂಘಗಳು ಎಷ್ಟಿವೆ ; ಎಷ್ಟು ಜನ ನೊಂದಾಯಿತ ಹಾಲು ಉತ್ಪಾದಕರಿದ್ದಾರೆ ; ದಿನಂಪ್ರತಿ ಎಷ್ಟು ಜನ ರೈತರು ಹಾಲು ಸರಬರಾಜು ಮಾಡುತ್ತಿದ್ದಾರೆ; ಹಾಲಿನ ಪ್ರೋತ್ಸಾಹಧನವನ್ನು ಪಡೆಯುತ್ತಿರುವ ರೈತರ ಸಂಖ್ಯೆ ಎಷ್ಟು ; ಸಾಮಾನ್ಯ, ಪರಿಶಿಷ್ಟ ಜಾತಿ ಮತ್ತು ಪಂಗಡಗಳ ರೈತರ ಸಂಖ್ಯೆ ಎಷ್ಟಿದೆ ;

(ಆ) ಹೈನುಗಾರಿಕೆ ನಡೆಸುವ ರೈತರಿಗೆ ಅನೂಕೂಲವಾಗುವ ಉದ್ದೇಶದಿಂದ ಕ್ಷೀರಧಾರೆ ಯೋಜನೆಯಡಿ ಪ್ರತಿ ಲೀಟರ್ ಹಾಲಿಗೆ ಎಷ್ಟು ಪ್ರೋತ್ಸಾಹಧನವನ್ನು ನೀಡಲಾಗುತ್ತಿದೆ ; ೨೦೨೩–ಏಪ್ರಿಲ್ ತಿಂಗಳಿನಿಂದ ೨೦೨೫–ಜುಲೈ ತಿಂಗಳ ಅಂತ್ಯದವರೆಗೆ ಎಷ್ಟು ಮೊತ್ತವನ್ನು ರೈತರಿಗೆ ಪ್ರೋತ್ಸಾಹಧನದ ಯೋಜನೆಯಡಿ ಪಾವತಿ ಮಾಡಲಾಗಿದೆ ; ಪ್ರೋತ್ಸಾಹಧನವನ್ನು ಪಾವತಿ ಮಾಡದೇ ಬಾಕಿ ಉಳಿಸಿಕೊಂಡಿರುವ ಮೊತ್ತವೆಷ್ಟು ; ಯಾವ ಕಾರಣಕ್ಕಾಗಿ ಬಾಕಿ ಉಳಿಸಿಕೊಳ್ಳಲಾಗಿದೆ ; ಬಾಕಿ ಮೊತ್ತವನ್ನು ಪಾವತಿಸಲು ತೆಗೆದುಕೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

(ಇ) ರೈತರಿಂದ ಸಂಗ್ರಹಿಸಿದ ಹಾಲು ನಂದಿನಿ ಹಾಗೂ ಇತರೆ ಜಿಲ್ಲಾ ಮಟ್ಟದ ಸಹಕಾರಿ ಹಾಲು ಮಾರಾಟ ಮಂಡಳಿ ಮೂಲಕ ವಿತರಣೆ ಹಾಗೂ ಮಾರಾಟವಾಗುತ್ತಿದ್ದು, ದಿನಂಪ್ರತಿ ಜನರು ಹಣವನ್ನು ನೀಡಿ ಖರೀದಿಸುತ್ತಿರುವ ಹಾಗೂ ಹಾಲಿನ ಇತರೆ ಉತ್ಪನ್ನಗಳ ಮಾರಾಟದಿಂದ ಅಪಾರವಾಗಿ ಹಣ ಸಂಗ್ರಹವಾಗುತ್ತಿದೆ ಮಾರಾಟ ಮಾಡುವಾಗ ಹೆಚ್ಚಿನ ದರದಲ್ಲಿ ಮಾರಾಟವಾಗುತ್ತಿದ್ದು ಹಾಲಿನ ಪ್ರೋತ್ಸಾಹಧನವನ್ನು ರೈತರಿಗೆ ನಿಗದಿತ ಸಮಯದಲ್ಲಿ ನೀಡಲು ಸರ್ಕಾರಕ್ಕಿರುವ ತೊಂದರೆಯೇನು ;

(ಈ) ಪ್ರೋತ್ಸಾಹ ಧನ ನೀಡುವ ಪ್ರಕ್ರಿಯೆಯು ಕೊಲಮೊಮ್ಮೆ ವರ್ಷಗಟ್ಟಲೆ ತೆಗೆದುಕೊಳ್ಳುತ್ತಿರುವುದರಿಂದ ರೈತರನ್ನು ಆರ್ಥಿಕವಾಗಿ ಕುಂದಿಸಿದಂತೆ ಅಗುವುದಿಲ್ಲವೇ ? (ಸಂಪೂರ್ಣ ಮಾಹಿತಿ ನೀಡುವುದು)

## ಮಹಾನಗರ ಪಾಲಿಕೆಗಳಿಗೆ ಬಿಡುಗಡೆಯಾದ ಅನುದಾನ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೫೭ (೮೩೪) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ३ ವರ್ಷಗಳಿಂದ ರಾಜ್ಯದ ಮಹಾನಗರದ ಪಾಲಿಕೆಗಳಿಗೆ ಒದಗಿಸಲಾದ ಅನುದಾನ ಎಷ್ಟು ; ಈ ಪೈಕಿ ಬಿಡುಗಡೆಯಾದ/ ಬಿಡುಗಡೆಗೆ ಬಾಕಿ ಇರುವ ಅನುದಾನ ಎಷ್ಟು ; ಯಾವ ಯಾವ ಯೋಜನೆಯಡಿಯಲ್ಲಿ ಅನುದಾನ ಬಿಡುಗಡೆ ಮಾಡಲಾಗಿದೆ ; (ಯೋಜನೆವಾರು ಹಾಗೂ ಮಹಾನಗರ ಪಾಲಿಕೆವಾರು ವಿವರ ಒದಗಿಸುವುದು)

(ಆ) ರಾಜ್ಯದ ಮಹಾನಗರ ಪಾಲಿಕೆಗಳಿಗೆ ಮೀಸಲಿಟ್ಟ ಅನುದಾನದಲ್ಲಿ ಬಳಕೆಯಾದ ಅನುದಾನ ಎಷ್ಟು ; (ವರ್ಷವಾರು ಮಹಾನಗರ ಪಾಲಿಕೆವಾರು ವಿವರ ಒದಗಿಸುವುದು)

(ಇ) ಬಿಡುಗಡೆಗೆ ಬಾಕಿ ಉಳಿದ ಅನುದಾನವನ್ನು ಯಾವ ಕಾಲಮಿತಿಯೊಳಗೆ ಬಿಡುಗಡೆಗೊಳಿಸಲಾಗುವುದು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಕ್ಷೀರಭಾಗ್ಯ ಯೋಜನೆಯ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೫೮ (೮೩೫) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ಕತ ಸಾಲಿನಲ್ಲಿ ಕಲಬುರಗಿ–ಬೀದರ್ ಹಾಗೂ ಯಾದಗಿರಿ ಹಾಲು ಒಕ್ಕೂಟದಲ್ಲಿ ಕ್ಷೀರಭಾಗ್ಯ ಯೋಜನೆಯ ಹಾಲಿನ ಪುಡಿ ಸರಬರಾಜು ಟೆಂಡರ್ ನಡೆದಿದೆಯೇ ; ಹೌದಾದರೆ ಅದರಲ್ಲಿನ ಷರತ್ತುಗಳೂ ಮತ್ತು ಟೆಂಡರ್‌ನಲ್ಲಿ ಭಾಗವಹಿಸಿದ ಟೆಂಡರ್‌ದಾರರ ಸಂಪೂರ್ಣ ವಿವರಗಳನ್ನು ಒದಗಿಸುವುದು ;

(ಆ) ಟೆಂಡರ್ ಆಖೈರುಗೊಂಡಿದ್ದಲ್ಲಿ ಪ್ರತೀ ಶಾಲೆಗೆ ಹಾಲಿನ ಪುಡಿ ಸರಬರಾಜು ಮಾಡಲಾಗುತ್ತಿದೆಯೇ ; ಹೌದಾದಲ್ಲಿ ಪ್ಯಾಕಿಂಗ್ ಘಟಕದಿಂದ ಸಿ.ಡಿ.ಪಿ.ಓ ಕೇಂದ್ರಗಳಿಗೆ ಒದಗಿಸಿದಂತಹ ಪ್ರತಿಯೊಂದು ದಾಖಲಾತಿಗಳನ್ನು ಪ್ರತ್ಯೇಕವಾಗಿ ನೀಡುವುದು ;

(ಇ) ಟೆಂಡರ್ ಅಂತಿಮಗೊಂಡಿದ್ದಲ್ಲಿ ಟೆಂಡರ್ ಷರತ್ತುಗಳನ್ನು ಶಿಫಾರಸ್ಸು ಮಾಡಿದ ಸಮಿತಿಯ ಶಿಫಾರಸ್ಸು ಪತ್ರ ಟೆಂಡರ್‌ನಲ್ಲಿ ಯಶಸ್ವಿಗೊಂಡ ಮತ್ತು ಯಶಸ್ವಿಗೊಳ್ಳದ ಟೆಂಡರ್‌ದಾರರು ನೀಡುವ ಟೆಂಡರ್‌ದಾರರನ್ನು ಅಂಗೀಕರಿಸದಿರಲು ಕಾರಣಗಳೇನು ; (ವಿವರ ಒದಗಿಸುವುದು)

(ಈ) ಯಶಸ್ವಿ ಟೆಂಡರ್‌ದಾರರಿಗೆ ಕಾರ್ಯಾದೇಶ ನೀಡುವ ಪೂರ್ವದಲ್ಲಿ ಸಕ್ಷಮ ಸಮಿತಿಯ ತಾಂತ್ರಿಕ ವಾಣಿಜ್ಯ ಟೆಂಡರ್ ಪರಿಶೀಲನಾ ಸಮಿತಿಯ ರಚನೆ ಆದೇಶ ಹಾಗೂ ಸಮಿತಿಯ ಸದಸ್ಯರ ಶಿಫಾರಸ್ಸನ್ನು ಸಂಬಂಧಿಸಿದ ಅಧಿಕಾರಿ ಶಿಫಾರಸ್ಸು ಮಾಡಿರುವರೇ ; (ಹೌದಾದಲ್ಲಿ ಅವರ ಹೆಸರು ಮತ್ತು ಹುದ್ದೆಯ ಮಾಹಿತಿ ನೀಡುವುದು)

(ಉ) ಟೆಂಡರ್ ಅಧಿಸೂಚನೆಯಲ್ಲಿ ಪ್ರತಿ ತಾಲ್ಲೂಕಿಗೆ ಮುಂಗಡ ಠೇವಣಿ ಮತ್ತು ಭದ್ರತಾ ಠೇವಣಿಯ ಮೊತ್ತವನ್ನು ನೀಡಬೇಕೆಂದು ನಿರ್ಬಂದಿಸಲಾಗಿದೆಯೇ ; ಹೌದಾದಲ್ಲಿ ಆ ರೀತಿ ನಿರ್ಬಂಧಿಸಿರುವ

ವಿವರಗಳು ಮತ್ತು ನಗದು ರೂಪದಲ್ಲಿ ನೀಡಿದ್ದಲ್ಲಿ ರಶೀದಿಯ ಸಂಖ್ಯೆ ಮತ್ತು ದಿನಾಂಕಗಳ ಸಂಪೂರ್ಣ ವಿವರಗಳನ್ನು ಒದಗಿಸುವುದು ;

(ಊ) ೨೦೨೫ರ ಜೂನ್ ಮತ್ತು ಜುಲೈ ಮಾಹೆಯಲ್ಲಿ ಕಾರ್ಯಾದೇಶ ಪಡೆದ ಯಶಸ್ವಿ ಟೆಂಡರ್‌ದಾರರು ಸರಬರಾಜು ಮಾಡಿದ ಹಾಲಿನ ಪುಡಿ ದಾಸ್ತಾನು ಮತ್ತು ಟೆಂಡರ್‌ದಾರರು ಶಾಲೆ ಮತ್ತು ಅಂಗನವಾಡಿ ಕೇಂದ್ರಗಳಿಗೆ ಸರಬರಾಜು ಮಾಡಿರುವ ಬಗ್ಗೆ ಸ್ವೀಕೃತಿ ದೃಢೀಕರಣ ಪ್ರತಿಗಳನ್ನು ಹಾಗೂ ದಾಸ್ತಾನು ವಿವರಗಳನ್ನು ಒದಗಿಸುವುದು ?

## ಡಿ.ಸಿ.ಸಿ. ಬ್ಯಾಂಕ್ ಮೂಲಕ ಸಾಲ ನೀಡುವ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೫೯ (೮೩೬) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಡಿ.ಸಿ.ಸಿ ಬ್ಯಾಂಕ್ ಮೂಲಕ ರೈತರಿಗೆ ೫ ಲಕ್ಷದವರೆಗೆ ಸಾಲ ಒದಗಿಸಲಾಗುವುದೆಂದು ಘೋಷಣೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಸದರಿ ಬ್ಯಾಂಕ್ ನಿಂದ ರೈತರಿಗೆ ೫ ಲಕ್ಷದವರೆಗೆ ಸಾಲ ಒದಗಿಸಲು ಇರುವ ಮಾನದಂಡಗಳೇನು ; ಹಾಗಿದ್ದರೆ ಸದರಿ ಬ್ಯಾಂಕಿನಿಂದ ಎಷ್ಟು ರೈತರಿಗೆ ೫ ಲಕ್ಷ ಸಾಲ ಒದಗಿಸಲಾಗಿದೆ ಎಷ್ಟು ರೈತರು ಸಾಲ ಕೋರಿ ಅರ್ಜಿ ಸಲ್ಲಿಸಿದ್ದಾರೆ ; (ಜಿಲ್ಲಾವಾರು ಹಾಗೂ ರೈತರ ಸಂಪೂರ್ಣ ವಿವರ ಒದಗಿಸುವುದು)

(ಇ) ಸಾಲ ಒದಗಿಸದ್ದಿದ್ದಲ್ಲಿ ಯಾವ ಕಾಲಮಿತಿಗಳಿಗೆ ರೈತರಿಗೆ ಸಾಲ ಒದಗಿಸಲಾಗುವುದು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ತಿರುಮಲಕ್ಕೆ ಪೂರೈಕೆ ಆಗುತ್ತಿರುವ ನಂದಿನಿ ತುಪ್ಪ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೭೬೦ (೮೪೪) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿ.,, (ಮನ್‌ಮುಲ್) ವ್ಯಾಪ್ತಿಯಲ್ಲಿರುವ ಸಂಘಗಳು ಉತ್ಪಾದಕರ ಸಂಖ್ಯೆ ಎಷ್ಟು ಹಾಗೂ ಪ್ರತಿದಿನ ತಾಲ್ಲೂಕಿನಿಂದ ಎಷ್ಟು ಪ್ರಮಾಣದ ಹಾಲು ಪೂರೈಕೆ ಆಗುತ್ತದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) 'ಮನ್‌ಮುಲ್' ನಂದಿನಿ ಹಾಲು ಮತ್ತು ನಂದಿನಿ ತುಪ್ಪವನ್ನು ಯಾವ ಯಾವ ರಾಜ್ಯಗಳಿಗೆ ಪೂರೈಸಲಾಗುತ್ತಿದೆ ;

(ಇ) ಈ ರಾಜ್ಯಗಳಿಗೆ ಯಾವಾಗನಿಂದ ಹಾಲು ಪೂರೈಸಲಾಗುತ್ತಿದೆ ಆರಂಭದಲ್ಲಿ ಪ್ರತಿದಿನ ಪೂರೈಸುತ್ತಿದ್ದ ಹಾಲಿನ ಪ್ರಮಾಣ ಎಷ್ಟು ; ಈಗ ಪ್ರತಿ ದಿನಕ್ಕೆ ಪೂರೈಕೆ ಮಾಡುತ್ತಿರುವ ಹಾಲಿನ ಪ್ರಮಾಣ ಎಷ್ಟು ; (ವಿವರ ನೀಡುವುದು)

(ಈ) ಮಂಡ್ಯ ಸೇರಿದಂತೆ ರಾಜ್ಯದ ಎಲ್ಲಾ ವಿವಿಧ ಹಾಲು ಒಕ್ಕೂಟಗಳಿಂದ ತಿರುಮಲಕ್ಕೆ ಪೂರೈಕೆ ಆಗುತ್ತಿರುವ ನಂದಿನಿ ತುಪ್ಪದ ಪ್ರಮಾಣ ಎಷ್ಟು ; (ಹಾಲು ಒಕ್ಕೂಟವಾರು ಮಾಹಿತಿ ನೀಡುವುದು) ಹಾಗೂ ಎಷ್ಟು ಅವಧಿಗೆ ಒಪ್ಪಂದ ಮಾಡಿಕೊಳ್ಳಲಾಗಿದೆ ;

(ಉ) ಮನ್‌ಮುಲ್‌ನಿಂದ ಹಾಲು ಮತ್ತು ತುಪ್ಪ ಹೊರತುಪಡಿಸಿ ಇತರೆ ರಾಜ್ಯಗಳಿಗೆ ಪೊರೈಸಲಾಗುತ್ತಿರುವ ತುಪ್ಪ ಉತ್ಪನ್ನಗಳು ಯಾವುವು ; ಕಳೆದ ಮೂರು ವರ್ಷಗಳ ಉತ್ಪಾದನೆ ವಹಿವಾಟು ಮತ್ತು ಇವುಗಳ ಲಾಭ ಎಷ್ಟು ? (ಮಾಹಿತಿ ನೀಡುವುದು)

## ಕಿಸಾನ್–ಮಾಲ್‌ಗಳ ಸ್ಥಾಪನೆ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೭೬೧ (೮೪೫) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೪– ೨೫ರ ಆಯವ್ಯಯದಲ್ಲಿ ಘೋಷಣೆ ಮಾಡಿದಂತೆ ರಾಜ್ಯದಲ್ಲಿ ತೋಟಗಾರಿಕೆ ಬೆಳೆಗಳಿಗೆ ಸಂಬಂಧಿಸಿದಂತೆ "ಕಿಸಾನ್ ಮಾಲ್" ಗಳನ್ನು ತೆರೆಯಲಾಗಿದೆಯೇ ; ಎಲ್ಲೆಲ್ಲಿ ಕಾರ್ಯಾರಂಭ ಮಾಡಿವೆ ; (ವಿವರ ನೀಡುವುದು)

(ಆ) ಕಿಸಾನ್ ಮಾಲ್‌ಗಳ ಉದ್ದೇಶವೇನು ; ರೈತ ಉತ್ಪಾದಕ ಸಂಸ್ಥೆಗಳ (ಎಫ್ ಪಿ ಒ) ಸಹಭಾಗಿತ್ವದಲ್ಲಿ ಈ ಯೋಜನೆಯನ್ನು ಅನುಷ್ಠಾನ ಪಡಿಸಲಾಗುತ್ತಿದೆಯೇ ; ಹಾಗಿದ್ದರೆ ಸ್ಥಳೀಯವಾಗಿ ಗುರುತಿಸಿರುವ ಎಫ್‌ಪಿಒಗಳು ಯಾವವು ; (ವಿವರ ನೀಡುವುದು)

(ಇ) ಪ್ರತಿ ಕಿಸಾನ್ ಮಾಲ್‌ಗಳನ್ನು ತೆರೆಯಲು ಒದಗಿಸಲಾಗಿರುವ ಅನುದಾನ ಎಷ್ಟು ; ಈ ಅನುದಾನವನ್ನು ಯಾವ್ಯಾವ ವೆಚ್ಚಗಳಿಗೆ ಭರಿಸಲಾಗುತ್ತದೆ ; (ವಿವರ ನೀಡುವುದು)

(ಈ) ತೋಟಗಾರಿಕೆ ಬೆಳೆಗಾರರಿಗೆ ಅನುಕೂಲ ಮಾಡಿಕೊಡುವ ದೃಷ್ಟಿಯಿಂದ ರಾಜ್ಯದಾದ್ಯಂತ ಕಿಸಾನ್ ಮಾಲ್‌ಗಳನ್ನು ತೆರೆಯಲು ಸರ್ಕಾರ ಉದ್ದೇಶಿಸಿದೆಯೇ ; ಹಾಗಿದ್ದಲ್ಲಿ ಎಲ್ಲೆಲ್ಲಿ ತೆರೆಯಲಾಗಿದೆ ? (ವಿವರ ನೀಡುವುದು)

## ನಂದಿನಿ ಬ್ರ್ಯಾಂಡ್ ಉತ್ಪನ್ನಗಳ ಮಾರುಕಟ್ಟೆ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೭೬೨ (೮೪೭) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಸಹಕಾರ ಹಾಲು ಉತ್ಪಾದಕರ ಮಹಾಮಂಡಳಿ ಪ್ರಸ್ತುತ 'ನಂದಿನಿ' ಬ್ರ್ಯಾಂಡ್‌ನ ಎಷ್ಟು ಉತ್ಪನ್ನಗಳನ್ನು ಮಾರುಕಟ್ಟೆಗೆ ಬಿಡುಗಡೆ ಮಾಡಿದೆ ಹಾಗೂ ಹೊಸದಾಗಿ ಯಾವುದಾದರೂ ಉತ್ಪನ್ನಗಳನ್ನು ಮಾರುಕಟ್ಟೆಗೆ ಬಿಡುಗಡೆ ಮಾಡಲು ಯೋಜಿಸಿದೆಯೇ ;

(ಆ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ಮಹಾಮಂಡಳಿಯು 'ನಂದಿನಿ' ಬ್ರ್ಯಾಂಡ್‌ನ ಉತ್ಪನ್ನಗಳ (ಹಾಲು ಮತ್ತು ಹಾಲಿನ ಉಪ ಉತ್ಪನ್ನಗಳು) ಒಟ್ಟು ಉತ್ಪಾದನೆ, ವಹಿವಾಟು ಮತ್ತು ನಿವ್ವಳ ಲಾಭದ ಪ್ರಮಾಣ ಎಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಇ) ಮಹಾಮಂಡಳದ 'ನಂದಿನಿ' ಬ್ರ್ಯಾಂಡ್ ಉತ್ಪನ್ನಗಳು ಈಗಾಗಲೇ ಭಾರತದ ಎಷ್ಟು ರಾಜ್ಯಗಳಲ್ಲಿ ಮತ್ತು ಜಗತ್ತಿನಾದ್ಯಂತ ಎಷ್ಟು ರಾಷ್ಟ್ರಗಳಲ್ಲಿ ಮಾರುಕಟ್ಟೆ ವಿಸ್ತರಿಸಿಕೊಂಡಿವೆ ; (ರಾಜ್ಯ ಮತ್ತು ರಾಷ್ಟ್ರಗಳ ಹೆಸರಿನೊಂದಿಗೆ) ಹಾಗೂ ವಿಸ್ತರಿಸಲು ಯೋಜನೆ ರೂಪಿಸಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ಕರ್ನಾಟಕ ಸಹಕಾರ ಹಾಲು ಉತ್ಪಾದಕರ ಮಹಾಮಂಡಳಿಯು ತನ್ನ ಉತ್ಪನ್ನಗಳ ಪ್ರಚಾರಕ್ಕೆ ರಾಯಭಾರಿ/ರೂಪದರ್ಶಿಯಾಗಿ ಇದುವರೆಗೂ ಯಾರು ಯಾರನ್ನು ಆಯ್ಕೆ ಮಾಡಿ ಬಳಸಿಕೊಂಡಿದೆ ; ಅವರೊಂದಿಗೆ ಎಷ್ಟು ಅವಧಿಗೆ ಒಪ್ಪಂದ ಮಾಡಿಕೊಳ್ಳಲಾಗಿತ್ತು ಹಾಗೂ ಅವರಿಗೆ ಪಾವತಿಸಿರುವ ಸಂಭಾವನೆ ಮೊತ್ತ ಎಷ್ಟು? (ಸಂಪೂರ್ಣ ವಿವರ ನೀಡುವುದು)

# ಮಂಡ್ಯ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿನ ನೀರು ಸರಬರಾಜು ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೭೬೩ (೮೪೮) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಪ್ರಸ್ತುತ ಕಲ್ಪಿಸಲಾಗಿರುವ ನೀರು ಸಂಪರ್ಕಗಳ ಒಟ್ಟು ಸಂಖ್ಯೆ ಎಷ್ಟು ; ಪ್ರತಿದಿನ ನಗರ ಸ್ಥಳೀಯ ಸಂಸ್ಥೆವಾರು ಇರುವ ಬೇಡಿಕೆ ಹಾಗೂ ಪೂರೈಕೆ ಮಾಡುತ್ತಿರುವ ನೀರಿನ ಪ್ರಮಾಣ ಎಷ್ಟು ; (ನಗರ ಸ್ಥಳೀಯ ಸಂಸ್ಥೆವಾರು ಮಾಹಿತಿ ನೀಡುವುದು)

(ಆ) ಮಂಡ್ಯ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯ ಬಳಕೆದಾರರಿಗೆ ವಿಧಿಸುತ್ತಿರುವ ನೀರಿನ ಮಾಸಿಕ ಶುಲ್ಕ ಎಷ್ಟು ;

(ಇ) ನಗರ ಸ್ಥಳೀಯ ಸಂಸ್ಥೆಗಳ ನೀರಿನ ಶುಲ್ಕದ ಒಟ್ಟು ಬೇಡಿಕೆ ಮತ್ತು ಬಾಕಿ ಇರುವ ಮೊತ್ತ ಎಷ್ಟು ಹಾಗೂ ಕಳೆದ ಮೂರು ವರ್ಷಗಳಲ್ಲಿ ವಸೂಲಾತಿ ಮಾಡಲಾದ ನೀರಿನ ಶುಲ್ಕದ ಮೊತ್ತ ಎಷ್ಟು ; (ನಗರ ಸ್ಥಳೀಯ ಸಂಸ್ಥೆವಾರು, ವರ್ಷವಾರು ಶೇಕಡಾವಾರು ಮಾಹಿತಿ ನೀಡುವುದು)

(ಈ) ಮನೆ ಮನೆಗೆ ತೆರಳಿ ನೀರಿನ ಮಾಸಿಕ ಶುಲ್ಕ ವಸೂಲಾತಿ ಮಾಡುವುದರ ಜೊತೆಗೆ ಬಳಕೆದಾರರಿಗೆ ಆನ್‌ಲೈನ್ ಅಥವಾ ಆಫ್‌ಲೈನ್ ಮೂಲಕ ನೀರಿನ ಶುಲ್ಕ ಪಾವತಿ ಮಾಡಲು ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಸರ್ಕಾರದ ಕ್ರಮವೇನು ;

(ಉ) ನೀರಿನ ಶುಲ್ಕದ ಬಾಕಿ ಮೊತ್ತದ ವಸೂಲಾತಿಗೆ ತೆಗೆದುಕೊಂಡಿರುವ ಕ್ರಮಗಳೇನು ? (ಮಾಹಿತಿ ನೀಡುವುದು)

# ಏಕ ಹಾಗೂ ಬಹು ನಿವೇಶನ ಬಡಾವಣೆ ನಕ್ಷೆ ಅನುಮೋದನೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೬೪ (೮೮೭) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಯ ಹೊರಗಿನ ಪ್ರದೇಶದಲ್ಲಿ ಮಹಾಯೋಜನೆ ರಚಿಸಲಾಗಿದೆಯೇ ; ಮಹಾಯೋಜನೆ ರಚಿಸದೆ ಯಾವ ನಿಯಮಾವಳಿಗಳಂತೆ ನಿವೇಶನ ಬಡಾವಣೆ ನಕ್ಷೆ ಅನುಮೋದನೆ ನೀಡಲಾಗುತ್ತಿದೆ ;

(ಆ) ಬಡಾವಣೆ ನಕ್ಷೆ ಅನುಮೋದನೆ ಕುರಿತು ನಗರಾಭಿವೃದ್ಧಿ ಇಲಾಖೆ ಪ್ರಕಟಿಸಿದ ನಿಯಮಗಳು ಗ್ರಾಮಠಾಣಾ ಕಲ್ಪನೆಯಿಲ್ಲದ ಕರಾವಳಿ ಮತ್ತು ಮಲೆನಾಡು ಭಾಗಗಳಲ್ಲಿರುವ ತುಂಡು ಭೂಮಿ ಮತ್ತು ಹರಡಿಕೊಂಡಿರುವ ಜನವಸತಿ ನಿವೇಶನ ಬಡಾವಣೆ ನಕ್ಷೆ ಅನುಮೋದನೆ ಸಾಧ್ಯವಾಗದೆ ಸಾರ್ವಜನಿಕರು ತೊಂದರೆ ಪಡುತ್ತಿರುವ ಬಗ್ಗೆ ಇಲಾಖೆ ಏನು ಕ್ರಮವಹಿಸುತ್ತಿದೆ ;

(ಇ) ಏಕ ಹಾಗೂ ಬಹು ನಿವೇಶನ ಬಡಾವಣೆ ನಕ್ಷೆ ಅನುಮೋದನೆಯ ಕುರಿತಂತೆ ಸಂಬಂಧಪಟ್ಟ ಇಲಾಖೆಗಳಾದ ಕಂದಾಯ, ಲೋಕೋಪಯೋಗಿ, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ, ಆರ್.ಡಿ.ಪಿ.ಆರ್ ಇತ್ಯಾದಿಗಳ ನಡುವೆ ಸಮನ್ವಯ ಸಾಧಿಸಲು ಸಮಾಲೋಚನೆ ಸಭೆ ನಡೆಸಲು ಯಾವಾಗ ಕ್ರಮವಹಿಸಲಾಗುವುದು ;

(ಈ) ಕರಾವಳಿ ಜಿಲ್ಲೆಗಳ ಗ್ರಾಮೀಣ ಪ್ರದೇಶದಲ್ಲಿ ಮಾರ್ಚ್ ೦೪ ೨೦೨೫ರವರೆಗೆ ೬೪೭ ಬಡಾವಣೆ ನಕ್ಷೆ ಅನುಮೋದನೆ ಕಡತಗಳನ್ನು ತಿರಸ್ಕರಿಸಿದ್ದು ಅವುಗಳನ್ನು ನಿವೇಶನದಾರರು ಸರಿಪಡಿಸುವ ಬಗೆ ಹೇಗೆ ; ಈ ಕುರಿತು ಪರಿಹಾರ ಕ್ರಮಗಳೇನು ;

(ಉ) ಭೂ ಪರಿವರ್ತಿತ ನಿವೇಶನ ವಿಭಜನೆ, ೧೧ ಬಿ ನೀಡಿದ ಪ್ರಕರಣಗಳು, ೨೦೧೩ರ ಹಿಂದಿನ ಕಟ್ಟಡಗಳು, ರಸ್ತೆ ಅಗಲೀಕರಣ, ಸಾರ್ವಜನಿಕ ರಸ್ತೆ ಮತ್ತು ರಸ್ತೆ ಜಾಗಗಳ ದೃಢೀಕರಣ ಇತ್ಯಾದಿ ಸಮಸ್ಯೆಗಳ ಕಾರಣ ಹೆಚ್ಚಿನ ನಿವೇಶನ ಅನುಮೋದನೆ ಕಡತಗಳು ತಿರಸ್ಕಾರವಾಗುತ್ತಿರುವುದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕುಡಿಯುವ ನೀರು ಮತ್ತು ಸ್ವಚ್ಛತೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೬೫ (೮೮೮) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕುಡಿಯುವ ನೀರು ಸ್ವಚ್ಛವಾಗಿರುವ ಕುರಿತು ಹೇಗೆ ಖಾತರಿ ಪಡಿಸಲಾಗುತ್ತಿದೆ ; ಎಷ್ಟು ಅವಧಿಗೊಮ್ಮೆ ಕುಡಿಯುವ ನೀರನ್ನು ಜಲ ಸ್ಥಾವರ ಮತ್ತು ಪೂರೈಕೆಯ ಕೊನೆ ಹಂತದಿಂದ ಸಂಗ್ರಹಿಸಿ ಪರೀಕ್ಷಿಸಲಾಗುತ್ತಿದೆ ; (ಇತ್ತೀಚಿನ 3 ವರ್ಷಗಳ ವರದಿ ನೀಡುವುದು)

(ಆ) ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕುಡಿಯುವ ನೀರನ್ನು ಸಂಗ್ರಹಿಸುವ ಜಲ ಸ್ಥಾವರಗಳನ್ನು ಎಷ್ಟು ಅವಧಿಗೊಮ್ಮೆ ಸ್ವಚ್ಛಗೊಳಿಸಲಾಗುತ್ತಿದೆ ; ಯಾವ ವಿಧಾನಗಳ ಮೂಲಕ ಸ್ವಚ್ಛಗೊಳಿಸಲಾಗುತ್ತಿದೆ ;

(ಇ) ಮಹಾನಗರ ಪಾಲಿಕೆಯ ಸ್ವಂತ ಕಟ್ಟಡಗಳಲ್ಲಿ ಕುಡಿಯುವ ನೀರನ್ನು ಸಂಗ್ರಹಿಸುವ ನೀರಿನ ಟ್ಯಾಂಕುಗಳನ್ನು ಎಷ್ಟು ಅವಧಿಗೊಮ್ಮೆ ಸ್ವಚ್ಛಗೊಳಿಸಲಾಗುತ್ತಿದೆ ; ಯಾವ ವಿಧಾನಗಳ ಮೂಲಕ ಸ್ವಚ್ಛಗೊಳಿಸಲಾಗುತ್ತಿದೆ ಹಾಗೂ ಕಡೇಯ ಬಾರಿ ಯಾವಾಗ ಸ್ವಚ್ಛಗೊಳಿಸಲಾಗಿದೆ ;

(ಈ) ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೊಳಚೆ ನೀರನ್ನು ಎಸ್.ಡಿ.ಪಿ.ಟಿ ಮೂಲಕ ಸರಿಯಾದ ಸಂಸ್ಕರಣೆ ಇಲ್ಲದೆ ತೆರೆದ ಹಳ್ಳದ ಮೂಲಕ ಹರಿಯುತ್ತಿರುವುದನ್ನು ಮತ್ತು ಮ್ಯಾನ್ ಹೋಲ್ ತೆರೆದು ರಸ್ತೆಯಲ್ಲಿ ಹರಿಯುವುದನ್ನು ತಡೆಯಲು ವಹಿಸಲಾಗಿರುವ ಕ್ರಮವೇನು ?

## ರಾಜ್ಯದಲ್ಲಿ ಜಿಲ್ಲಾ ಖನಿಜ ಪ್ರತಿಷ್ಠಾನ ನಿಧಿ ನಿರ್ವಹಣಾ ಸಮಿತಿ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೬೬ (೮೮೯) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಜಿಲ್ಲಾ ಖನಿಜ ಪ್ರತಿಷ್ಠಾನ ನಿಧಿ ನಿರ್ವಹಣಾ ಸಮಿತಿಗಳನ್ನು ರಚಿಸಲು ಇರುವ ಮಾನದಂಡಗಳೇನು ; ಪ್ರಸ್ತುತ ಯಾವ ಯಾವ ಜಿಲ್ಲೆಗಳಲ್ಲಿ ಈ ಸಮಿತಿಗಳು ಚಾಲ್ತಿಯಲ್ಲಿವೆ ;

(ಆ) ಪ್ರಸ್ತುತ ಉಡುಪಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಜಿಲ್ಲಾ ಖನಿಜ ಪ್ರತಿಷ್ಠಾನ ನಿಧಿ ನಿರ್ವಹಣಾ ಸಮಿತಿಗಳು ಚಾಲ್ತಿಯಲ್ಲಿವೆಯೇ ; ಈವರೆಗೆ ಸಮಿತಿ ರಚಿಸದಿರಲು ಕಾರಣವೇನು ; ಎಷ್ಟು ಅವಧಿಯೊಳಗೆ ಈ ಸಮಿತಿಗಳನ್ನು ರಚಿಸಲಾಗುವುದು ;

(ಇ) ಉಡುಪಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಲ್ಲಿ ಜಿಲ್ಲಾ ಖನಿಜ ಪ್ರತಿಷ್ಠಾನ ನಿಧಿಯಡಿ ಸಂಗ್ರಹವಾದ ಹಾಗೂ ಕಳೆದ ೩ ವರ್ಷಗಳಲ್ಲಿ ವೆಚ್ಚ ಮಾಡಲಾದ ಮೊತ್ತವೆಷ್ಟು ; ಯಾವ ಯಾವ ಕಾಮಗಾರಿಗಳಿಗೆ/ಉದ್ದೇಶಗಳಿಗೆ ವೆಚ್ಚಮಾಡಲಾಗಿದೆ ; ಪ್ರಸ್ತುತ ಉಳಿಕೆಯಾಗಿರುವ ಮೊತ್ತವೆಷ್ಟು ; (ವರ್ಷವಾರು ವಿವರ ನೀಡುವುದು)

(ಈ) ಉಡುಪಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆಯಲ್ಲಿನ ಗಣಿ ಬಾಧಿತ ಗ್ರಾಮಗಳಾವುವು ; ಸದರಿ ಗ್ರಾಮಗಳಲ್ಲಿ ಎಷ್ಟು ಗ್ರಾಮಗಳಿಗೆ ಜಿಲ್ಲಾ ಖನಿಜ ಪ್ರತಿಷ್ಠಾನ ನಿಧಿಯ ಅನುದಾನವನ್ನು ವೆಚ್ಚಮಾಡಲಾಗಿದೆ ; ಕಾಮಗಾರಿ ಆಯ್ಕೆಯ ಮಾನದಂಡಗಳು ಮತ್ತು ನಿಯಮಗಳು ಯಾವುವು ?

## ಕರ್ನಾಟಕ ರಾಜ್ಯದಲ್ಲಿ ಸಹಕಾರ ಸಂಘಗಳ ನಿಯಮಗಳಡಿ ಸಾಲ ವಸೂಲಿ ಕ್ರಮಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೬೭ (೮೯೦) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಹಕಾರ ಕಾಯ್ದೆಗಳಡಿ ಸಹಕಾರ ಸಂಘಗಳು ಸಾಲವನ್ನು ವಸೂಲಿ ಮಾಡುವ ನಿಯಮಗಳು ಯಾವುವು ; ಸಹಕಾರಿ ಸಂಘಗಳಲ್ಲಿ ಯಾವ ವಿಧದ ಸಾಲಗಳನ್ನು ನೀಡಲಾಗುತ್ತದೆ ; ಅದಕ್ಕೆ ಯಾವ ರೀತಿಯ ಭದ್ರತೆಯನ್ನು ಮತ್ತು ಅಡಮಾನವನ್ನು ಹೊಂದಿರುತ್ತದೆ ;

(ಆ) ಸಹಕಾರಿ ನಿಯಮಗಳಂತೆ ಸಹಕಾರಿ ಸಂಘಗಳು ಸಾಲ ವಸೂಲಾತಿಗಾಗಿ ನೆಗೋಷಿಯಬಲ್ ಇನ್ಸ್ಟ್ರುಮೆಂಟ್ ಆಕ್ಟ್ ೧೮೮೧ರಂತೆ ಚೆಕ್ಕನ್ನು ಹಾಜರುಪಡಿಸಿ ಚೆಕ್ ಅಮಾನ್ಯಗೊಂಡ ಪ್ರಕರಣದಂತೆ ವಸೂಲಿಗೆ ಕ್ರಮವಹಿಸಬಹುದೇ ; (ವಿವರ ನೀಡುವುದು)

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಸಹಕಾರಿ ಸಂಘಗಳು ಸಾಲ ವಸೂಲಾತಿಗಾಗಿ ಚೆಕ್ ಅಮಾನ್ಯ ಪ್ರಕರಣ ದಾಖಲಿಸುವ ಮೂಲಕ ವಸೂಲಿಗೆ ಕ್ರಮವಹಿಸಿದ ಪ್ರಕರಣಗಳ ಸಂಖ್ಯೆ ಎಷ್ಟು ;

(ಈ) ಒಂದು ಸಾಲ ವಸೂಲಿಗಾಗಿ ಅಡಮಾನ ಆಸ್ತಿಯನ್ನು ಹರಾಜು ಮಾಡುವ ಪ್ರಕ್ರಿಯೆ ಮತ್ತು ಚೆಕ್ ಅಮಾನ್ಯ ನಿಯಮಗಳಡಿ ಕ್ರಮ ಜರುಗಿಸುವುದು ಈ ರೀತಿ ಎರಡೂ ಸಾಲ ವಸೂಲಿ ಕ್ರಮಗಳನ್ನು ಏಕ ಕಾಲದಲ್ಲಿ ಮಾಡಲು ಅವಕಾಶವಿದೆಯೇ :

(ಉ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಈ ರೀತಿಯ ಎಷ್ಟು ಪ್ರಕರಣಗಳು ಇಲಾಖೆಯ ಗಮನಕ್ಕೆ ಬಂದಿವೆ ಹಾಗೂ ಈ ರೀತಿಯ ಕೃಷಿಕರ ಶೋಷಣೆ ತಡೆಗಟ್ಟಲು ಯಾವ ರೀತಿ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

# ಅಭಿವೃದ್ಧಿ ಕಾಮಗಾರಿಗಳಲ್ಲಿ ಬಳಸುವ ಖನಿಜ ಉತ್ಪನ್ನಗಳಿಗೆ ಪಾವತಿಸಬೇಕಾದ ಅನ್ವಯಿಕ ಶುಲ್ಕಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೬೮ (೮೯೧) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಅಭಿವೃದ್ಧಿ ಕಾಮಗಾರಿಗಳಲ್ಲಿ ಬಳಸುವ ಉಪ ಖನಿಜ ಉತ್ಪನ್ನಗಳಿಗೆ ಜಿಲ್ಲಾ ಖನಿಜ ಪ್ರತಿಷ್ಠಾನ ನಿಧಿ ವಂತಿಗೆ ಸಹಿತ ಅನ್ವಯಿಕ ಶುಲ್ಕ ಸರ್ಕಾರಕ್ಕೆ ಸಂದಾಯವಾಗದೆ ಸರ್ಕಾರದ ಬೊಕ್ಕಸಕ್ಕೆ ನಷ್ಟವಾಗಿದೆಯೇ ; ಅದರ ಮೊತ್ತವೆಷ್ಟು ; (ಕಳೆದ ಮೂರು ವರ್ಷಗಳ ವಿವರ ನೀಡುವುದು)

(ಆ) ಸರ್ಕಾರಿ ಅಭಿವೃದ್ಧಿ ಕಾಮಗಾರಿಗಳಿಗೆ ಬಳಸುವ ಖನಿಜ ಮತ್ತು ಉಪ ಖನಿಜಗಳಿಗೆ ಸರ್ಕಾರಕ್ಕೆ ಪಾವತಿಸಬೇಕಾದ ರಾಜಧನ, ಇತರ ಅನ್ವಯಿಕ ಶುಲ್ಕ ಇತ್ಯಾದಿಗಳನ್ನು ಪಾವತಿಸಿರುವ ಬಗ್ಗೆ ಹೇಗೆ ಖಚಿತಪಡಿಕೊಳ್ಳಲಾಗುತ್ತಿದೆ ; ಕಾಮಗಾರಿ ಬಿಲ್ಲು ಪಾವತಿ ಮಾಡುವಾಗ ಸದರಿ ಸರ್ಕಾರಕ್ಕೆ ಪಾವತಿಸಬೇಕಾದ ಶುಲ್ಕಗಳನ್ನು ಕಟಾಯಿಸಲಾಗಿದೆಯೇ ;

(ಇ) ರಾಜ್ಯದಲ್ಲಿ ಸರ್ಕಾರಿ ಅಭಿವೃದ್ಧಿ ಕಾಮಗಾರಿಗಳಿಗೆ ಅವಶ್ಯವಿರುವ ಉಪ ಖನಿಜಗಳನ್ನು ಕಲ್ಲುಗಣಿಗುತ್ತಿಗೆದಾರರು ಮತ್ತು ಸ್ಟೋನ್ ಕ್ರಷರ್‌ಗಳಿಂದ ಖರೀದಿಸಿ ಖನಿಜ ರವಾನೆ ಪರವಾನಿಗೆ ಪಡೆಯದೆ ಸಾಗಣೆಯಾಗುತ್ತಿರುವ ಬಗ್ಗೆ ಸರ್ಕಾರ ವಹಿಸಿರುವ ಕ್ರಮವೇನು ;

(ಈ) ಖನಿಜ ಮತ್ತು ಉಪ ಖನಿಜಗಳ ವ್ಯವಹಾರಗಳನ್ನು ನೋಂದಾವಣೆಯ ಅನುಪಸ್ಥಿತಿ ಹಾಗೂ ವಾಣಿಜ್ಯ ತೆರಿಗೆಗಳ ಇಲಾಖೆ ಜೊತೆ ಸಮನ್ವಯತೆಯಲ್ಲದ ಸಮಯೋಚಿತ ಅನುಷ್ಠಾನ ಕ್ರಮಗಳ ಕೊರತೆ ಸರ್ಕಾರದ ಬೊಕ್ಕಸಕ್ಕೆ ಮಾಡುವ ನಷ್ಟವನ್ನು ಸರಿಪಡಿಸಲು ಸರ್ಕಾರದ ಕ್ರಮಗಳೇನು ;

(ಉ) ಈ ನಷ್ಟದ ಕುರಿತು ಸಿಎಜಿ ವರದಿಯಲ್ಲಿ ಆಕ್ಷೇಪಿಸಿದ್ದು ಸೂಕ್ತ ತನಿಖೆಗೆ ಆದೇಶಿಸಿದೆಯೇ ; ಯಾವಾಗ ಈ ಬಗ್ಗೆ ಕ್ರಮ ವಹಿಸಲಾಗುವುದು ?

## ಮೈಸೂರು ಜಿಲ್ಲೆಯ ಹೆಚ್.ಡಿ.ಕೋಟೆ ತಾಲ್ಲೂಕಿನ ರೈತರಿಗೆ ಕೃಷಿ ಮಾರುಕಟ್ಟೆ ಸೌಲಭ್ಯವಿಲ್ಲದಿರುವ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೬೯ (೮೮೩) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಜಿಲ್ಲೆಯ ಹೆಚ್.ಡಿ.ಕೋಟೆ ತಾಲ್ಲೂಕಿನ ಎನ್.ಬೇಗೂರು ಮತ್ತು ಬೀಚನಹಳ್ಳಿ ಗ್ರಾಮ ಪಂಚಾಯಿತಿ ಹಾಗೂ ಸರಗೂರು ತಾಲ್ಲೂಕಿನ ಬೀದರಹಳ್ಳಿ, ಯಗನೂರು, ಹಂಚಿಪುರ ಮತ್ತು ಬಿ ಮಟಕೆರೆ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಹತ್ತು ಸಾವಿರ ರೈತ ಕುಟುಂಬಗಳು ವಾಸ ಮಾಡುತ್ತಾ ಕೃಷಿ ಉತ್ಪನ್ನಗಳನ್ನು ಬೆಳೆಯುತ್ತಿದ್ದರೂ ಅವರಿಗೆ ಸೂಕ್ತ ಕೃಷಿ ಮಾರುಕಟ್ಟೆ ಸೌಲಭ್ಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಕಾಡಂಚಿನ ಗ್ರಾಮದಿಂದ ರೈತರು ತಾವು ಬೆಳೆದ ಕೃಷಿ ಉತ್ಪನ್ನಗಳನ್ನು ೯೦ ಕಿ.ಮೀ. ದೂರದ ಮೈಸೂರಿಗೆ ಕೊಂಡೊಯ್ಯಲು ಅಗತ್ಯ ಮೂಲಭೂತ ಸೌಲಭ್ಯಗಳು ಇಲ್ಲದಿರುವುದು ಸರ್ಕಾರ ಮನಗಂಡಿದೆಯೇ ;

(ಇ) ಹಾಗಿದ್ದಲ್ಲಿ, ಕೃಷಿ ಉತ್ಪನ್ನಗಳನ್ನು ಬೆಳೆದರೂ ಮಾರಾಟ ಮಾಡಲಾಗದೆ ಜೀವನ ನಿರ್ವಹಣೆಗೆ ತೊಂದರೆ ಕೊಡುತ್ತಿರುವ ಇವರಿಗೆ ಎನ್.ಬೇಗೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗುಂಡ್ರೆ ಅರಣ್ಯದ ವ್ಯಾಪ್ತಿಯ ಗಂಡತ್ತೂರು ಗ್ರಾಮದ ಭೋಳಮ್ಮನ ಅರಣ್ಯ ಗೇಟಿನ ಮೂಲಕ ಕೇರಳ ರಾಜ್ಯಕ್ಕೆ ಕೇವಲ ಎಂಟು ಕಿಲೋಮೀಟರ್ ದೂರದಲ್ಲಿರುವ ಕೊಳವಳ್ಳಿ ಗ್ರಾಮಕ್ಕೆ ಕೃಷಿ ಉತ್ಪನ್ನಗಳನ್ನು ಕೊಂಡೊಯ್ದು ಮಾರಾಟ ಮಾಡಿಬರಲು ಅರಣ್ಯ ಇಲಾಖೆಯವರೊಂದಿಗೆ ಚರ್ಚಿಸಿ ಅನುಮತಿ ದೊರಕಿಸಿ ಕೊಡಲಾಗುವುದೇ ;

(ಈ) ಈ ಪ್ರದೇಶದಲ್ಲಿ ಅರಣ್ಯ ಇಲಾಖೆಗೆ ಸೇರಿದ ರಸ್ತೆ ಇದ್ದು ಸದರಿ ರಸ್ತೆಯನ್ನೇ ಮೇಲ್ಕಂಡ ಪಂಚಾಯಿತಿಗಳ ರೈತರು ಕೃಷಿ ಉತ್ಪನ್ನ ಮಾರಾಟ ಸಲುವಾಗಿ ಹೋಗಿ ಬರುವ ಸಲುವಾಗಿ ಬಳಸಲು ಅನುಮತಿ ನೀಡಲು ಕ್ರಮ ವಹಿಸಲಾಗುವುದೇ ?

## ತೋಟಗಾರಿಕೆ ವಿಶ್ವವಿದ್ಯಾಲಯವನ್ನು ಸಮಗ್ರ ವಿಶ್ವವಿದ್ಯಾಲಯ ವ್ಯಾಪ್ತಿಗೆ ತರುತ್ತಿರುವ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೭೦ (೮೮೪) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಏಕೈಕ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯವನ್ನು ಕೃಷಿ ತೋಟಗಾರಿಕೆ ಪಶುಸಂಗೋಪನೆ ಹಾಗೂ ಅರಣ್ಯ ಕಾಲೇಜುಗಳನ್ನು ಸೇರಿಸಿ ಸಮಗ್ರ ವಿಶ್ವವಿದ್ಯಾಲಯ ಸ್ಥಾಪಿಸಲು ಸರ್ಕಾರ ಮುಂದಾಗಿದೆಯೇ ;

(ಆ) ಸಮಗ್ರ ವಿಶ್ವವಿದ್ಯಾಲಯ ಸ್ಥಾಪಿಸಲು ಮುಂದಾಗಿರುವುದಕ್ಕೆ ಕಾರಣಗಳೇನು ;

(ಇ) ಸಮಗ್ರ ವಿಶ್ವವಿದ್ಯಾಲಯ ಸ್ಥಾಪನೆಗೆ ಹಾಗೂ ಪ್ರತ್ಯೇಕ ತೋಟಗಾರಿಕೆ ವಿಶ್ವವಿದ್ಯಾಲಯ ಹೊಂದಿರುವುದರಲ್ಲೂ ಕಂಡು ಬಂದ ಸಾಧಕ ಬಾಧಕಗಳೇನು ;

(ಈ) ತೋಟಗಾರಿಕಾ ವಿಶ್ವವಿದ್ಯಾಲಯವನ್ನು ಸಮಗ್ರ ವಿಶ್ವವಿದ್ಯಾಲಯ ವ್ಯಾಪ್ತಿಗೆ ತರಲು ಅಧ್ಯಯನ ಸಮಿತಿ ರಚಿಸುವುದಕ್ಕೆ ತೋಟಗಾರಿಕಾ ಕ್ಷೇತ್ರದ ತಜ್ಞರಿಂದ ವಿರೋಧ ಇರುವುದನ್ನು ಸರ್ಕಾರ ಮನಗಂಡಿದೆಯೇ ;

(ಉ) ಹಾಗಿದ್ದಲ್ಲಿ, ಈ ಪ್ರಸ್ತಾವನೆಯನ್ನು ಸರ್ಕಾರ ಕೈ ಬಿಡುವುದೇ ?

## ಚಾಮರಾಜನಗರ ಜಿಲ್ಲೆಯಲ್ಲಿ ಬಿದ್ದಂಥ ಮಳೆಗೆ ತೋಟಗಾರಿಕಾ ಬೆಳೆಗೆ ಹಾನಿಯಾಗಿರುವ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೭೧ (೮೮೫) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬಿದ್ದಂಥ ಮುಂಗಾರು ಪೂರ್ವ ಮಳೆಗೆ ಚಾಮರಾಜನಗರ ಜಿಲ್ಲೆ ಸೇರಿದಂತೆ ವಿವಿಧ ಜಿಲ್ಲೆಗಳಲ್ಲಿ ತೋಟಗಾರಿಕಾ ಬೆಳೆಗಳು ಹಾನಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವ ಯಾವ ತಾಲ್ಲೂಕುಗಳಲ್ಲಿ ಯಾವ ಯಾವ ಬೆಳೆಗಳು ಹಾಗೂ ಎಷ್ಟು ಪ್ರಮಾಣದಲ್ಲಿ ಹಾನಿಗೊಳಗಾಗಿದೆ ; (ವಿವರ ಒದಗಿಸುವುದು)

(ಇ) ಬೆಳೆ ಹಾನಿ ಸಂಬಂಧ ಕಂದಾಯ, ಕೃಷಿ ಮತ್ತು ತೋಟಗಾರಿಕೆ ಇಲಾಖೆಗಳು ಜಂಟಿಯಾಗಿ ಸಮೀಕ್ಷೆ ನಡೆಸಿದೆಯೇ ;

(ಈ) ಸಮೀಕ್ಷಾ ವರದಿಯ ಅನ್ವಯ ಎಷ್ಟು ಎಕರೆ ಪ್ರದೇಶದಲ್ಲಿ ತೋಟಗಾರಿಕೆ ಬೆಳೆಗಳು ಹಾನಿಗೊಳಗಾಗಿವೆ ; (ಅದರ ಅಂದಾಜು ಮೊತ್ತವೆಷ್ಟು)

(ಉ) ಅಗತ್ಯ ಬೆಳೆ ಪರಿಹಾರ ಒದಗಿಸಲಾಗಿದೆಯೇ ?

## ರಾಮನಗರ ನಗರ ಸಭೆಯಲ್ಲಿ ಆಸ್ತಿಗಳ ಕಂದಾಯ ವಿಳಂಬಕ್ಕೆ ತಿಂಗಳಿಗೆ ಶೇಕಡ ೦೨ರಷ್ಟು ಬಡ್ಡಿ ವಿಧಿಸುತ್ತಿರುವ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೭೨ (೮೮೬) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಮನಗರ ನಗರ ಸಭೆಯಲ್ಲಿ ಆಸ್ತಿಗಳ ಕಂದಾಯ ಪಾವತಿ ವಿಳಂಬಕ್ಕೆ ತಿಂಗಳಿಗೆ ಶೇಕಡ ೦೨ರಷ್ಟು ಬಡ್ಡಿ ವಿಧಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಒಂದು ಸರ್ಕಾರಿ ಸಂಸ್ಥೆ ಒಂದು ತಿಂಗಳಿಗೆ ಶೇಕಡ ೨ ದರದಲ್ಲಿ ಬಡ್ಡಿ ವಿಧಿಸುವುದು ಆರ್ಥಿಕ ಇಲಾಖೆಯ ಆದೇಶಕ್ಕೆ ಅಥವಾ ಆರ್ಥಿಕ ಸಂಹಿತೆಗೆ ಅಥವಾ ಭಾರತೀಯ ರಿಸರ್ವ್ ಬ್ಯಾಂಕ್ ನಿಯಮಾವಳಿಗೆ ವಿರೋಧವಲ್ಲವೇ ;

(ಇ) ಆಯಾ ಸಾಲಿನ ಕಂದಾಯ ತೆರಿಗೆಯನ್ನು ಆಯಾ ಆರ್ಥಿಕ ವರ್ಷದ ಮಾರ್ಚ್ ಅಂತ್ಯದವರೆಗೆ ಪಾವತಿಸಲು ಅವಕಾಶವಿದ್ದರೂ ಜುಲೈ ತಿಂಗಳಿನಿಂದಲೇ ಶೇಕಡ ೨ರ ದರದ ಬಡ್ಡಿಯನ್ನು ವಿಧಿಸುವುದು ಸಮಂಜಸವೇ ;

(ಈ) ಮುಂದುವರೆದು ಖಾಲಿ ನಿವೇಶನಗಳಿಂದ ಯಾವುದೇ ಘನ ತ್ಯಾಜ್ಯ ಉತ್ಪತ್ತಿ ಆಗದಿದ್ದರೂ ಘನ ತ್ಯಾಜ್ಯ ತೆರಿಗೆಯನ್ನು ವಿಧಿಸುವುದರ ಉದ್ದೇಶವೇನು ಅಥವಾ ಸಮಂಜಸವೇ ;

(ಉ) ಮನೆ ಮನೆಗೆ "ಇ-ಖಾತೆ" ಅಭಿಯಾನದಡಿ ವಾರ್ಡ್‌ವಾರು ಸ್ವೀಕರಿಸಿದ ಅರ್ಜಿಗಳೆಷ್ಟು ಮತ್ತು ಸ್ಥಳದಲ್ಲಿ ವಿಲೇ ಮಾಡಿದ ಪ್ರಕರಣಗಳೆಷ್ಟು ;

(ಊ) ಆಸ್ತಿಗಳ ಕಂದಾಯ ಪಾವತಿಗಳ ಬಗ್ಗೆ ತಿಂಗಳಿಗೆ ಶೇಕಡ ೦೨ ಬಡ್ಡಿ ಮತ್ತು ಖಾಲಿ ನಿವೇಶನಗಳ ಘನ ತ್ಯಾಜ್ಯ ತೆರಿಗೆಯನ್ನು ರದ್ದುಪಡಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಬಸವ ಕಲ್ಯಾಣದಲ್ಲಿ ಒಳಚರಂಡಿ ಕಾಮಗಾರಿ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೭೭೩ (೯೩೦) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸುಮಾರು ೭೫ರಿಂದ ೮೦ ಸಾವಿರ ಜನಸಂಖ್ಯೆ ಹಾಗೂ ೧೫ ಸಾವಿರಕ್ಕಿಂತ ಹೆಚ್ಚು ವಸತಿ, ವಾಣಿಜ್ಯ, ಕೈಗಾರಿಕೆ ಕಟ್ಟಡಗಳಿರುವ ಬಸವಕಲ್ಯಾಣದಲ್ಲಿ ಒಳಚರಂಡಿ ವ್ಯವಸ್ಥೆಯಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಸವಕಲ್ಯಾಣದಲ್ಲಿ ಎಸ್.ಟಿ.ಪಿ. ಮತ್ತು ಎಫ್.ಎಸ್.ಟಿ.ಪಿ. ಘಟಕಗಳು ನಿರ್ಮಾಣವಾಗುತ್ತಿದ್ದರೂ ಸೂಕ್ತ ಒಳಚರಂಡಿ ವ್ಯವಸ್ಥೆ ಇಲ್ಲದೆ ಸೊಳ್ಳೆಗಳು ಉತ್ಪತ್ತಿಯಾಗಿ ಇಲ್ಲಿನ ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿರುವುದರಿಂದ ಆದ್ಯತೆಯ ಮೇರೆಗೆ ಒಳಚರಂಡಿ ವ್ಯವಸ್ಥೆ ಕಲ್ಪಿಸುವ ಬಗ್ಗೆ ಸರ್ಕಾರ ಕೈಗೊಳ್ಳಬಹುದಾದ ಕ್ರಮವೇನು ;

(ಇ) ಯಾವ ಕಾಲಮಿತಿಯಲ್ಲಿ ಒಳಚರಂಡಿ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು ?

## ರಾಜ್ಯದಲ್ಲಿರುವ ಸಕ್ಕರೆ ಕಾರ್ಖಾನೆಗಳ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೭೪ (೯೩೧) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸಕ್ಕರೆ ಕಾರ್ಖಾನೆಗಳು ಕಬ್ಬು ಬೆಳೆಯುವ ರೈತರಿಗೆ ಪ್ರತಿ ಟನ್‌ಗೆ ನಿಗದಿಪಡಿಸಲಾಗಿರುವ ದರ ಎಷ್ಟು ;

(ಆ) ಯಾವ ಮಾನದಂಡಗಳ ಮೇಲೆ ಸದರಿ ದರಗಳನ್ನು ನಿಗದಿಪಡಿಸಲಾಗಿದೆ ;

(ಇ) ರಾಜ್ಯದ ವಿವಿಧ ಕಬ್ಬು ಕಾರ್ಖಾನೆಗಳಲ್ಲಿ ಒಂದೊಂದು ರೀತಿಯ ದರಗಳನ್ನು ನಿಗದಿಪಡಿಸಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ತೂಕದ ಯಂತ್ರದಲ್ಲಿ ರೈತರಿಗೆ ಮೋಸವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ತೂಕದಲ್ಲಿ ರೈತರಿಗೆ ಆಗುತ್ತಿರುವ ಮೋಸವನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮವೇನು ?

## ಸಹಕಾರ ಇಲಾಖೆಯಿಂದ ರೈತರಿಗೆ ನೀಡಲಾದ ಸಾಲದ ಬಗ್ಗೆ

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೭೫ (೯೩೨) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಹಕಾರ ಇಲಾಖೆಯಿಂದ ಕಳೆದ ಒಂದು ವರ್ಷದಲ್ಲಿ ರೈತರಿಗೆ ನೀಡಲಾದ ಒಟ್ಟು ಸಾಲ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ರೈತರಿಗೆ ಕೃಷಿಗೆ ಉಪಯೋಗವಾಗುವ ಉಪಕರಣಗಳ ಖರೀದಿಗೆ ಕಳೆದ ಒಂದು ವರ್ಷಗಳಲ್ಲಿ ಎಷ್ಟು ಸಾಲ ನೀಡಲಾಗಿದೆ ಮತ್ತು ಎಷ್ಟು ಉಪಕರಣಗಳ ಖರೀದಿಗೆ ಸಾಲ ನೀಡಲಾಗಿದೆ ? (ವಿವರ ಒದಗಿಸುವುದು)

## ಬೀದರ್ ಜಿಲ್ಲೆಯಲ್ಲಿ ನಡೆಯುತ್ತಿರುವ ಅಕ್ರಮ ಮರಳು ದಂಧೆ ತಡೆಗಟ್ಟುವ ಕುರಿತು

**ಡಾ|| ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೭೬ (೯೩೩) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಅಕ್ರಮ ಮರಳು ದಂಧೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮವೇನು ;

(ಆ) ಈ ಜಿಲ್ಲೆಯಲ್ಲಿ ಅಕ್ರಮ ಮರಳುಗಾರಿಕೆಯಡಿ ದಾಖಲಾದ ಪ್ರಕರಣಗಳು ಎಷ್ಟು ; (ಪ್ರಕರಣಗಳ ವಿವರ ನೀಡುವುದು)

(ಇ) ಅಕ್ರಮ ಮರಳುಗಾರಿಕೆಯಿಂದ ನದಿ ತೀರಗಳು, ಅರಣ್ಯ ಪ್ರದೇಶವು ಬರಡು ಭೂಮಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ನದಿ ಹಾಗೂ ಅರಣ್ಯ ರಕ್ಷಣೆಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು ?

## ಕರ್ನಾಟಕ ರಾಜ್ಯ ಸಹಕಾರ ಅಪೆಕ್ಸ್ ಬ್ಯಾಂಕ್ ೨೦೨೪ರ ನವೆಂಬರ್ ತಿಂಗಳ ಕ್ಲರ್ಕ್ ಕಮ್ ಕ್ಯಾಷಿಯರ್ ಹುದ್ದೆಯ ನೇರ ನೇಮಕಾತಿ ಕುರಿತು

**ಡಾ|| ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೭೭ (೯೩೪) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಸಹಕಾರ ಅಪೆಕ್ಸ್ ಬ್ಯಾಂಕ್ ಮೂಲಕ ೨೦೨೪ ನವೆಂಬರ್ ತಿಂಗಳಿನಲ್ಲಿ ಕ್ಲರ್ಕ್ ಕಮ್ ಕ್ಯಾಷಿಯರ್ ಹುದ್ದೆಗೆ

ನೇರ ನೇಮಕಾತಿ ಮೂಲಕ ಅರ್ಜಿಗಳನ್ನು ಆಹ್ವಾನಿಸಿರುವುದು ನಿಜವೇ ;

(ಆ) ಸದರಿ ಹುದ್ದೆಗಳಿಗೆ ಲಿಖಿತ ಪರೀಕ್ಷೆಗಳನ್ನು ನಡೆಸಿದ್ದು. ವೆಬ್‌ಸೈಟ್‌ನಲ್ಲಿ ಅಂಕಪಟ್ಟಿಯನ್ನು ಪ್ರಕಟಿಸಲಾಗಿದ್ದು, ಇದುವರೆವಿಗೂ ಅಭ್ಯರ್ಥಿಗಳ ಅರ್ಹತಾ ಪಟ್ಟಿಯನ್ನು ಬಿಡುಗಡೆಗೊಳಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಅರ್ಹತಾ ಪಟ್ಟಿಯನ್ನು ಬಿಡುಗಡೆಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ; (ವಿವರ ನೀಡುವುದು)

(ಈ) ಈ ನೇಮಕಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಿ ನೇಮಕಾತಿ ಆದೇಶಗಳನ್ನು ಹೊರಡಿಸಲು ಇನ್ನು ಎಷ್ಟು ಕಾಲಾವಕಾಶ ಬೇಕಾಗುವುದು ? (ವಿವರ ನೀಡುವುದು)

## ಕೈಗಾರಿಕಾ ಯೋಜನೆಗಳಿಗೆ ದೇವನಹಳ್ಳಿಯಲ್ಲಿ ಜಮೀನು ಭೂಸ್ವಾಧೀನ ಪಡಿಸಿಕೊಳ್ಳುವ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೭೭೮ (೯೨೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಗ್ರಾಮಾಂತರ ಜಿಲ್ಲೆ ದೇವನಹಳ್ಳಿ ತಾಲ್ಲೂಕಿನ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಹತ್ತಿರ ಕೈಗಾರಿಕಾ ಪ್ರದೇಶ ಸ್ಥಾಪಿಸಲು ಸುಮಾರು ೧,೭೭೭ ಎಕರೆ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲು ಅಧಿಸೂಚನೆ ಹೊರಡಿಸಿದ್ದು, ಭೂ–ಮಾಲೀಕರಿಂದ ಭಾರಿ ವಿರೋಧದ ನಂತರ ಈಗ

ಈ ಪ್ರಸ್ತಾವನೆಯನ್ನು ಸರ್ಕಾರ ಕೈಬಿಟ್ಟಿದ್ದು ಈ ಭಾಗದ ಎಷ್ಟು ಭೂ–ಮಾಲೀಕರು ಸ್ವಯಂ ಪ್ರೇರಿತವಾಗಿ ಭೂಮಿ ನೀಡಲು ಮುಂದಾಗಿರುತ್ತಾರೆ ;

(ಆ) ಸುಮಾರು ೧,೭೭೭ ಎಕರೆ ಭೂಮಿಯ Hi-Tech Aerospace ಸ್ಥಾಪಿಸಲು ಜಮೀನು ಸ್ವಾಧೀನಪಡಿಸಿಕೊಳ್ಳಲು ಯೋಜಿಸಿದ್ದು, ಈಗ ಪ್ರಸ್ತಾವನೆಯನ್ನು ಕೈಬಿಡಲಾಗಿರುವುದರಿಂದ Hi-Tech Aerospace ಇತರೆ ರಾಜ್ಯಕ್ಕೆ ಸ್ಥಳಾಂತರವಾಗದಂತೆ ನೋಡಿಕೊಳ್ಳಲು ಸರ್ಕಾರ ಕೈಗೊಂಡ ಕ್ರಮವೇನು ;

(ಇ) ಸದರಿ ಪ್ರಸ್ತಾಪಿತ ಈ ಯೋಜನೆಯನ್ನು ಸ್ಥಾಪಿಸಲು ಇತರೆ ಜಾಗವನ್ನು ಗುರುತಿಸಲಾಗಿದೆಯೇ ? (ವಿವರಗಳನ್ನು ನೀಡುವುದು)

## ಖಾಸಗಿ ಕೈಗಾರಿಕೆ ಪ್ರದೇಶಗಳಲ್ಲಿ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳು ಕಾರ್ಯ ಚಟುವಟಿಕೆ ನಡೆಸುತ್ತಿರುವ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೭೭೯ (೯೨೬) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳು ಖಾಸಗಿ ಕೈಗಾರಿಕಾ ಪ್ರದೇಶಗಳಲ್ಲಿ ಕಾರ್ಯಚಟುವಟಿಕೆ ನಡೆಸುತ್ತಿವೆ ;

(ಆ) ರಾಜ್ಯದಲ್ಲಿ ಶೇ.೬ರಷ್ಟು ಕೈಗಾರಿಕೆಗಳು ಸರ್ಕಾರಿ ಸ್ವಾಮ್ಯದ ಕೆ.ಎಸ್.ಎಸ್.ಐ.ಡಿ.ಸಿ ಮತ್ತು ಕೆ.ಐ.ಎ.ಡಿ.ಬಿ ಪ್ರದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಾಹಿತಿ ನಿಜವೇ ;

(ಇ) ಕಳೆದ ೨–೩ ವರ್ಷಗಳಿಂದ ಕೆ.ಐ.ಎ.ಡಿ.ಬಿ ಭೂಮಿಯನ್ನು ಸ್ವಾಧೀನಪಡಿಸಿಕೊಂಡು ನಂತರ ಹಂಚಿಕೆ ದರದಲ್ಲಿ ಕೆ.ಎಸ್.ಎಸ್.ಐ.ಡಿ.ಸಿ ಗೆ ಭೂಮಿಯನ್ನು ವರ್ಗಾಯಿಸದೇ ಇರುವುದರಿಂದ ಸಾಕಷ್ಟು ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳು ಸಂಕಷ್ಟದಲ್ಲಿರುವುದು ನಿಜವೇ ;

(ಈ) ಇದ್ದಲ್ಲಿ, ಸರ್ಕಾರವು ಈ ಕುರಿತು ಯಾವ ಕ್ರಮಗಳನ್ನು ಕೈಗೊಂಡಿದೆ ? (ಮಾಹಿತಿ ನೀಡುವುದು)

## ಅಕ್ರಮ ಮರಳು ಗಣಿಗಾರಿಕೆ ತಡೆಗಟ್ಟಲು ಇಲಾಖೆಯಲ್ಲಿನ ಸಿಬ್ಬಂದಿಯ ಕೊರತೆ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೭೮೦ (೯೨೭) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಕ್ರಮ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ತಡೆಗಟ್ಟಲು ಸಿಬ್ಬಂದಿ ಕೊರತೆ ಇರುವುದು ನಿಜವೇ ;

(ಆ) ಸರ್ಕಾರದ ವತಿಯಿಂದ ಮಂಜೂರಾದ ೩೯ ಹುದ್ದೆಗಳಲ್ಲಿ ೨೭ ಹುದ್ದೆಗಳು ಭರ್ತಿಯಾಗದೇ ಖಾಲಿ ಉಳಿದಿರುವುದು ನಿಜವೇ ;

(ಇ) ಇದ್ದಲ್ಲಿ, ಈ ಹುದ್ದೆಗಳನ್ನು ಭರ್ತಿಮಾಡಲು ಇರುವ ಆಡಚಣೆಗಳೇನು ;

(ಈ) ರಾಜ್ಯದಲ್ಲಿ ಎಷ್ಟು ಜಿಲ್ಲೆಗಳಲ್ಲಿ ಈ ರೀತಿಯ ಅಕ್ರಮ ಮರಳು ಗಣಿಗಾರಿಕೆ ಬೆಳಕಿಗೆ ಬಂದಿದೆ ಮತ್ತು ಪ್ರತಿ ಜಿಲ್ಲೆಗೆ ಸರ್ಕಾರದ ವತಿಯಿಂದ ಹುದ್ದೆಗಳು ಮಂಜೂರಾಗಿದ್ದು ಎಷ್ಟು ಹುದ್ದೆಗಳು ಭರ್ತಿಯಾಗಿವೆ ; ಎಷ್ಟು ಹುದ್ದೆಗಳು ಖಾಲಿ ಇವೆ ? (ಜಿಲ್ಲಾವಾರು, ಹುದ್ದೆವಾರು ಮಾಹಿತಿ ನೀಡುವುದು)

## ಕೇಂದ್ರ ಸರ್ಕಾರದ ವತಿಯಿಂದ ರಾಜ್ಯದ ಸಹಕಾರ ಇಲಾಖೆಗೆ ನೀಡಿರುವ ಸಾಲದ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೭೮೧ (೯೨೮) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೯ ರಿಂದ ೨೦೨೫ರವರೆಗೆ ಕೇಂದ್ರ ಸರ್ಕಾರವು ರಾಜ್ಯದ ಸಹಕಾರ ಇಲಾಖೆಗೆ ಎಷ್ಟು ಸಾಲ ನೀಡಿದೆ ಮತ್ತು ಎಷ್ಟು ರೈತರು ಸಹಕಾರ ಇಲಾಖೆಯ ವ್ಯಾಪ್ತಿಯ ಕೋ–ಆಪರೇಟಿವ್ ಬ್ಯಾಂಕ್‌ಗಳಲ್ಲಿ ಸಾಲ ಪಡೆದಿದ್ದಾರೆ ; ಸಾಲ ಪಡೆದ ರೈತರಿಗೆ ಎಷ್ಟು ಬಡ್ಡಿ ದರಕ್ಕೆ ಸಾಲ ನೀಡಲಾಗುತ್ತಿದೆ ;

(ಆ) ಸಹಕಾರ ಇಲಾಖೆ ಮೂಲಕ ರೈತರು ಸಾಲ ಪಡೆಯಲು ಸರ್ಕಾರ ನಿಗದಿಪಡಿಸಿರುವ ಮಾನದಂಡನೆಗಳು ಮತ್ತು ನಿಯಮಾವಳಿಗಳೇನು ;

(ಇ) ೨೦೧೯ ರಿಂದ ೨೦೨೫ ರವರೆಗೆ ಸಹಕಾರ ಇಲಾಖೆ ಮೂಲಕ ಎಷ್ಟು ರೈತರು ಸಾಲ ಪಡೆದು ಸಾಲವನ್ನು ಮರುಪಾವತಿಸಿದ್ದಾರೆ ;

(ಈ) ಸಾಲ ಪಡೆದು ಮರುಪಾವತಿಸಲು ಸಾಧ್ಯವಾಗದೇ ಇರುವ ಪ್ರಕರಣಗಳಲ್ಲಿ ಸರ್ಕಾರವು ಸಾಲ ಮನ್ನಾ ಮಾಡಲು ಅವಕಾಶವಿದೆಯೇ ; ಇದ್ದಲ್ಲಿ, ಇದಕ್ಕೆ ಮಾನದಂಡನೆಗಳೇನು ?

## ನಗರಸಭೆ, ಪುರಸಭೆ ಮತ್ತು ಯೋಜನಾ ಪ್ರಾಧಿಕಾರಿಗಳ ವ್ಯಾಪ್ತಿಗೆ ಬರುವ ಅನಧಿಕೃತ ಬಡಾವಣೆಗಳ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೭೮೨ (೯೨೯) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿ (ಬೆಂಗಳೂರು ನಗರ ಹೊರತುಪಡಿಸಿ) ನಗರಸಭೆ, ಪುರಸಭೆ ಮತ್ತು ಸ್ಥಳೀಯ ಯೋಜನಾ ಪ್ರಾಧಿಕಾರಗಳ ವ್ಯಾಪ್ತಿಗೆ ಒಳಪಡುವ ಪ್ರದೇಶಗಳಲ್ಲಿ ಎಷ್ಟು ಅನಧಿಕೃತ ಬಡಾವಣೆಗಳು ಆಗಿವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಅನಧಿಕೃತ ಬಡಾವಣೆಗಳು ರಚನೆ ಆಗುತ್ತಿರುವ ವಿಷಯವು ಸರ್ಕಾರಕ್ಕೆ ಮಾಹಿತಿ ಇದ್ದರೂ ಸಹ ಯಾವುದೇ ಕ್ರಮ ಕೈಗೊಳ್ಳದೇ ಇರಲು ಕಾರಣಗಳೇನು ;

(ಇ) ಇತ್ತೀಚಿನ ದಿನಗಳಲ್ಲಿ ನಗರಾಭಿವೃದ್ಧಿ ಇಲಾಖೆವತಿಯಿಂದ ಹೊರಡಿಸಲಾದ ಸುತ್ತೋಲೆಯಲ್ಲಿ ಅನಧಿಕೃತ ಬಡಾವಣೆಗಳ ರಚನೆ ತಡೆಯುವಲ್ಲಿ ವಿಫಲರಾದ ಅಧಿಕಾರಿಗಳು ನಿಗದಿಪಡಿಸಲಾದ ದಂಡವನ್ನು ಪಾವತಿಸಬೇಕು ಎಂದು ತಿಳಿಸಿರುವ ಮೇರೆಗೆ ಇಲ್ಲಿಯವರೆಗೆ ಎಷ್ಟು ಪ್ರಕರಣಗಳಲ್ಲಿ ಮತ್ತು ಎಷ್ಟು ಅಧಿಕಾರಿಗಳಿಗೆ ದಂಡ ವಿಧಿಸಲಾಗಿದೆ ? (ಹುದ್ದೆವಾರು, ಸ್ಥಳೀಯ ಸಂಸ್ಥೆವಾರು ಮಾಹಿತಿ ನೀಡುವುದು)

## ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಯಲ್ಲಿ ಬೃಹತ್ ಕೈಗಾರಿಕೆಗಳನ್ನು ತರುವ ನಿಟ್ಟಿನಲ್ಲಿ ಸರ್ಕಾರ ಹಾಕಿಕೊಂಡಿರುವ ಕಾರ್ಯಕ್ರಮಗಳ ಬಗ್ಗೆ

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೮೩ (೮೬೧) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಕೃಷ್ಣಾ ಮೇಲ್ದಂಡೆ ಯೋಜನೆಯಿಂದ ಮುಳುಗಡೆಯಾಗಿ ಲಕ್ಷಾಂತರ ಜನರು

ಉದ್ಯೋಗ ಕಳೆದುಕೊಂಡಿದ್ದು ಭೂಸ್ವಾಧೀನಕ್ಕೆ ಪರಿಹಾರ ಪಡೆದಿರುತ್ತಾರೆ ; ಆದರೆ ಅವರಿಗೆ ಪುನರ್ವಸತಿ ಕಲ್ಪಿಸಲಾಗಿದ್ದು ಹೊರತುಪಡಿಸಿ ಅವರ ಬದುಕಿನ ನಿರ್ವಹಣೆಗಾಗಿ ಸರ್ಕಾರ ಇಲ್ಲಿಯವರೆಗೆ ಯಾವ ಯಾವ ಯೋಜನೆಗಳನ್ನು ಹಾಕಿಕೊಂಡಿದೆ ;

(ಆ) ಈ ಕಾರ್ಯಕ್ರಮಗಳಿಂದ ಎಷ್ಟು ಸಂತ್ರಸ್ತರು ಉದ್ಯೋಗಿಗಳಾಗಿದ್ದಾರೆ ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ತಿಳಿಸುವುದು)

(ಇ) ಹಾಗಿದ್ದಲ್ಲಿ, ಕಳೆದ ೨೦ ವರ್ಷಗಳಿಂದ ಬೃಹತ್ ಕೈಗಾರಿಕೆಗಳನ್ನು ಏನಾದರೂ ಸ್ಥಾಪಿಸಲಾಗಿದೆಯೇ ; ಅವುಗಳು ಯಾವುವು ;

(ಈ) ಈ ಭಾಗದಲ್ಲಿ ಸರ್ಕಾರ ಯಾವುದಾದರೂ ಕಾರ್ಯಕ್ರಮ ಹಾಕಿಕೊಂಡಿದೆಯೇ ; ಯಾವುದಾದರೂ ಉದ್ಯಮಿಗಳೊಂದಿಗೆ ಒಡಂಬಡಿಕೆ ಮಾಡಿಕೊಳ್ಳಲಾಗಿದೆಯೇ ; ಮಾಡಿಕೊಂಡಿದ್ದರೆ, ಯಾವ ಉದ್ಯಮಗಳಿಗಾಗಿ ಒಳಂಬಡಿಕೆ ಮಾಡಿಕೊಳ್ಳಲಾಗಿದೆ ?

## ನೂತನವಾಗಿ ಮೇಲ್ದರ್ಜೆಗೇರಿಸಿದ ಬಾಗಲಕೋಟೆಯ ಶಿರೂರು, ಲೋಕಾಪುರ, ವಿಜಯಪುರ, ಬಬಲೇಶ್ವರ ಮತ್ತು ತಿಕೋಟ ಪಟ್ಟಣ ಪಂಚಾಯಿತಿಗಳಿಗೆ ಚುನಾವಣೆ ನಡೆಸುವ ಬಗ್ಗೆ

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೮೪ (೮೬೨) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗ್ರಾಮ ಪಂಚಾಯಿತಿಗಳನ್ನು ಜನಸಂಖ್ಯೆಗೆ ಅನುಗುಣವಾಗಿ ಪಟ್ಟಣ ಪಂಚಾಯಿತಿಗಳಾಗಿ ಮಾಡಿದೆ ; ಬಾಗಲಕೋಟೆ ಜಿಲ್ಲೆಯ ಶಿರೂರು, ಲೋಕಾಪುರ, ವಿಜಯಪುರ

ಜಿಲ್ಲೆಯಲ್ಲಿ ಬಬಲೇಶ್ವರ ಮತ್ತು ತಿಕೋಟ ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಗಳೆಂದು ಪರಿಗಣಿಸಿ ಘೋಷಣೆ ಮಾಡಲಾಗಿದೆಯೇ ;

(ಆ) ನೂತನವಾಗಿ ಪಟ್ಟಣ ಪಂಚಾಯಿತಿಗಳೆಂದು ಘೋಷಣೆ ಮಾಡಿರುವ ಸಂಸ್ಥೆಗಳಿಗೆ ಕಳೆದ ೪ ವರ್ಷಗಳಿಂದ ಚುನಾವಣೆ ನಡೆಸದೇ ಇರುವ ಕಾರಣಕ್ಕೆ ಸ್ಥಳೀಯವಾಗಿ ಜನಪ್ರತಿನಿಧಿಗಳು ಇಲ್ಲದ ಕಾರಣಕ್ಕಾಗಿ ಕೇವಲ ಅಧಿಕಾರಿಗಳ ಮುಖಾಂತರ ಬಂದಿರುವುದರಿಂದ ಅಭಿವೃದ್ಧಿ ಚಟುವಟಿಕೆಗಳು ಕುಂಟಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಸಂಸ್ಥೆಗಳಿಗೆ ಚುನಾವಣೆ ನಡೆಸುವುದು ಯಾವಾಗ ? (ಮಾಹಿತಿ ಒದಗಿಸುವುದು)

## ಭದ್ರತಾ ಠೇವಣಿ ಮರು ಪಾವತಿಯಾಗದೇ ಇರುವ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ .ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೮೫ (೮೬೩) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಹಣಕಾಸು/ಗಿರವಿ/ ಲೇವಾದೇವಿ ಸಂಸ್ಥೆಗಳನ್ನು ಪ್ರಾರಂಭಿಸುವಾಗ ಹಲವು ಸಂಸ್ಥೆಗಳು ಭದ್ರತಾ ಠೇವಣಿಯನ್ನು ಸರ್ಕಾರಕ್ಕೆ ಪಾವತಿಸಿದ್ದು, ಸದರಿ ಸಂಸ್ಥೆಗಳು ತಮ್ಮ ವ್ಯವಹಾರವನ್ನು ಮುಕ್ತಾಯಗೊಳಿಸಿ ವ್ಯಾಪಗತವಾದ ಭದ್ರತಾ ಠೇವಣಿಯನ್ನು ಹಿಂತಿರುಗಿಸುವಂತೆ ಸಂಬಂಧಿಸಿದ ಸಹಕಾರ ಸಂಘಗಳ ಉಪ/ಸಹಾಯಕ ನಿಬಂಧಕರಿಗೆ ಅರ್ಜಿ ಸಲ್ಲಿಸಿ ಹಲವು ವರ್ಷಗಳೇ ಕಳೆದಿದ್ದರೂ, ಅವರಿಗೆ ಇದುವರೆಗೂ ಭದ್ರತಾ ಠೇವಣಿ ಮರು ಪಾವತಿಯಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ವ್ಯಾಪಗತವಾದ ಭದ್ರತಾ ಠೇವಣಿಯನ್ನು ಹಿಂತಿರುಗಿಸುವಂತೆ ಎಷ್ಟು ಸಂಸ್ಥೆಗಳು, ಯಾವ ದಿನಾಂಕದಂದು ಅರ್ಜಿ ಸಲ್ಲಿಸಿದ್ದಾರೆ ಮತ್ತು ಅರ್ಜಿ ಸಲ್ಲಿಸಿರುವ ಪ್ರತಿ ಸಂಸ್ಥೆಗೆ ಮರು ಪಾವತಿಯಾಗಬೇಕಾಗಿರುವ ಮೊತ್ತವೆಷ್ಟು ; (ಪ್ರತಿ ಸಂಸ್ಥೆಯ ವಿವರಗಳನ್ನು ಪ್ರತ್ಯೇಕವಾಗಿ ನೀಡುವುದು)

(ಇ) ಸದರಿ ವ್ಯಾಪಗತವಾದ ಭದ್ರತಾ ಠೇವಣಿಯನ್ನು ಹಿಂತಿರುಗಿಸುವಂತೆ ಕೋರಿರುವವರಿಗೆ ಮರು ಪಾವತಿ ಮಾಡಲು ಸರ್ಕಾರ ಇದುವರೆಗೆ ಏನು ಕ್ರಮ ಕೈಗೊಂಡಿದೆ ;

(ಈ) ಯಾವ ಕಾಲಮಿತಿಯೊಳಗೆ ಸದರಿ ಸಂಸ್ಥೆಗಳ ಭದ್ರತಾ ಠೇವಣಿಯನ್ನು ಮರು ಪಾವತಿ ಮಾಡಲಾಗುವುದು ?

## ದಕ್ಷಿಣ ಕನ್ನಡ ಜಿಲ್ಲೆಯ ಅಡಿಕೆ ಬೆಳೆಗಾರರಿಗೆ ಪರಿಹಾರ ನೀಡುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ .ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೮೬ (೮೬೪) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅವಧಿಗೆ ಮುನ್ನ ಹಾಗೂ ಅತಿಯಾದ ನಿರಂತರ ಮಳೆಯಿಂದಾಗಿ ಅಡಿಕೆಗೆ ಕೊಳೆರೋಗ ತೀವ್ರವಾಗಿ ಭಾದಿಸಿರುವುದರಿಂದ ಅಡಿಕೆ ನಳ್ಳಿ(ಮಿಡಿ) ವಿಪರೀತ ಮಟ್ಟದಲ್ಲಿ ಉದುರಿಹೋಗಿ, ಫಸಲು ಕುಸಿದಿರುವುದರಿಂದ ಅಡಿಕೆ ಬೆಳೆಗಾರರಿಗೆ ತುಂಬಾ ನಷ್ಟವಾಗಿದ್ದು, ಅವರು ಆರ್ಥಿಕವಾಗಿ ತೀವ್ರ ತೊಂದರೆಗೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಜಿಲ್ಲೆಯಲ್ಲಿ ಅಕಾಲಿಕ ಹಾಗೂ ಅತೀ ಮಳೆಯಿಂದಾಗಿ ಅಡಿಕೆ ಬೆಳೆಗಾರರಿಗೆ ಆಗಿರುವ ನಷ್ಟದ ಅಂದಾಜು ಮೊತ್ತವೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಜಿಲ್ಲೆಯಲ್ಲಿ ಅಕಾಲಿಕ ಹಾಗೂ ಅತಿಯಾದ ನಿರಂತರ ಮಳೆಯಿಂದಾಗಿ ಆರ್ಥಿಕ ನಷ್ಟಕೊಳಗಾಗಿರುವ ಅಡಿಕೆ ಬೆಳೆಗಾರರಿಗೆ ಯಾವ ರೀತಿಯಲ್ಲಿ ನೆರವು ಮತ್ತು ಸಹಾಯವನ್ನು ಈಗಾಗಲೇ ಒದಗಿಸಲಾಗಿದೆ ಮತ್ತು ಪರಿಹಾರ ನೀಡುವ ನಿಟ್ಟಿನಲ್ಲಿ ಇದುವರೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಜಿಲ್ಲೆಯ ಅಡಿಕೆ ಬೆಳೆಗಾರರಿಗೆ ತುರ್ತಾಗಿ ಪರಿಹಾರ ನೀಡಲು ಅಗತ್ಯ ಕ್ರಮ ವಹಿಸುವುದರ ಮೂಲಕ ಸಂಕಷ್ಟದಲ್ಲಿರುವ ಅಡಿಕೆ ಬೆಳೆಗಾರರ ಹಿತರಕ್ಷಣೆಗೆ ಸರ್ಕಾರ ಈ ಕೂಡಲೇ ಮುಂದಾಗುವುದೇ ?

## ಬೆಳ್ತಂಗಡಿ ತಾಲ್ಲೂಕಿನಲ್ಲಿ ಮರಳು ಪೂರೈಕೆ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ .ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೮೭ (೮೬೫) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನಲ್ಲಿ ಬೇಡಿಕೆಗನುಗುಣವಾಗಿ ಮರಳು ಪೂರೈಕೆಯಾಗದೇ ಇರುವುದರಿಂದ ಕಟ್ಟಡ ನಿರ್ಮಾಣ ಸಂಪೂರ್ಣವಾಗಿ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಬೆಳ್ತಂಗಡಿ ತಾಲ್ಲೂಕಿನಲ್ಲಿ ಸುಮಾರು ಒಟ್ಟು ೬೮ ಕಡೆಗಳಲ್ಲಿ ಮರಳು ತೆಗೆಯಬಲ್ಲ ಬ್ಲಾಕ್‌ಗಳನ್ನು

ಈಗಾಗಲೇ ಗುರುತಿಸಿ ವರದಿ ಸಲ್ಲಿಸಲಾಗಿದ್ದರೂ, ಸದರಿ ಗುರುತಿಸಿರುವ ಸ್ಥಳಗಳಲ್ಲಿ ಮರಳು ತೆಗೆಯಲು ಇದುವರೆವಿಗೂ ಅವಕಾಶ ಕಲ್ಪಿಸದಿರಲು ಕಾರಣಗಳೇನು ;

(ಇ) ಯಾವ ಕಾಲಮಿತಿಯೊಳಗೆ ಬೆಳ್ತಂಗಡಿ ತಾಲ್ಲೂಕಿನಲ್ಲಿ ಕಟ್ಟಡ ನಿರ್ಮಾಣ ಕ್ಷೇತ್ರಕ್ಕೆ ಅತ್ಯವಶ್ಯವಾಗಿ ಬೇಕಾಗಿರುವ ಮರಳು ಬೇಡಿಕೆಗನುಗುಣವಾಗಿ ಸಕಾಲದಲ್ಲಿ ಪೂರೈಕೆಯಾಗಲು ಅನುವಾಗುವಂತೆ ಈಗಾಗಲೇ ಗುರುತಿಸಿರುವ ಸುಮಾರು ಒಟ್ಟು ೬೮ ಸ್ಥಳಗಳಲ್ಲಿ ಮರಳು ತೆಗೆಯಲು ಅವಕಾಶ ಕಲ್ಪಿಸಲಾಗುವುದು ?

## ತೆಂಗು ಬೆಳೆಯನ್ನು ಕಾಡುತ್ತಿರುವ ಕಪ್ಪು ತಲೆ ಹುಳುವಿನ ಬಾಧೆ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ .ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೮೮ (೮೬೬) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ತೆಂಗು ಬೆಳೆಯನ್ನು ಕಾಡುತ್ತಿರುವ ಕಪ್ಪು ತಲೆ ಹುಳುವಿನ ಬಾಧೆಯಿಂದಾಗಿ ತೆಂಗಿನ ಮರಗಳು ಒಣಗಿ ಇಡೀ ತೋಟಗಳೇ ನಾಶವಾಗುತ್ತಿರುವುದರಿಂದ, ಬಹುವಾರ್ಷಿಕ ನಿರೀಕ್ಷಿತ ಆದಾಯವನ್ನು ಶಾಶ್ವತವಾಗಿ ಕಳೆದುಕೊಂಡು ತೆಂಗು ಬೆಳೆಗಾರರು ಅತೀವ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ರಾಜ್ಯದಲ್ಲಿ ತೆಂಗು ಬೆಳೆಯ ಒಟ್ಟು ವಿಸ್ತೀರ್ಣವೆಷ್ಟು ಮತ್ತು ಸದರಿ ಬೆಳೆ ವಿಸ್ತೀರ್ಣದಲ್ಲಿದ್ದ ತೆಂಗಿನ ಮರಗಳ ಸಂಖ್ಯೆ ಎಷ್ಟು ; ಸದರಿ ಬೆಳೆ ವಿಸ್ತೀರ್ಣದಲ್ಲಿ ಕಪ್ಪು ತಲೆ ಹುಳುವಿನ

ಬಾಧೆಯಿಂದಾಗಿ ಇದುವರೆಗೆ ಎಷ್ಟು ತೆಂಗಿನ ಮರಗಳು ಒಣಗಿ ನಾಶವಾಗಿವೆ ; ರೈತರಿಗೆ ಇದರಿಂದಾಗಿ ಆಗಿರುವ ನಷ್ಟದ ವಿವರಗಳೇನು ; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ತೆಂಗು ಬೆಳೆಯನ್ನು ಕಾಡುತ್ತಿರುವ ಕಪ್ಪು ತಲೆ ಹುಳುವಿನ ಬಾಧೆಯಿಂದಾಗಿ ತೆಂಗಿನ ಮರಗಳು ಒಣಗಿ ಇಡೀ ತೋಟಗಳೇ ನಾಶವಾಗುತ್ತಿರುವುದರಿಂದ, ತೆಂಗು ಉಳಿಸಲು ಇದುವರೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ತೆಂಗು ಬೆಳೆಯನ್ನು ಕಾಡುತ್ತಿರುವ ಕಪ್ಪು ತಲೆ ಹುಳುವಿನ ಬಾಧೆಯಿಂದಾಗಿ, ಬಹುವಾರ್ಷಿಕವಾಗಿ ದೊರೆಯುತ್ತಿದ್ದ ಬೆಳೆ ಉತ್ಪನ್ನವನ್ನು ಶಾಶ್ವತವಾಗಿ ಕಳೆದುಕೊಂಡು ಆರ್ಥಿಕವಾಗಿ ಅತ್ಯಂತ ದೊಡ್ಡ ಮಟ್ಟದಲ್ಲಿ ನಷ್ಟಕ್ಕೊಳಗಾಗಿರುವ ತೆಂಗು ಬೆಳೆಗಾರರಿಗೆ ಸರ್ಕಾರ ಇದುವರೆಗೆ ನೀಡಿರುವ ಪರಿಹಾರದ ವಿವರಗಳೇನು ? (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

## ಪಟ್ಟಣ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರುಗಳ ಗೌರವಧನವನ್ನು ಹೆಚ್ಚಿಸುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ .ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೮೯ (೮೬೭) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಪಟ್ಟಣ ಪಂಚಾಯಿತಿಗಳ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರುಗಳ ಗೌರವಧನವನ್ನು ಗಣನೀಯವಾಗಿ ಹೆಚ್ಚಿಸಬೇಕೆಂಬ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ರಾಜ್ಯದಲ್ಲಿ ಪಟ್ಟಣ ಪಂಚಾಯಿತಿಗಳ ಅಧ್ಯಕ್ಷರು ಉಪಾಧ್ಯಕ್ಷರು ಹಾಗೂ ಸದಸ್ಯರುಗಳಿಗೆ ಪ್ರಸ್ತುತ ನೀಡುತ್ತಿರುವ ಗೌರವಧನದ ವಿವರಗಳೇನು ;

(ಇ) ಸಾರ್ವಜನಿಕರ ಸಮಸ್ಯೆಗಳನ್ನು ಪರಿಹರಿಸಲು ನಿರಂತರವಾಗಿ ವ್ಯವಹರಿಸುವ ಮತ್ತು ಸ್ಪಂದಿಸುವ ಪಟ್ಟಣ ಪಂಚಾಯಿತಿಗಳ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರುಗಳ ಗೌರವಧನವನ್ನು ಗಣನೀಯವಾಗಿ ಹೆಚ್ಚಿಸಲು ಯಾವ ಕಾಲಮಿತಿಯೊಳಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ?

## ಮಹಾನಗರ ಪಾಲಿಕೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಪೌರ ಕಾರ್ಮಿಕರ ಸೇವೆ ಖಾಯಂ ಮಾಡುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೯೦ (೮೧೭) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಮಹಾನಗರ ಪಾಲಿಕೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪೌರ ಕಾರ್ಮಿಕರ ಒಟ್ಟು ಸಂಖ್ಯೆ ಎಷ್ಟು ; (ಪಾಲಿಕೆವಾರು ವಿವರ ನೀಡುವುದು)

(ಆ) ಪೌರಕಾರ್ಮಿಕರಿಗೆ ನೀಡುತ್ತಿರುವ ವೇತನ ಎಷ್ಟು ; ವೇತನದ ಜೊತೆಗೆ ಇಡುಗಂಟು, ಪಿಂಚಣಿ ಸೇರಿದಂತೆ ನೀಡುತ್ತಿರುವ ಇನ್ನಿತರೆ ಸೌಲಭ್ಯಗಳೇನು ;

(ಇ) ಬಿಬಿಎಂಪಿ ಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪೌರ ಕಾರ್ಮಿಕರ ಸೇವೆಯನ್ನು ಖಾಯಂಗೊಳಿಸಲು ಸರ್ಕಾರ ಚಿಂತನೆ ನಡೆಸಿದೆಯೇ ; ಈ ವಿಚಾರದಲ್ಲಿ ಸರ್ಕಾರದ ನಿಲುವೇನು ;

(ಈ) ಈ ಪೌರ ಕಾರ್ಮಿಕರ ವೇತನ ಹೆಚ್ಚಳ ಮಾಡುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ ;

## ಶೂನ್ಯ ಬಡ್ಡಿ ರಹಿತ ಅಲ್ಪಾವಧಿ ಕೃಷಿ ಸಾಲ ಹೆಚ್ಚಳ ಮಾಡುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೯೧ (೮೨೨) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩–೨೪ನೇ ಸಾಲಿನ ಬಜೆಟ್‌ನಲ್ಲಿ ಶೂನ್ಯ ಬಡ್ಡಿ ರಹಿತ ಅಲ್ಪಾವಧಿ ಕೃಷಿ ಸಾಲವನ್ನು ಹೆಚ್ಚಳ ಮಾಡುವ ಘೋಷಣೆ ಮಾಡಲಾಗಿದ್ದು, ಈ ಕುರಿತು ಆದೇಶ ಹೊರಡಿಸಲಾಗಿದೆಯೇ ; (ಆದೇಶದ ಪ್ರತಿ ನೀಡುವದು)

(ಆ) ರೈತರಿಗೆ ಬಡ್ಡಿ ರಹಿತ ಕೃಷಿ ಸಾಲ ನೀಡಲು ಸರ್ಕಾರ ವಿಧಿಸಿರುವ ಮಾನದಂಡಗಳೇನು ; ಎಷ್ಟು ರೈತರಿಗೆ ಸಾಲ ನೀಡುವ ಗುರಿ ಹೊಂದಲಾಗಿತ್ತು ;

(ಇ) ಕಳೆದ ೨ ವರ್ಷದಿಂದ ಸದರಿ ಯೋಜನೆಯಿಂದ ಎಷ್ಟು ರೈತರಿಗೆ ಕೃಷಿ ಸಾಲ ನೀಡಲಾಗಿದೆ ; ಎಷ್ಟು ರೈತರು ಸಾಲ ಮರುಪಾವತಿ ಮಾಡಿದ್ದಾರೆ ; (ವರ್ಷವಾರು/ಜಿಲ್ಲಾವಾರು ವಿವರ ಒದಗಿಸುವುದು)

(ಈ) ಸಕಾಲದಲ್ಲಿ ಸಾಲ ಮರು ಪಾವತಿಮಾಡಿರುವ ರೈತರಿಗೆ ಸರ್ಕಾರ ಬಡ್ಡಿ ರಿಯಾಯಿತಿ ನೀಡಿದೆಯೇ ; ಎಷ್ಟು ರೈತರು ಬಡ್ಡಿ ರಿಯಾಯಿತಿ ಲಾಭ ಪಡೆದಿದ್ದಾರೆ ? (ಜಿಲ್ಲಾವಾರು ವಿವರ ನೀಡುವುದು)

## ಕೆ.ಐ.ಎ.ಡಿ.ಬಿ. ಸ್ವಾಧೀನಪಡಿಸಿಕೊಂಡಿರುವ ಭೂಮಿಯ ಹಂಚಿಕೆ/ ಬಳಕೆ ಕುರಿತು

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೯೨ (೮೨೩) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷದಿಂದ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ಕೈಗಾರಿಕಾ ಉದ್ದೇಶಕ್ಕೆ ಎಷ್ಟು ಎಕರೆ ಕೃಷಿ ಭೂಮಿಯನ್ನು ಭೂಸ್ವಾಧೀನಪಡಿಸಿಕೊಂಡಿದೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಕೆ.ಐ.ಎ.ಡಿ.ಬಿ.ಯು ರೈತರಿಂದ ಭೂಸ್ವಾಧೀನ ಮಾಡಿಕೊಂಡ ಭೂಮಿಗೆ ಎಷ್ಟು ಪರಿಹಾರ ಮೊತ್ತವನ್ನು ನಿಗದಿ ಮಾಡಿದೆ ; ಎಲ್ಲಾ ಭೂ ಮಾಲೀಕರಿಗೆ ಭೂ ಪರಿಹಾರ ಮೊತ್ತವನ್ನು ಪಾವತಿಸಲಾಗಿದೆಯೇ ; ಎಷ್ಟು ರೈತರಿಗೆ ಭೂ ಪರಿಹಾರ ಮೊತ್ತ ನೀಡಲು ಬಾಕಿ ಇದೆ ; ಬಾಕಿಯಿರುವ ಪರಿಹಾರ ಮೊತ್ತವನ್ನು ಯಾವ ಕಾಲಮಿತಿಯೊಳಗೆ ಬಿಡುಗಡೆ ಮಾಡಲಾಗುವುದು ; (ಜಿಲ್ಲಾವಾರು ವಿವರ ಒದಗಿಸುವುದು)

(ಇ) ಕೆ.ಐ.ಎ.ಡಿ.ಬಿ. ಭೂಸ್ವಾಧೀನ ಮಾಡಿಕೊಂಡ ಜಾಗವನ್ನು ಪೂರ್ಣ ಪ್ರಮಾಣದಲ್ಲಿ ಬಳಕೆ ಮಾಡಿಕೊಂಡಿದೆಯೇ ; ಬಳಕೆಯಾಗದೇ ಇರುವ ಜಾಗ ಎಷ್ಟು ; (ಜಿಲ್ಲಾವಾರು ಸರ್ವೆ ನಂ ಸಹಿತ ವಿವರ ನೀಡುವುದು)

(ಈ) ಕೆ.ಐ.ಎ.ಡಿ.ಬಿ. ಅಭಿವೃದ್ಧಿ ಪಡಿಸಿರುವ ಪ್ರದೇಶದಲ್ಲಿ ಯಾವ ಯಾವ ಕೈಗಾರಿಕೆಗಳಿಗೆ ಎಷ್ಟು ಭೂಮಿ ಹಂಚಿಕೆ ಆಗಿದೆ ; ಎಷ್ಟು ಕೈಗಾರಿಕೆಗಳು ಆರಂಭವಾಗಿದೆ ; ಆರಂಭವಾಗದಿದ್ದಲ್ಲಿ, ಯಾವಾಗ ಆರಂಭವಾಗುವುದು ;

(ಉ) ಉದ್ಯಮಗಳನ್ನು ಸ್ಥಾಪಿಸುವವರು ಉಳ್ಳವರೇ ಆಗಿರುತ್ತಾರೆಂಬುದನ್ನು ಸರ್ಕಾರ ಒಪ್ಪುತ್ತದೆಯೇ ; ಹಾಗಿದ್ದಲ್ಲಿ, ನಿವೇಶನ ಹಂಚಿಕೆ ಮತ್ತು ನೋಂದಣಿ ಮಾಡುವಾಗ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಉದ್ಯಮಿಗಳಿಗೆ ಶೇ.೭೫ ವಿನಾಯಿತಿ ನೀಡುತ್ತಿದ್ದು, ಈ ಮಾನದಂಡವನ್ನು ಎಲ್ಲಾ ವರ್ಗದ ಜನಾಂಗದ ಉದ್ಯಮಿಗಳಿಗೆ ವಿಸ್ತರಿಸುವ ಕುರಿತು ಸರ್ಕಾರದ ನಿಲುವೇನು ?

## ಮಹಾನಗರ ಪಾಲಿಕೆಯಲ್ಲಿ ಸೇವೆ ಸಲ್ಲಿಸುತ್ತಿರುವ ಸಿಬ್ಬಂದಿಗಳ ಬೇಡಿಕೆಗಳ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೯೩ (೮೨೪) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಮಹಾನಗರ ಪಾಲಿಕೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಒಟ್ಟು ಸಿಬ್ಬಂದಿಗಳೆಷ್ಟು ; (ಮಹಾನಗರ ಪಾಲಿಕೆವಾರು ಸಿಬ್ಬಂದಿಗಳ ವಿವರ ನೀಡುವುದು)

(ಆ) ಈ ಸಿಬ್ಬಂದಿಗಳಿಗೆ ನೀಡುತ್ತಿರುವ ವೇತನ ಎಷ್ಟು ; ವೇತನದ ಜೊತೆಗೆ ನೀಡುತ್ತಿರುವ ಇನ್ನಿತರೆ ಸೌಲಭ್ಯಗಳೇನು ;

(ಇ) ಈ ಪಾಲಿಕೆ ಸಿಬ್ಬಂದಿಗಳು ನಾನಾ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಪ್ರತಿಭಟನೆ ನಡೆಸಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಅವರ ಬೇಡಿಕೆಗಳೇನು ;

(ಈ) ಇವರ ಬೇಡಿಕೆಗಳನ್ನು ಈಡೇರಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ ; ಎಷ್ಟು ಬೇಡಿಕೆಗಳನ್ನು ಈಡೇರಿಸಲಾಗಿದೆ ; ಬಾಕಿ ಬೇಡಿಕೆಗಳ ಈಡೇರಿಕೆ ಕುರಿತು ಸರ್ಕಾರದ ನಿಲುವೇನು ?

## ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸಿಬ್ಬಂದಿಗಳ ಕೊರತೆ ಇರುವ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೯೪ (೮೫೪) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಗ್ರಾಮಾಂತರ ಮತ್ತು ಬೆಂಗಳೂರು ದಕ್ಷಿಣ ಜಿಲ್ಲೆಯಲ್ಲಿರುವ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿಗಳಲ್ಲಿ

ಅಧಿಕಾರಿ ಮತ್ತು ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಜಿಲ್ಲೆಗಳ ನಗರಸಭೆ/ ಪುರಸಭೆ/ ಪಟ್ಟಣ ಪಂಚಾಯಿತಿಗಳಿಗೆ ಮಂಜೂರಾದ ಅಧಿಕಾರಿ ಮತ್ತು ಇತರೆ ಸಿಬ್ಬಂದಿಗಳ ಹುದ್ದೆಗಳೆಷ್ಟು ; ಹಾಲಿ ತುಂಬಿರುವ ಹುದ್ದೆಗಳೆಷ್ಟು ; ಖಾಲಿ ಇರುವ ಹುದ್ದೆಗಳೆಷ್ಟು ; (ಕಛೇರಿವಾರು ವಿವರ ನೀಡುವುದು)

(ಇ) ಈ ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಗ್ರಾಮೀಣ ಪ್ರದೇಶಗಳಲ್ಲಿ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸುವ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೯೫ (೮೫೫) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪಟ್ಟಣ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರ ರೂಪಿಸಿರುವ ಯೋಜನೆಗಳು ಯಾವುವು ; ಈ ಯೋಜನೆಗಳಡಿ ಕಳೆದ ೩ ವರ್ಷಗಳಲ್ಲಿ ಬೆಂಗಳೂರು ಗ್ರಾಮಾಂತರ ಮತ್ತು ರಾಮನಗರ ಜಿಲ್ಲೆಯಲ್ಲಿ ಸ್ಥಾಪನೆಯಾಗಿರುವ ಸಣ್ಣ ಕೈಗಾರಿಕೆಗಳ ಸಂಖ್ಯೆ ಎಷ್ಟು ; (ಆದೇಶದ ಪ್ರತಿಯೊಂದಿಗೆ ಸಂಪೂರ್ಣ ವಿವರವನ್ನು ನೀಡುವುದು)

(ಆ) ಬೆಂಗಳೂರು ಗ್ರಾಮಾಂತರ ಮತ್ತು ರಾಮನಗರ ಜಿಲ್ಲಾ ವ್ಯಾಪ್ತಿಯಲ್ಲಿ ಯಾವ ಯಾವ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಅವಕಾಶಗಳಿವೆ ಮತ್ತು ಸಣ್ಣ ಕೈಗಾರಿಕೆಗಳ ಒಂದು ಕೈಗಾರಿಕಾ ಪ್ರದೇಶ ಸ್ಥಾಪಿಸಲು ಇರುವಂತಹ ಮನದಂಡಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಮತ್ತು ಹಿಂದುಳಿದ ವರ್ಗದವರಿಗೆ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರದ ವತಿಯಿಂದ ಯಾವ ಯಾವ ಯೋಜನೆಗಳನ್ನು ರೂಪಿಸಿ ಸಾಲ ಸೌಲಭ್ಯ ಸಹಾಯಧನ ನೀಡಲಾಗುತ್ತಿದೆ ? (ಸಂಪೂರ್ಣ ವಿವರ ನೀಡುವುದು)

## KIADB ಸ್ವಾಧೀನ ಮಾಡಿಕೊಂಡಿರುವ ಜಮೀನುಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೯೬ (೮೫೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಕೆ.ಐ.ಎ.ಡಿ.ಬಿ ವತಿಯಿಂದ ಬೆಂಗಳೂರು ಗ್ರಾಮಾಂತರ ಮತ್ತು ರಾಮನಗರ ಜಿಲ್ಲೆಯಲ್ಲಿ ಎಷ್ಟು ಎಕರೆ ಜಮೀನನ್ನು ಯಾವ ಯಾವ ಉದ್ದೇಶಗಳಿಗಾಗಿ ಭೂಸ್ವಾಧೀನ ಮಾಡಿಕೊಳ್ಳಲಾಗಿದೆ ; (ಸರ್ವೆ ನಂಬರ್ ಸಹಿತ ಸ್ವಾಧೀನ ಪಡಿಸಿಕೊಂಡ ದಿನಾಂಕ ಮತ್ತು ಆದೇಶಗಳೊಂದಿಗೆ ಹೋಬಳಿವಾರು ಮಾಹಿತಿ ನೀಡುವುದು)

(ಆ) ಕೆ.ಐ.ಎ.ಡಿ.ಬಿ ವತಿಯಿಂದ ಬೆಂಗಳೂರು ಗ್ರಾಮಾಂತರ ಮತ್ತು ರಾಮನಗರ ಜಿಲ್ಲಾ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಸ್ವಾಧೀನ ಮಾಡಿಕೊಂಡಿರುವ ಜಮೀನನ್ನು ಯಾವ ದರಗಳಲ್ಲಿ ರೈತರಿಂದ ಖರೀದಿಸಲಾಗಿದೆ ಮತ್ತು ಯಾವ ದರದಲ್ಲಿ ಕೈಗಾರಿಕೆಗಳಿಗೆ ನಿವೇಶನ ಹಂಚಿಕೆ ಮಾಡಿದೆ ; (ವಿವರಗಳನ್ನು ಆದೇಶಗಳ ಸಹಿತ ಒದಗಿಸುವುದು)

(ಇ) ಕೆ.ಐ.ಎ.ಡಿ.ಬಿ ಒಮ್ಮೆ ಸ್ವಾಧೀನ ಪಡಿಸಿಕೊಂಡ ಜಮೀನನ್ನು ಎಷ್ಟು ವರ್ಷಗಳ ಒಳಗೆ ಉದ್ದೇಶಿತ ಯೋಜನೆಗೆ ಬಳಸಿಕೊಳ್ಳಬೇಕೆಂಬ ನಿಯಮವಿದೆ ; (ಆದೇಶ ಅಧಿನಿಯಮ ಸಹಿತ ಮಾಹಿತಿ ನೀಡುವುದು)

(ಈ) ಬೆಂಗಳೂರು ಗ್ರಾಮಾಂತರ ಜಿಲ್ಲಾ ವ್ಯಾಪ್ತಿಯಲ್ಲಿ ಕೆ.ಐ.ಎ.ಡಿ.ಬಿ ಯವರಿಗೆ ಭೂಮಿ ನೀಡಲು ವಿರೋಧಿಸಿ ರೈತರು ನಡೆಸಿರುವ ಪ್ರತಿಭಟನೆಗಳ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಸಕ್ಕರೆ ಕಾರ್ಖಾನೆಯು ರೈತರಿಗೆ ಬಾಕಿ ಮೊತ್ತ ಪಾವತಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೯೭ (೯೨೨) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಇರುವ ಸಕ್ಕರೆ ಕಾರ್ಖಾನೆಗಳು ಎಷ್ಟು ; ಇದರಲ್ಲಿ ಸರ್ಕಾರಿ, ಅರೆ ಸರ್ಕಾರಿ ಹಾಗೂ ಖಾಸಗಿ ಸಕ್ಕರೆ ಕಾರ್ಖಾನೆಗಳು ಎಷ್ಟು ; (ಹೆಸರಿನೊಂದಿಗೆ ವಿವರ ನೀಡುವುದು)

(ಆ) ಎಷ್ಟು ಸಕ್ಕರೆ ಕಾರ್ಖಾನೆಗಳು ಕಳೆದ 2 ವರ್ಷಗಳಲ್ಲಿ ರೈತರಿಗೆ ಕಬ್ಬು ಖರೀದಿಯ ಮೊತ್ತ ಬಾಕಿ ಇರಿಸಿದೆ ; ಸಕ್ಕರೆ ಕಾರ್ಖಾನೆಗಳ ಹೆಸರು ಮಾಲೀಕರ ಹೆಸರಿನೊಂದಿಗೆ ಎಷ್ಟು ಮೊತ್ತ ಬಾಕಿ ಇದೆ ; (ಸಂಪೂರ್ಣ ವಿವರ ನೀಡುವುದು)

(ಇ) ಸಕ್ಕರೆ ಕಾರ್ಖಾನೆಯಗಳು ಸರ್ಕಾರಕ್ಕೆ ವಿದ್ಯುತ್ ಮತ್ತು ಇಥೆನಾಲ್ ಪೂರೈಸಿದ ಕುರಿತು ಸರ್ಕಾರವು ಎಷ್ಟು ಮೊತ್ತ ಪಾವತಿಸಬೇಕಾಗಿದೆ ; ಯಾವ ಯಾವ ಸಕ್ಕರೆ ಕಾರ್ಖಾನೆಗಳಿಗೆ ಎಷ್ಟು ಮೊತ್ತ ಬಾಕಿ ಇದೆ ? (ಹೆಸರಿನೊಂದಿಗೆ ಬಾಕಿ ಮೊತ್ತದ ವಿವರ ನೀಡುವುದು)

## ಸೆಂಚುರಿ ಕ್ಲಬ್ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೯೮ (೯೨೪) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಬ್ಬನ್ ಪಾರ್ಕ್ ಆವರಣದಲ್ಲಿರುವ ಸೆಂಚುರಿ ಪಾರ್ಕ್ ಕ್ಲಬ್ ಸಾರ್ವಜನಿಕ ಸಂಸ್ಥೆ ಎಂಬುದಾಗಿ ಮಾನ್ಯ ರಾಜ್ಯ ಉಚ್ಚ ನ್ಯಾಯಾಲಯ ಆದೇಶಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಸದರಿ ಕ್ಲಬ್‌ನ್ನು ಸರ್ಕಾರದ ವಶಕ್ಕೆ ಪಡೆಯಲು ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಆ) ಕ್ಲಬ್‌ಗಳಿಗಾಗಿ ಸದನದ ವಿಶೇಷ ಸದನ ಸಮಿತಿ ಸಲ್ಲಿಸಿದ ವರದಿಯ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು ; ಈ ಸಮಿತಿಯ ಶಿಫಾರಸ್ಸಿನಲ್ಲಿ ಎಷ್ಟು ಶಿಫಾರಸ್ಸುಗಳನ್ನು ಜಾರಿಗೊಳಿಸಲಾಗಿದೆ ; ಜಾರಿಗೊಳಿಸಿದ್ದಲ್ಲಿ, ಯಾವಾಗ ಜಾರಿಗೊಳಿಸಲಾಗುವುದು ? (ವಿವರ ನೀಡುವುದು)

## ರಾಜ್ಯಕ್ಕೆ ಬರಬೇಕಾದ ಉದ್ದಿಮೆಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೯೯ (೮೬೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೂಲಭೂತ ಸೌಕರ್ಯಗಳ ಕೊರತೆಯಿಂದ ರಾಜ್ಯಕ್ಕೆ ಬರಬೇಕಾಗಿದ್ದ ಹಲವಾರು ಉದ್ದಿಮೆಗಳು ನೆರೆ ರಾಜ್ಯಗಳ ಪಾಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಸರ್ಕಾರದ ನಿಲುವು ಏನು ; (ವಿವರ ನೀಡುವುದು)

(ಆ) ಹೈಟೆಕ್ ಡಿಫೆನ್ಸ್ ಮತ್ತು ಏರೋ ಸ್ಪೇಸ್ ಪಾರ್ಕ್ ನಿರ್ಮಾಣಕ್ಕಾಗಿ ಸರ್ಕಾರ ಯಾವ ರೀತಿಯ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಬಗ್ಗೆ ಉದ್ಯಮಿಗಳಿಗೆ ಭರವಸೆ ನೀಡಿದೆ ; ರಾಜ್ಯದ ಯಾವ ಭಾಗದಲ್ಲಿ ಈ ಉದ್ದಿಮೆ ಸ್ಥಾಪಿಸಲು ಜಾಗವನ್ನು ನೀಡಲಾಗುವುದು ; (ವಿವರ ನೀಡುವುದು)

(ಇ) ಕಳೆದ ಎರಡು ವರ್ಷಗಳಲ್ಲಿ ಎಷ್ಟು ಹೊಸ ಉದ್ದಿಮೆಗಳಿಗಾಗಿ ಜಾಗ ನೀಡಲಾಗಿದೆ ; ಇದರಿಂದ ಎಷ್ಟು ಉದ್ಯೋಗ ಲಭಿಸಿದೆ ? (ವಿವರ ನೀಡುವುದು)

## ಅಪಾರ್ಟ್‌ಮೆಂಟ್ ಒನರ್ಸ್ ಅಸೋಸಿಯೇಷನ್ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೦೦ (೯೨೧) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಕೋ–ಅಪರೇಟಿವ್ ಆಕ್ಟ್ ೧೯೫೯ ನಿಯಮ ೬೩ ರನ್ವಯ ನೋಂದಾಯಿತ ಅಪಾರ್ಟ್‌ಮೆಂಟ್ ಒನರ್ಸ್ ಅಸೋಸಿಯೇಷನ್ ಕಡ್ಡಾಯವಾಗಿ ವಾರ್ಷಿಕವಾಗಿ ಆಡಿಟ್ ವರದಿಯನ್ನು ಸಲ್ಲಿಸಬೇಕು ಎಂಬ ನಿಯಮ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕಳೆದ ೨ ವರ್ಷಗಳಲ್ಲಿ ಎಷ್ಟು ಅಪಾರ್ಟ್‌ಮೆಂಟ್ ಒನರ್ಸ್ ಅಸೋಸಿಯೇಷನ್‌ಗಳು ಆಡಿಟ್ ವರದಿಯನ್ನು ಸಲ್ಲಿಸಿವೆ ಅಥವಾ ಕನಿಷ್ಠ ಇಂಟರ್‌ನಲ್ ಆಡಿಟ್ ವರದಿಯನ್ನಾದರೂ ಸಲ್ಲಿಸಿವೆ ; ಹೆಸರಿನೊಂದಿಗೆ ವಿವರ ನೀಡಿ ಆಡಿಟ್ ವರದಿ/ಇಂಟರ್‌ನಲ್ ಆಡಿಟ್ ವರದಿ ಸಲ್ಲಿಸದ ಅಸೋಸಿಯೇಷನ್‌ಗಳ ಮೇಲೆ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಆ) ಬೆಂಗಳೂರು ನಗರ ಜಿಲ್ಲೆಯ ಸಿಂಗಸಂದ್ರ ವಾರ್ಡ್ ಕೂಡ್ಲು ವ್ಯಾಪ್ತಿಯಲ್ಲಿರುವ ಎಷ್ಟು ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್‌ಗಳು ಕಳೆದ ೪ ವರ್ಷಗಳಲ್ಲಿ ಆಡಿಟ್ ವರದಿಯನ್ನು ಸಲ್ಲಿಸಿವೆಯೇ ಅಥವಾ ಕನಿಷ್ಠ ಇಂಟರ್‌ನಲ್ ಆಡಿಟ್ ವರದಿಯನ್ನಾದರೂ ಸಲ್ಲಿಸಿವೆಯೇ ; ಹೆಸರಿನೊಂದಿಗೆ ವಿವರ ನೀಡಿ ಆಡಿಟ್ ವರದಿ/ ಇಂಟರ್‌ನಲ್ ಆಡಿಟ್ ವರದಿ ಸಲ್ಲಿಸದ ಅಸೋಸಿಯೇಷನ್‌ಗಳ ಮೇಲೆ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಎಲ್ಲಾ ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್‌ಗಳು ಕಡ್ಡಾಯವಾಗಿ ಕರ್ನಾಟಕ ರಾಜ್ಯ ಕೋ-ಅಪರೇಟಿವ್ ಆಕ್ಟ್ ೧೯೫೯ ನಿಯಮ ೬೩ ರನ್ವಯ ಇಂಟರ್‌ನಲ್ ಆಡಿಟ್ ಸಮಿತಿಯನ್ನು ರಚಿಸಲು ರಿಜಿಸ್ಟ್ರಾರ್ ಕೋ-ಅಪರೇಟಿವ್‌ರವರು ಸೂಚಿಸಬಹುದಾಗಿದ್ದು, ಕಳೆದ ೨ ವರ್ಷಗಳಲ್ಲಿ ಎಷ್ಟು ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್‌ಗಳಿಗೆ ಸೂಚನೆ/ ನೋಟಿಸ್ ನೀಡಲಾಗಿದೆ ; ನೋಟಿಸ್ ನೀಡದಿರಲು ಕಾರಣವೇನು ; ಯಾವಾಗ ನೋಟಿಸ್ ನೀಡಲಾಗುವುದು ? (ನೋಟಿಸ್ ನೀಡಿದ ಪ್ರತಿಯೊಂದಿಗೆ ವಿವರ ನೀಡುವುದು)

## ಬಳ್ಳಾರಿ ಜಿಲ್ಲೆ, ಸಂಡೂರು ತಾಲ್ಲೂಕಿನಲ್ಲಿ ಸ್ಕೂಲ್ ಆಫ್ ಮೈನಿಂಗ್ ಕಾಲೇಜನ್ನು ಸ್ಥಾಪಿಸುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೮೦೧ (೭೯೬) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಳ್ಳಾರಿ ಜಿಲ್ಲೆ, ಸಂಡೂರು ತಾಲ್ಲೂಕಿನ ನಂದಿಹಳ್ಳಿಯಲ್ಲಿ ಸ್ಕೂಲ್ ಆಫ್ ಮೈನಿಂಗ್ ಕಾಲೇಜನ್ನು ಸ್ಥಾಪಿಸಲು ೨೦೨೧ ರಲ್ಲಿ ಘೋಷಿಸಿರುವುದು ನಿಜವೇ ; ಹೌದಾದಲ್ಲಿ, ಈ ಕಾಲೇಜು ಸ್ಥಾಪನೆ ಬಗ್ಗೆ ಇಲ್ಲಿಯವರೆಗೆ ಆಗಿರುವ ಪ್ರಗತಿಯ ವಿವರಗಳೇನು ; (ಮಾಹಿತಿ ಒದಗಿಸುವುದು)

(ಆ) ಸಂಡೂರಿನಲ್ಲಿ ಸ್ಥಾಪಿಸಲಾಗುತ್ತಿರುವ ಈ ಕಾಲೇಜನ್ನು ಸ್ಥಳಾಂತರ ಮಾಡುತ್ತಿರುವುದು ನಿಜವೇ ; ಹಾಗಿದ್ದಲ್ಲಿ, ಯಾವ ಕಾರಣದಿಂದ ಸಂಡೂರಿನಿಂದ ಸ್ಥಳಾಂತರ ಮಾಡಲಾಗುತ್ತಿದೆ ; (ಮಾಹಿತಿ ಒದಗಿಸುವುದು)

(ಇ) ಗಣಿಗಾರಿಕೆಗೆ ಹೆಸರುವಾಸಿಯಾದ ಹಾಗೂ ಹೆಚ್ಚಿನ ವೈಜ್ಞಾನಿಕ ಕಲಿಕೆಗೆ ಅವಕಾಶವಿರುವ ಬಳ್ಳಾರಿ ಜಿಲ್ಲೆಯಲ್ಲಿಯೇ ಈ ಕಾಲೇಜನ್ನು ಸ್ಥಾಪಿಸುವ ಕುರಿತು ಸರ್ಕಾರದ ನಿರ್ಧಾರವೇನು ? (ವಿವರಗಳೊಂದಿಗೆ ಮಾಹಿತಿ ಒದಗಿಸುವುದು)

## ಇನ್‌ವೆಸ್ಟ್ ಕರ್ನಾಟಕ ೨೦೨೨ರ ಬಂಡವಾಳ ಹೂಡಿಕೆದಾರರ ಸಮಾವೇಶ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೮೦೨ (೮೯೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇನ್ವೆಸ್ಟ್ ಕರ್ನಾಟಕ ಎಂಬ ಶೀರ್ಷಿಕೆ ಅಡಿ ಅಕ್ಟೋಬರ್ ೨೦೨೨ರಲ್ಲಿ ಬಂಡವಾಳ ಹೂಡಿಕೆದಾರರ ಸಮಾವೇಶ ಹುಬ್ಬಳ್ಳಿಯಲ್ಲಿ ಜರುಗಿರುವುದು ನಿಜವೇ ;

(ಆ) ಈ ಬಂಡವಾಳ ಹೂಡಿಕೆ ಸಮಾವೇಶದಲ್ಲಿ ಎಷ್ಟು ಕಂಪನಿಗಳು ಭಾಗವಹಿಸಿದ್ದವು ಮತ್ತು ಅವುಗಳಲ್ಲಿ ಎಷ್ಟು ಕಂಪನಿಗಳು ಉದ್ಯೋಗ ಸ್ಥಾಪಿಸಲು ಒಡಂಬಡಿಕೆ ಮಾಡಿ ಕೊಂಡಿದ್ದವು ; (ವಿವರವಾದ ಮಾಹಿತಿ ನೀಡುವುದು)

(ಇ) ಸರ್ಕಾರದ ಜೊತೆಗೆ ಒಡಂಬಡಿಕೆ ಮಾಡಿಕೊಂಡ ಕಂಪನಿಗಳಾವುವು ; ಅವುಗಳಲ್ಲಿ ಎಷ್ಟು ಕಂಪನಿಗಳು ಸ್ಥಾಪನೆ ಮಾಡುವ ಹಂತದಲ್ಲಿವೆ ಮತ್ತು ಎಷ್ಟು ಕಾರ್ಯಾರಂಭ ಮಾಡಿವೆ ; (ಸಂಪೂರ್ಣ ವಿವರಣೆ ನೀಡುವುದು)

(ಈ) ಒಡಂಬಡಿಕೆ ಮಾಡಿಕೊಂಡ ಬಹಳಷ್ಟು ಕಂಪನಿಗಳು ಉದ್ದಿಮೆ ಪ್ರಾರಂಭಿಸಲು ಹಿಂದೇಟು ಹಾಕುತ್ತಿರುವುದು ನಿಜವೇ ; ಹಾಗಿದ್ದಲ್ಲಿ, ಕಾರಣಗಳೇನು ; (ವಿವರಣೆ ನೀಡುವುದು)

(ಉ) ಹುಬ್ಬಳ್ಳಿಯಲ್ಲಿ ಜರುಗಿದ ಇನ್ವೆಸ್ಟ್ ಕರ್ನಾಟಕ ೨೦೨೨ಕ್ಕೆ ಒಟ್ಟು ಖರ್ಚು ಮಾಡಿದ ಹಣ ಎಷ್ಟು ? (ಮಾಹಿತಿ ನೀಡುವುದು)

## SCSP/TSP ಅಡಿಯಲ್ಲಿ ೨೦೨೧-೨೨, ೨೦೨೨-೨೩, ೨೦೨೩-೨೪ ಹಾಗೂ ೨೦೨೪-೨೫ನೇ ಹಣಕಾಸು ವರ್ಷಗಳಲ್ಲಿ ಬಿಡುಗಡೆಯಾಗಿರುವ ಅನುದಾನದ ಬಗ್ಗೆ

**ಶ್ರೀ ಹೆಚ್.ಪಿ. ಸುಧಾಮ್ ದಾಸ್ (ನಾಮನಿರ್ದೇಶನ ಹೊಂದಿದವರು) :-**

೮೦೩ (೮೦೭) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೧-೨೨, ೨೦೨೨-೨೩, ೨೦೨೩-೨೪ ಹಾಗೂ ೨೦೨೪-೨೫ನೇ ಹಣಕಾಸು ವರ್ಷಗಳಲ್ಲಿ ಕರ್ನಾಟಕ ಸರ್ಕಾರದ ಮಹತ್ವಾಕಾಂಕ್ಷೆ ಕಾಯ್ದೆ SCSP/TSP ಅಡಿಯಲ್ಲಿ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಇಲಾಖೆಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ;

(ಆ) ಸದರಿ ಹಣಕಾಸು ವರ್ಷಗಳ ಅವಧಿಗಳಲ್ಲಿ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಇಲಾಖೆಗೆ ಬಿಡುಗಡೆಯಾಗಿರುವ SCSP/ TSP ಅನುದಾನಗಳನ್ನು ಯಾವ ಯಾವ ಯೋಜನೆಗಳ ಜಾರಿಗೆಗೆ ವ್ಯಯಿಸಲಾಗಿದೆ ;

(ಇ) SCSP/TSP ಕಾಯ್ದೆ ಸೆಕ್ಷನ್ ೧೭ರ ಅನ್ವಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಇಲಾಖೆಯ ಮೇಲೆ ಈ ಹಣಕಾಸು ವರ್ಷಗಳ ಅವಧಿಗಳಲ್ಲಿ ಪರಿಶಿಷ್ಟ ಸಮುದಾಯ ಹಾಗೂ ಸಾಮಾನ್ಯ ಸಮುದಾಯದ ಅಭಿವೃದ್ಧಿ ಅಂತರವನ್ನು ಗುರುತಿಸಿ, ಸಂಬಂಧಿಸಿದ ಸಮುದಾಯ ಅಭಿವೃದ್ಧಿ ಅಭ್ಯಯಿಸಿ/ಸಮಾಲೋಚಿಸಿ ತಯಾರಿಸಿರುವ ಅನುದಾನ ವಿನಿಯೋಗಗಳಿಗೆ ಸಂಬಂಧಿಸಿದ ಉಪ ಯೋಜನೆ ಕಾರ್ಯಯೋಜನೆ ಯಾವುವು ; (ಪ್ರತಿಗಳನ್ನು ಒದಗಿಸುವುದು)

(ಈ) SCSP/TSP ಕಾಯ್ದೆ ಸೆಕ್ಷನ್ ೧೫ ಹಾಗೂ ೧೬ರಡಿ ಕಡ್ಡಾಯ ಪಡಿಸಿರುವಂತೆ ಸದರಿ ಅನುದಾನದಡಿ ಬಿಡುಗಡೆಯಾಗಿರುವ ಹಣವನ್ನು ಕೇವಲ ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡಗಳಿಗೆ ಸೇರಿರುವ ವ್ಯಕ್ತಿ, ಸದರಿ ಸಮುದಾಯ ವಾಸಿಸುತ್ತಿರುವ ಕಾಲೋನಿ/ ಪ್ರದೇಶಗಳ ಅಭಿವೃದ್ಧಿಗೆ ಮಾತ್ರ ಬಳಸಲು ಖಾತ್ರಿಪಡಿಸಲು ನಗರಾಭಿವೃದ್ಧಿ ಮತ್ತು ನಗರ ಯೋಜನೆ ಇಲಾಖೆ ಕೈಗೊಂಡಿರುವ ಕ್ರಮಗಳೇನು ? (ಸಂಬಂಧಿಸಿದ ದಾಖಲೆ ಒದಗಿಸುವುದು)

## ಬೀಳಗಿ ಮಹಾನಗರ ಪಾಲಿಕೆಯ ನೌಕರರ ವಿವಿಧ ಬೇಡಿಕೆಗಳ ಕುರಿತು

**ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೦೪ (೮೩೮) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಾನಗರ ಪಾಲಿಕೆಯ ನೌಕರರ ವಿವಿಧ ಬೇಡಿಕೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮಹಾನಗರ ಪಾಲಿಕೆಯ ನೌಕರರ ಬೇಡಿಕೆಗಳು ಯಾವುವು ; (ವಿವರ ನೀಡುವುದು)

(ಇ) ನೌಕರರ ಯಾವ ಬೇಡಿಕೆಗಳನ್ನು ಇದುವರೆಗೆ ಈಡೇರಿಸಲಾಗಿದೆ ; (ವಿವರ ನೀಡುವುದು)

(ಈ) ಯಾವ ಕಾಲಮಿತಿಯಲ್ಲಿ ನೌಕರರ ಬೇಡಿಕೆಗಳನ್ನು ಈಡೇರಿಸಲಾಗುವುದು ?

## ಬೀಳಗಿ ಪಟ್ಟಣ ಪಂಚಾಯಿತಿಯನ್ನು ಮೇಲ್ದರ್ಜೆಗೇರಿಸುವ ಕುರಿತು

**ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೦೫ (೮೩೭) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಟ್ಟಣ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ ;

(ಆ) ಯಾವ ಯಾವ ಪಟ್ಟಣ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; (ವಿವರ ನೀಡುವುದು)

(ಇ) ಬೀಳಗಿ ಪಟ್ಟಣ ಪಂಚಾಯಿತಿಯನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ; ಈ ಕುರಿತು ಸರ್ಕಾರದ ನಿಲುವೇನು ?

## ನಿಯಮಬಾಹಿರವಾಗಿ ಅಕ್ರಮ ಗಣಿಗಾರಿಕೆಯ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೦೬ (೮೬೯) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ 3 ವರ್ಷಗಳಲ್ಲಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ನೂತನವಾಗಿ ಗಣಿಗಾರಿಕೆ ಮಾಡಲು ಯಾವ ಪ್ರದೇಶಗಳಿಗೆ ಅನುಮತಿ ನೀಡಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ನಿಯಮಬಾಹಿರವಾಗಿ ಅಕ್ರಮ ಗಣಿಗಾರಿಕೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಂತಹ ಪ್ರಕರಣಗಳು ಎಷ್ಟು ಮತ್ತು ತಪ್ಪಿತಸ್ಥರಿಗೆ ಯಾವ ಕ್ರಮ ಕೈಗೊಳ್ಳಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯದ ಅಕ್ರಮ ಗಣಿಗಾರಿಕೆಯಲ್ಲಿ ಎಷ್ಟು ಸರ್ಕಾರಿ ಅಧಿಕಾರಿಗಳು ಬಾಗಿಯಾಗಿರುವ ಪ್ರಕರಣಗಳು ದಾಖಲಾಗಿವೆ ಮತ್ತು ಅಂತಹ ಅಧಿಕಾರಿಗಳಿಗೆ ಯಾವ ಕಾನೂನು ರೀತಿ ಯಾವ ಕ್ರಮ ಕೈಗೊಳ್ಳಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಅಕ್ರಮ ಗಣಿಗಾರಿಕೆ ನಡೆಸಿ ರೈತರ ಜಮೀನಿಗೆ ಹಾನಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಯಾವ ಕಾಲಮಿತಿಯೊಳಗೆ ಯಾವ ಕ್ರಮ ಕೈಗೊಂಡಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಖಾಲಿ ಇರುವ ಹುದ್ದೆಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೦೭ (೮೭೦) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪುರಸಭೆ, ನಗರ ಸಭೆ ಮತ್ತು ಪಟ್ಟಣ ಪಂಚಾಯಿತಿಗಳಲ್ಲಿ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಖಾಲಿ ಇರುವ ಹುದ್ದೆಗಳನ್ನು ತುಂಬುವ ಬಗ್ಗೆ ಸರ್ಕಾರ ಚಿಂತಿಸಿದೆಯೇ ; ಚಿಂತನೆ ಮಾಡಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ರಾಜ್ಯದಲ್ಲಿ ಪುರಸಭೆ, ನಗರ ಸಭೆ ಮತ್ತು ಪಟ್ಟಣ ಪಂಚಾಯಿತಿಗಳಿಗೆ ರಾಜ್ಯ ಸರ್ಕಾರದಿಂದ ಕಳೆದ ೨ ವರ್ಷಗಳಲ್ಲಿ ಬಿಡುಗಡೆಯಾದ ಅನುದಾನ ಎಷ್ಟು ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ೨ ವರ್ಷಗಳಲ್ಲಿ ಪುರಸಭೆ, ನಗರ ಸಭೆ ಮತ್ತು ಪಟ್ಟಣ ಪಂಚಾಯಿತಿಗಳಲ್ಲಿ ಎಷ್ಟು ಕಾಮಗಾರಿ ನಡೆಯುತ್ತಿದೆ ಮತ್ತು ಎಷ್ಟು ಕಾಮಗಾರಿ ಪೂರ್ಣಗೊಂಡಿದೆ ಮತ್ತು ಬಿಡುಗಡೆಯಾದ ಅನುದಾನದಲ್ಲಿ ಉಳಿದಿರುವ ಮೊತ್ತ ಎಷ್ಟು ?

## ರೈತರ ಸಾಲ ಯೋಜನೆಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೦೮ (೮೭೧) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸಹಕಾರ ಇಲಾಖೆಯಿಂದ ರೈತರಿಗೆ ಇರುವ ಸಾಲ ಯೋಜನೆಗಳು ಯಾವುವು ಮತ್ತು ರೈತರಿಗೆ ಹಾಕುತ್ತಿರುವ ಬಡ್ಡಿ ಎಷ್ಟು ;

(ಆ) ರಾಜ್ಯದಲ್ಲಿ ಸಹಕಾರಿ ಸಂಘ ಮತ್ತು ಸಹಕಾರಿ ಬ್ಯಾಂಕ್‌ಗಳಿಂದ ಸಾಲ ಪಡೆದು ಹಿಂಪಡಿಸದೆ ಇರುವ ರೈತರ ಸಂಖ್ಯೆ ಎಷ್ಟು ಮತ್ತು ಹಿಂಪಡೆಯಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ಸಂಪೂರ್ಣ ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಸಹಕಾರಿ ಸಂಘ ಮತ್ತು ಸಹಕಾರಿ ಬ್ಯಾಂಕ್‌ಗಳಿಂದ ಸಾಲ ಪಡೆದು ಹಿಂಪಡಿಸಲಾಗದವರಿಗೆ ಸಾಲ ಮನ್ನಾ ಮಾಡುವ ಬಗ್ಗೆ ಸರ್ಕಾರ ಚಿಂತಿಸಿದೆಯೇ ;

(ಈ) ಸಹಕಾರಿ ಸಂಘ ಮತ್ತು ಸಹಕಾರಿ ಬ್ಯಾಂಕ್‌ಗಳಿಂದ ಸಾಲ ಪಡೆದು ಹಿಂಪಡೆಯಲು ಅವರಿಂದ ಬಡ್ಡಿ ಮನ್ನಾ ಮಾಡಲಾಗುತ್ತಿದೆಯೇ ; ಹಾಗಿದ್ದಲ್ಲಿ, ಇಲ್ಲಿಯವರೆಗೆ ಮನ್ನಾ ಮಾಡಿರುವ ಬಡ್ಡಿ ಎಷ್ಟು ? (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

## ಮುದಗಲ್ ಪಟ್ಟಣಕ್ಕೆ ಕುಡಿಯುವ ನೀರಿನ ಯೋಜನೆ ಅನುಷ್ಠಾನಗೊಳಿಸುವ ಕುರಿತು

**ಶ್ರೀ ಶರಣಗೌಡ ಬಯ್ಯಾಪುರ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೦೯ (೬೭೧) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆ ಲಿಂಗಸಗೂರು ತಾಲ್ಲೂಕಿನ ಮುದಗಲ್ ಪಟ್ಟಣಕ್ಕೆ ಕೆ.ಯು.ಐ.ಡಿ.ಎಫ್.ಸಿ., ವತಿಯಿಂದ ಕುಡಿಯುವ ನೀರು ಸರಬರಾಜು ಯೋಜನೆಗೆ ರೂ.೪೪.೭೯ ಕೋಟಿಗಳ ಅನುದಾನವನ್ನು ನಿಗದಿಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ನಿಗದಿಪಡಿಸಿದ ಅನುದಾನದಲ್ಲಿ ಈವರೆಗೆ ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ ; ಬಾಕಿ ಉಳಿದಿರುವ ಅನುದಾನವೆಷ್ಟು ;

(ಇ) ಬಾಕಿ ಉಳಿದಿರುವ ಅನುದಾನವನ್ನು ಯಾವಾಗ ಬಿಡುಗಡೆ ಮಾಡಲಾಗುವುದು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಈ ಕುಡಿಯುವ ನೀರಿನ ಯೋಜನೆಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ CASete ಗಳನ್ನು ಕಾಂಗ್ರೆಸ್ ಭವನ ನಿರ್ಮಿಸಲು ಉದ್ದೇಶಿಸಿರುವ ಕುರಿತು

**ಶ್ರೀ ಶರವಣ ಟಿ.ಎ (ವಿಧಾನಸಭೆಯಿಂದ ಚುನಾಯಿತರಾದವರು) :-**

೮೧೦ (೯೧೪) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಎಷ್ಟು ನಗರ ಸ್ಥಳೀಯ ಸಂಸ್ಥೆಗಳಲ್ಲಿ ನಾಗರಿಕ ಸೌಲಭ್ಯ ಉದ್ದೇಶಗಳಿಗಾಗಿ ಮೀಸಲಿರಿಸಿದ ನಿವೇಶನಗಳನ್ನು ಕಾಂಗ್ರೆಸ್ ಭವನ ಕಟ್ಟಡಗಳಿಗೆ ಮಂಜೂರು ಮಾಡುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ ; ಹಾಗೂ ಎಷ್ಟು ಕಟ್ಟಡಗಳಿಗೆ ಮಂಜೂರು ಮಾಡಲು ನಿರ್ಧರಿಸಿದೆ ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಪ್ರತ್ಯೇಕ ಮಾಹಿತಿ ನೀಡುವುದು) ;

(ಆ) ಸದರಿ ನಿವೇಶನಗಳಿಗೆ ಕಾಂಗ್ರೆಸ್ ಭವನದಿಂದ ಪಡೆದ ಮೊತ್ತ ಎಷ್ಟು, ಒಂದು ವೇಳೆ ಉಚಿತವಾಗಿ ಮಂಜೂರು ಮಾಡಿದ್ದಲ್ಲಿ ಕಾರಣಗಳನ್ನು ನೀಡುವುದು; ಹಾಗೂ ರಾಜ್ಯದಲ್ಲಿ ಯಾವ ಯಾವ ಜಿಲ್ಲೆಗಳಲ್ಲಿ ಉಚಿತವಾಗಿ ಮಂಜೂರು ಮಾಡಲಾಗಿದೆ ? (ಜಿಲ್ಲಾವಾರು ಮತ್ತು ನಿವೇಶನವಾರು ಮಾಹಿತಿ ನೀಡುವುದು)

# ರಾಯಚೂರಿನ ಇಂಡಸ್ಟ್ರಿಯಲ್ ಗ್ರೋಥ್ ಸೆಂಟರ್‌ನಲ್ಲಿ ಮೂಲಭೂತ ಸೌಕರ್ಯ ಕುರಿತು

**ಶ್ರೀ ಶರವಣ ಟಿ.ಎ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೧೧ (೯೧೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರಿನಲ್ಲಿ Industrial Growth Centreನ್ನು ಯಾವಾಗ ಪ್ರಾರಂಭಿಸಲಾಯಿತು ಹಾಗೂ ಅಲ್ಲಿ ನೀಡಲಾದ ಮೂಲಭೂತ ಸೌಕರ್ಯಗಳಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಯಚೂರಿನಲ್ಲಿ Industrial Growth Centre ನಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಕೈಗಾರಿಕಾ ಪ್ರದೇಶದಲ್ಲಿ CETP ಘಟಕ ನಿರ್ಮಿಸದಿರಲು ಕಾರಣಗಳೇನು ; ಅಲ್ಲಿ CETP ಘಟಕವನ್ನು ಯಾವ ಕಾಲ ಮಿತಿಯಲ್ಲಿ ನಿರ್ಮಿಸಲಾಗುವುದು ;

(ಈ) ರಾಯಚೂರಿನಲ್ಲಿ Industrial Growth Centre ನಲ್ಲಿ ವಾಸದ ಉದ್ದೇಶಕ್ಕಾಗಿ ಎಷ್ಟು ಪ್ರಮಾಣದ ಭೂಮಿಯನ್ನು ಪರಿವರ್ತನೆ ಮಾಡಲಾಗಿದೆ ; ಹಾಗೂ ಸದರಿ ನಿವೇಶನಗಳಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳಿಗೆ ಮೀಸಲಿರಿಸಿದ ನಿವೇಶನಗಳ ಸಂಖ್ಯೆ ಎಷ್ಟು? (ಮಾಹಿತಿ ನೀಡುವುದು)

# ಕಲಬುರಗಿಯಲ್ಲಿ ನಗರದ ಕೇಂದ್ರ ಬಸ್ ನಿಲ್ದಾಣದ ಎದುರಿನ ರಸ್ತೆಗೆ ಫ್ಲೈ–ಓವರ್ ನಿರ್ಮಾಣ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :–**

೮೧೨ (೮೦೫) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕದ ಕೇಂದ್ರ ಸ್ಥಾನವಾದ ಕಲಬುರಗಿ ನಗರದ ಕೇಂದ್ರ ಬಸ್ ನಿಲ್ದಾಣದ ಎದುರಿನ ರಸ್ತೆಯ ಮೇಲೆ ಇರುವ ವಾಹನಗಳ ದಟ್ಟಣೆ ಮತ್ತು ಅದರಿಂದ ಆಗುತ್ತಿರುವ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕೇಂದ್ರ ಬಸ್ ನಿಲ್ದಾಣದ ಎದುರಿನ ರಸ್ತೆಯ ಮೇಲೆ ಆಟೋಗಳು, ಬಸ್‌ಗಳು ಇನ್ನಿತರ ಖಾಸಗಿ ವಾಹನಗಳು ಒಂದೇ ಕಡೆ ಓಡಾಡುವುದರಿಂದ ಆ ರಸ್ತೆಯ ಮೇಲೆ ವಾಹನಗಳನ್ನು ಚಲಾಯಿಸುವುದು ಮತ್ತು ಸಾರ್ವಜನಿಕರು ಬಸ್ ನಿಲ್ದಾಣಕ್ಕೆ ಹೋಗುವುದು ಕಷ್ಟವೆನಿಸುವುದಿಲ್ಲವೇ ;

(ಇ) ಅದೇ ರಸ್ತೆಯ ಎಂ.ಎಸ್.ಕೆ. ಮಿಲ್, ಕೇಂದ್ರ ಬಸ್ ನಿಲ್ದಾಣ, ವಲ್ಲಭಬಾಯಿ ಪಟೇಲ್/ತಿಮ್ಮಾಪುರ್ ಸರ್ಕಲ್, ಜಿಲ್ಲಾಧಿಕಾರಿ ಕಛೇರಿಯವರೆಗೆ ಫ್ಲೈ–ಓವರ್ ನಿರ್ಮಾಣ ಮಾಡಿ ವಾಹನಗಳ ದಟ್ಟಣೆ ಮತ್ತು ಜನರ ಓಡಾಟದ ತೊಂದರೆ ತಪ್ಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೆ ;

(ಈ) ಈ ಫ್ಲೈಓವರ್‌ನ ನಿರ್ಮಿಸಲು ಕೆ.ಕೆ.ಆರ್.ಡಿ.ಬಿ ಯ ಹಣ ಬಳಸಿಕೊಂಡು ಫ್ಲೈ–ಓವರ್‌ಗಳನ್ನು ನಿರ್ಮಿಸಿ ಕಲಬುರಗಿ ನಗರದಲ್ಲಿರುವ ವಾಹನಗಳ ದಟ್ಟಣೆ ನಿಯಂತ್ರಿಸಿ ಸಾರ್ವಜನಿಕರ ಸಂಚಾರಕ್ಕೆ ಅವಕಾಶ ಮಾಡಿಕೊಳ್ಳಲು ಕ್ರಮ ಕೈಗೊಳ್ಳಲಾಗುವುದೇ ?

# ಕಲಬುರಗಿ ಜಿಲ್ಲೆಯ ಶಹಾಬಾದ ಪಟ್ಟಣದಲ್ಲಿ ಶೌಚಾಲಯಗಳ ದುಸ್ಥಿತಿ ಮತ್ತು ಬಯಲು ಶೌಚಾಲಯ ಮುಕ್ತ ಮಾಡುವ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :–**

೮೧೩ (೮೦೬) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯ ಶಹಾಬಾದ ಪಟ್ಟಣದಲ್ಲಿ ನಗರಸಭೆ ವ್ಯಾಪ್ತಿಯಲ್ಲಿ ಸರ್ಕಾರದ ಹಣದಿಂದ ನಿರ್ಮಿಸಿದ ಎಷ್ಟು ಶೌಚಾಲಯಗಳಿವೆ ; ಕೋಟಿಗಟ್ಟಲೆ ಹಣ ವೆಚ್ಚ ಮಾಡಿ ನಗರಸಭೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ನಿರ್ಲಕ್ಷತನದಿಂದ ಶೌಚಾಲಯಗಳು ಬಳಕೆಯಾಗದೆ ಮುಚ್ಚಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಶಹಾಬಾದ ಪಟ್ಟಣದ ನಗರಸಭೆ ಸರ್ಕಾರದ ಹಣದಿಂದ ನಿರ್ಮಿಸಿದ ಶೌಚಾಲಯಗಳನ್ನು ಸರಿಯಾಗಿ ನಿರ್ವಹಣೆ ಮಾಡದಿರುವುದರಿಂದ ಜನರು ಬಯಲು ಶೌಚಾಲಯ ಉಪಯೋಗಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸರ್ಕಾರದ ಹಣದಿಂದ ನಿರ್ಮಾಣವಾದ ಶೌಚಾಲಯಗಳನ್ನು ಸಾರ್ವಜನಿಕರು ಬಳಸಲು ಬೇಕಾದ ನಿರ್ವಹಣೆ ಮತ್ತು ಜಾಗೃತಿ ಮೂಡಿಸಲು ಕ್ರಮ ಕೈಗೊಂಡಿದೆಯೇ ;

(ಈ) ಸ್ವಚ್ಛ ಭಾರತ ಅಭಿಯಾನ ನಡೆಯುತ್ತಿರುವ ಸಂದರ್ಭದಲ್ಲಿ ಇನ್ನು ಬಯಲು ಶೌಚಾಲಯಕ್ಕೆ ಅವಕಾಶ ಮಾಡುತ್ತಿರುವುದರಿಂದ ಪಟ್ಟಣದ ಸ್ವಚ್ಛತೆ ಮತ್ತು ಜನರ ಆರೋಗ್ಯಕ್ಕೆ ಧಕ್ಕೆಯಾಗುವುದಿಲ್ಲವೇ ;

(ಉ) ಶೌಚಾಲಯಗಳನ್ನು ಸರಿಯಾಗಿ ನಿರ್ವಹಣೆ ಮಾಡದೆ ಸರ್ಕಾರದ ಹಣ ದುಂದು ವೆಚ್ಚವಾಗಿರುವುದಕ್ಕೆ ಶಹಾಬಾದ ಪಟ್ಟಣದ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ವಿರುದ್ಧ ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಸಹಕಾರಿ ವಲಯದಲ್ಲಿ ಹೊಸ ಯೋಜನೆಗಳ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೧೪ (೮೯೨) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಹಕಾರಿ ವಲಯದಲ್ಲಿ ಹೊಸ ಯೋಜನೆಗಳನ್ನು ಜಾರಿಗೆ ತರಲಾಗಿದೆಯೇ ಅಥವಾ ಪ್ರಸ್ತಾಪಿಸಲಾಗಿದೆಯೇ ; (ವಿವರ ನೀಡುವುದು)

(ಆ) ಗ್ರಾಮೀಣ ಪ್ರದೇಶಗಳ ಅಭಿವೃದ್ಧಿಗಾಗಿ ಪ್ರತ್ಯೇಕವಾಗಿ ಬೇರೆ ಯಾವುದೇ ಯೋಜನೆಯನ್ನು ಪ್ರಸ್ತಾಪಿಸಲಾಗಿದೆಯೇ ? (ವಿವರ ನೀಡುವುದು)

## ಅಡಿಕೆ ಹಾಳೆ ತಟ್ಟೆ, ಲೋಟಗಳ ತಯಾರಿಕಾ ಉದ್ಯಮವು ಸಂಕಷ್ಟದಲ್ಲಿರುವ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೧೫ (೮೯೩) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪರಿಸರ ಸ್ನೇಹಿ ಎಂದು ಕರೆಯಲಾಗುತ್ತಿದ್ದ ಅಡಿಕೆ ಹಾಳೆ ತಟ್ಟೆ, ಲೋಟಗಳ ತಯಾರಿಕಾ ಉದ್ಯಮವು ಪುಸ್ತುತ ದಿನಮಾನಗಳಲ್ಲಿ ಸಂಕಷ್ಟ ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಉದ್ಯಮದ ಉಳಿವಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ರಾಜ್ಯದಲ್ಲಿ ಅಡಿಕೆ ಹಾಳೆ ತಟ್ಟೆ, ಲೋಟಗಳ ತಯಾರಿಕಾ ಉದ್ಯಮದಲ್ಲಿ ತೊಡಗಿರುವ ಉದ್ಯಮಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿ ಮುಚ್ಚಲ್ಪಟ್ಟ ಗಣಿಗಳ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೧೬ (೮೯೪) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಐದು ವರ್ಷಗಳಲ್ಲಿ ಭಾರತದ ಸುಪ್ರೀಂ ಕೋರ್ಟ್–ನ ಆದೇಶದಿಂದಾಗಿ ರಾಜ್ಯದಲ್ಲಿ ಮುಚ್ಚಲ್ಪಟ್ಟ ಗಣಿಗಳ ಸಂಖ್ಯೆ ಎಷ್ಟು ;

(ಆ) ಅಂತಹ ಗಣಿಗಳನ್ನು ಮುಚ್ಚಲು ಆದೇಶಿಸಲು ಸುಪ್ರೀಂ ಕೋರ್ಟ್ ಉಲ್ಲೇಖಿಸಿದ ಕಾರಣಗಳೇನು ;

(ಇ) ಈ ಗಣಿಗಳು ಮುಚ್ಚುವುದನ್ನು ತಪ್ಪಿಸಲು ಕೇಂದ್ರ ಸರ್ಕಾರವು ಪ್ರಸ್ತಾಪಿಸಿದ ಕ್ರಮಗಳಾವುವು ? (ವಿವರಗಳನ್ನು ಒದಗಿಸುವುದು)

## ರಾಜ್ಯದಲ್ಲಿ ಹೊಸ ಕೈಗಾರಿಕೆಗಳಿಂದ ಉದ್ಯೋಗ ಸೃಷ್ಟಿಯಾಗಿರುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೮೧೭ (೮೭೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಹೊಸ ಕೈಗಾರಿಗಳಿಗೆ ರಾಜ್ಯಮಟ್ಟದ ಏಕಗವಾಕ್ಷಿ ಅನುಮೋದನಾ ಸಮಿತಿ ಅನುಮೋದನೆ ನೀಡಿದೆ ; ಅನುಮೋದಿತ ಪ್ರತಿ ಕೈಗಾರಿಕೆಗಳು ಹೂಡುವ ಬಂಡವಾಳ ಎಷ್ಟು ಹಾಗೂ ಉತ್ಪನ್ನಗಳು ಯಾವುವು ; ( ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಹೊಸ ಕೈಗಾರಿಕೆಗಳಿಂದ ಎಷ್ಟು ಉದ್ಯೋಗ ಸೃಷ್ಟಿಯಾಗುವ ಅಂದಾಜು ಮಾಡಲಾಗಿದೆ ; ಬೃಹತ್ ಮಧ್ಯಮ, ಸಣ್ಣ ಬಂಡವಾಳ ಹೂಡಿಕೆಯ ಪ್ರಕಾರ ಪ್ರತಿ ಕೈಗಾರಿಕೆಗಳಲ್ಲಿ ಸೃಷ್ಟಿಯಾಗುವ ಉದ್ಯೋಗಗಳ ಸಂಖ್ಯೆ ಎಷ್ಟು ? (ವಿವರವಾದ ಮಾಹಿತಿ ನೀಡುವುದು)

## ಕೃಷಿ ಉತ್ಪನ್ನ ಮಾರುಕಟ್ಟೆಗಳ ಕುರಿತು

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :-**

೮೧೮ (೮೭೮) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಪಿಎಂಸಿಗೆ ಸಂಬಂಧಪಟ್ಟಂತೆ ಇರುವ ಮುಖ್ಯ ಹಾಗೂ ಉಪ ಮಾರುಕಟ್ಟೆಗಳ ಸಂಖ್ಯೆ ಎಷ್ಟು ; ಅವು ಯಾವವು ; (ವಿವರ ನೀಡುವುದು)

(ಆ) ೨೦೨೧-೨೨ ರಲ್ಲಿ ಸರ್ಕಾರ ಎಪಿಎಂಸಿಗೆ ನೀಡಿದ ಅಧಿಕಾರ ವಾಪಸ್ ಪಡೆದ ಕಾರಣ ಎಪಿಎಂಸಿ ಮೇಲೆ ಯಾವ ರೀತಿ ಪರಿಣಾಮ ಬೀರಿದೆ ;

(ಇ) ಕೃಷಿ ಉತ್ಪನ್ನ ಮಾರುಕಟ್ಟೆ ನಿಯಂತ್ರಣ ಕಾಯ್ದೆಗೆ ತರಬೇಕಿದ್ದ ತಿದ್ದುಪಡಿ ಕಾಯ್ದೆ ವಾಪಾಸ್ ಪಡೆದ ನಂತರ ಎಪಿಎಂಸಿಗಳ ವಹಿವಾಟುಗಳಲ್ಲಿ ಸುಧಾರಣೆಯಾಗಿದೆಯೇ ;

(ಈ) ೨೦೨೦-೨೧ರಲ್ಲಿ ಎಪಿಎಂಸಿಯ ಆರ್ಥಿಕ ಸ್ಥಿತಿ ಹೇಗಿತ್ತು ; ೨೦೨೪- ೨೫ರ ಹಾಗೂ ೨೫- ೨೬ರ ಅವಧಿಯಲ್ಲಿನ ಆರ್ಥಿಕ ಸ್ಥಿತಿ ಹೇಗಿದೆ ? (ತುಲಾನಾತ್ಮಕ ವಿವರ ನೀಡುವುದು)

## ಚೆನ್ನೈ- ಬೆಂಗಳೂರು ಕೈಗಾರಿಕಾ ಕಾರಿಡಾರ್‌ನ್ನು ಮೈಸೂರಿಗೆ ವಿಸ್ತರಿಸುವ ಕುರಿತು

**ಡಾ. ಯತೀಂದ್ರ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೮೧೯ (೮೧೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರು ಜಿಲ್ಲೆಯು ದೇಶದ ಪ್ರಮುಖ ಕೈಗಾರಿಕಾ ಕೇಂದ್ರವಾಗಿ ಬೆಳೆಯಲು ಬೇಕಾದ ಪ್ರಮುಖ ಸಂಪನ್ಮೂಲಗಳನ್ನು ಒಳಗೊಂಡಿದ್ದು, ಬಂಡವಾಳ ಹೂಡಿಕೆಗೆ ಪ್ರಾಶಸ್ತ್ಯವಾಗಿರುವುದು ನಿಜವಲ್ಲವೇ ;

(ಆ) ಹಾಗಿದ್ದಲ್ಲಿ, ಚೆನ್ನೈ-ಬೆಂಗಳೂರು ಕೈಗಾರಿಕಾ ಕಾರಿಡಾರ್ (CBIC)ನ್ನು ಮೈಸೂರಿಗೆ ವಿಸ್ತರಿಸುವ ಉದ್ದೇಶ ಸರ್ಕಾರಕ್ಕಿದೆಯೇ ;

(ಇ) ಈ ಕುರಿತು ಸರ್ಕಾರವು ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದೆಯೇ ? (ವಿವರ ಒದಗಿಸುವುದು)

## ಸಣ್ಣ ಕೈಗಾರಿಕೆಗಳಿಗೆ ಹಂಚಿಕೆಯಾಗಿರುವ ನಿವೇಶನಗಳ ಕುರಿತು

**ಡಾ. ಯತೀಂದ್ರ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೮೨೦ (೮೧೯) ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಸಣ್ಣ ಕೈಗಾರಿಕೆಗಳಿಗೆ ಹಂಚಿಕೆ ಮಾಡಿರುವ ನಿವೇಶನ/ಪ್ಲಾಟ್‌ಗಳೆಷ್ಟು ; ಅವುಗಳಲ್ಲಿ ಎಷ್ಟು ಸಣ್ಣ ಕೈಗಾರಿಕೆಗಳು ಪ್ರಾರಂಭವಾಗಿವೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಸಣ್ಣ ಕೈಗಾರಿಕೆಗಳು ಮುಚ್ಚಲ್ಪಟ್ಟಿವೆ ; ಈ ರೀತಿ ಮುಚ್ಚಿರುವ ಸಣ್ಣ ಕೈಗಾರಿಕೆಗಳನ್ನು ಪುನಃಶ್ಚೇತನಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ಒದಗಿಸುವುದು)

## ನಗರ/ಪುರಸಭೆ/ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಖಾತಾ ಸಮಸ್ಯೆ ಕುರಿತು

**ಡಾ. ಯತೀಂದ್ರ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೮೨೧ (೮೨೦) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹೊಸದಾಗಿ ರಚನೆಯಾದ ನಗರಸಭೆ/ಪುರಸಭೆ/ಪಟ್ಟಣ ಪಂಚಾಯಿತಿಗಳಲ್ಲಿ ಗ್ರಾಮ ಪಂಚಾಯಿತಿಗಳಿಂದ ಹಸ್ತಾಂತರವಾದ

ನಿವೇಶನ/ಆಸ್ತಿಗಳ ಪೂರಕ/ಮೂಲ ದಾಖಲಾತಿಗಳ ಅಲಭ್ಯತೆಯಿಂದ ಖಾತಾ ಮಾಡಿಸಲು ಸಾರ್ವಜನಿಕರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಚೆನ್ನೈ–ಬೆಂಗಳೂರು–ಮೈಸೂರು ಹೈ–ಸ್ಪೀಡ್ (Bullet Train) ಯೋಜನೆಯ ಕುರಿತು

**ಡಾ. ಯತೀಂದ್ರ. ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೨೨ (೮೨೧) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಬೆಂಗಳೂರು–ಮೈಸೂರು ಹೈ–ಸ್ಪೀಡ್ ರೈಲು (Bullet Train) ಯೋಜನೆಯು ಪ್ರಸ್ತುತ ಯಾವ ಹಂತದಲ್ಲಿದೆ ; ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ಒದಗಿಸುವುದು)

## ರಾಜ್ಯದ ಇತರೆ ಜಿಲ್ಲಾ/ತಾಲ್ಲೂಕು ವ್ಯಾಪ್ತಿಯ ಮಹಾನಗರ ಪಾಲಿಕೆ/ ನಗರಸಭೆ/ ಪಟ್ಟಣ ಪಂಚಾಯಿತಿ ವ್ಯಾಪ್ತಿಯ ಕಂದಾಯ ನಿವೇಶನಗಳಿಗೆ ನಕ್ಷೆ ಅನುಮೋದನೆ ಕುರಿತು

**ಡಾ. ಯತೀಂದ್ರ. ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೨೩ (೮೧೦) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರವು ರಾಜ್ಯದ ಇತರೆ ಜಿಲ್ಲಾ/ತಾಲ್ಲೂಕು ವ್ಯಾಪ್ತಿಯ ಮಹಾನಗರ ಪಾಲಿಕೆ/ನಗರ ಸಭೆ/ ಪಟ್ಟಣ ಪಂಚಾಯಿತಿ ವ್ಯಾಪ್ತಿಯ ಕಂದಾಯ ನಿವೇಶನಗಳಿಗೆ ಮತ್ತು ಕಂದಾಯ ನಿವೇಶನಗಳಲ್ಲಿ ನಿರ್ಮಿಸಿರುವ ಮನೆಗಳಿಗೆ ಬಿ–ಖಾತಾ ಮಾಡಿಕೊಡುವ ಮೂಲಕ ಲಕ್ಷಾಂತರ ಕುಟುಂಬದ ನೆರವಿಗೆ ನಿಂತಿರುವುದು ನಿಜವೇ ;

(ಆ) ಈ ರೀತಿ ಖಾತಾ ಮಾಡಿದ ನಿವೇಶನಗಳಲ್ಲಿ ಮನೆಗಳನ್ನು ನಿರ್ಮಿಸಲು ನಕ್ಷೆ ಮಂಜೂರು ಮಾಡಲು ಕೋರಿರುವ ಪ್ರಕರಣಗಳಲ್ಲಿ ಬೆಂಗಳೂರು ವ್ಯಾಪ್ತಿಯಲ್ಲಿ ಮಾತ್ರ ನಕ್ಷೆಗೆ ಅನುಮೋದನೆ ನೀಡುತ್ತಿದ್ದು, ರಾಜ್ಯದ ಇತರೆ ಜಿಲ್ಲೆ/ತಾಲ್ಲೂಕು ವ್ಯಾಪ್ತಿಯಲ್ಲಿ ಸಹ ನಕ್ಷೆಗೆ ಅನುಮೋದನೆ ನೀಡುವ ಬಗ್ಗೆ ಸೂಕ್ತ ಆದೇಶ ಹೊರಡಿಸಲು ಸರ್ಕಾರದ ನಿಲುವೇನು ? (ವಿವರ ನೀಡುವುದು)

## ಸಹಕಾರ ಇಲಾಖೆಯಡಿ ಬರುವ ಸಂಘ ಸಂಸ್ಥೆಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೨೪ (೯೨೦) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಹಕಾರ ಇಲಾಖೆಯಡಿ ಬರುವ ವಿವಿಧ ಸಹಕಾರ ಸಂಘಗಳು ಯಾವುವು ; ಅವುಗಳಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಹಾಗೂ ಸ್ಥಗಿತಗೊಂಡಿರುವ ಸಹಕಾರ ಸಂಘಗಳು ಯಾವುವು ;

(ಆ) ಸದರಿ ಸಂಘಗಳಿಗೆ ಇಲಾಖೆಯಲ್ಲಿ ಮಂಜೂರಾದ, ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಹುದ್ದೆಗಳು ಯಾವುವು ; (ಜಿಲ್ಲಾವಾರು/ತಾಲ್ಲೂಕುವಾರು/ಸಂಘವಾರು ಮಾಹಿತಿ ಒದಗಿಸುವುದು)

(ಇ) ಸದರಿ ಸಂಘಗಳ ಕಾರ್ಯನಿರ್ವಹಣೆ ಹೇಗೆ ನಡೆಯುತ್ತದೆ; ಸಂಘಗಳ ನಿರ್ವಹಣೆಗೆ ಇರುವಂತಹ ಮಾನದಂಡಗಳು ಯಾವುವು ; ನಿರ್ವಹಣೆಗೆ ಮೀಸಲಿಡುವ ಅನುದಾನವೆಷ್ಟು; (ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಪ್ರಸ್ತುತ ಎಷ್ಟು ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘಗಳ ಒಕ್ಕೂಟಗಳಿವೆ ; ಅದರಲ್ಲಿ ಬರುವ ಸಂಘಗಳು ಎಷ್ಟು ?

## ವಿಮಾನ ನಿಲ್ದಾಣ ಕಾಮಗಾರಿ ಕುರಿತು

**ಡಾ॥ ಚಂದ್ರಶೇಖರ ಬಸವರಾಜ ಪಾಟೀಲ (ಪದವೀಧರರ ಕ್ಷೇತ್ರ) :–**

೮೨೫ (೮೦೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯ ವಿಮಾನ ನಿಲ್ದಾಣ ಕಾಮಗಾರಿ ಮಂದಗತಿಯಲ್ಲಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಈ ಕಾಮಗಾರಿ ಯಾವಾಗ ಪೂರ್ಣಗೊಳ್ಳುವುದು ? (ಮಾಹಿತಿ ಒದಗಿಸುವುದು)

## ಗಣಿ ಪರವಾನಿಗೆ ಕುರಿತು

**ಡಾ॥ ಚಂದ್ರಶೇಖರ ಬಸವರಾಜ ಪಾಟೀಲ (ಪದವೀಧರರ ಕ್ಷೇತ್ರ) :–**

೮೨೬ (೮೦೩) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಎರಡು ವರ್ಷಗಳಲ್ಲಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಹೊಸದಾಗಿ ಎಷ್ಟು ಗಣಿ ಪರವಾನಿಗೆ ನೀಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಗಣಿ ಪರವಾನಿಗೆ ನೀಡಲು ಸರ್ಕಾರ ವಿಧಿಸಿದ ಮಾನದಂಡಗಳೇನು ? (ಮಾಹಿತಿ ನೀಡುವುದು)

## ಕ್ರಷರ್‌ಗಳ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೨೭ (೮೨೫) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕ್ರಷರ್‌ಗಳ ಸಂಖ್ಯೆ ಎಷ್ಟು ;

(ಆ) ಹೊಸ ಕ್ರಷರ್ ಗಳನ್ನು ಸ್ಥಾಪಿಸಲು ಇರುವ ಮಾನದಂಡ ಮತ್ತು ಪ್ರಕ್ರಿಯೆಗಳೇನು ;

(ಇ) ಜನವಸತಿ ಪ್ರದೇಶಗಳಿಂದ ಎಷ್ಟು ಮೀಟರ್‌ಗಳ ಅಂತರದಲ್ಲಿ ಕ್ರಷರ್‌ಗಳ ಸ್ಥಾಪನೆಗೆ ಅವಕಾಶ ಕಲ್ಪಿಸಲಾಗಿದೆ ;

(ಈ) ಈ ಹಿಂದೆ ಜನವಸತಿ ಪ್ರದೇಶಗಳಿಂದ ೨೫೦ ಮೀಟರ್‌ಗಳ ಅಂತರದಲ್ಲಿ ಕ್ರಷರ್‌ಗಳ ಕಾರ್ಯನಿರ್ವಹಣೆಗೆ ಅವಕಾಶ ನೀಡಿ ಪ್ರಸ್ತುತ ಅದನ್ನು ೫೦೦ ಮೀಟರ್‌ಗಳವರೆಗೆ ಹೆಚ್ಚಿಸಿ ಬದಲಿಸಲು ಕಾರಣವೇನು ;

(ಉ) ಪ್ರಸ್ತುತ ತಂತ್ರಜ್ಞಾನಗಳಿಂದ ಜನವಸತಿ ಪ್ರದೇಶಗಳಿಗೆ ೨೫೦ ಮೀಟರ್ ಅಂತರದಲ್ಲಿ ಕ್ರಷರ್‌ಗಳು ಕಾರ್ಯನಿರ್ವಹಿಸಲು ಯಾವುದೇ ತೊಂದರೆಗಳು ಉಂಟಾಗದಿರುವುದರಿಂದ ಸದರಿ ಅಂತರವನ್ನು ೫೦೦ ಮೀಟರ್‌ಗಳಿಂದ ೨೫೦ ಮೀಟರ್‌ಗಳ ಅಂತರದವರೆಗೆ ಇಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

# KIADB ಇಲಾಖೆಯಿಂದ ಭೂಸ್ವಾಧೀನ ಮಾಡಿಕೊಂಡಿರುವ ಜಮೀನಿನ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೨೮ (೯೧೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ૩ ವರ್ಷಗಳಲ್ಲಿ ರಾಜ್ಯದಲ್ಲಿ ಕೆಐಎಡಿಬಿಗೆ ಎಷ್ಟು ಎಕರೆ ಜಮೀನನ್ನು ಭೂಸ್ವಾಧೀನ ಮಾಡಿಕೊಳ್ಳಲಾಗಿದೆ ; (ಜಿಲ್ಲಾವಾರು ವಿವರ ಒದಗಿಸುವುದು)

(ಆ) ಸದರಿ ಇಲಾಖೆಗೆ ಭೂಸ್ವಾಧೀನ ಮಾಡಿಕೊಂಡ ಜಮೀನಿನಲ್ಲಿ ಎಷ್ಟು ಎಕರೆ ಭೂಮಿಯನ್ನು ಅಭಿವೃದ್ಧಿ ಪಡಿಸಲಾಗಿದೆ ; (ಜಿಲ್ಲಾವಾರು ವಿವರ ಒದಗಿಸುವುದು)

(ಇ) ಕೆ.ಐ.ಎ.ಡಿ.ಬಿ ಯಿಂದ ಅಭಿವೃದ್ಧಿ ಪಡಿಸಿದ ಭೂಮಿಯಲ್ಲಿ ಎಷ್ಟು ಎಕರೆ ಜಮೀನನ್ನು ಯಾವ ಯಾವ ಸಂಸ್ಥೆಗೆ ಎಷ್ಟು ಎಕರೆ ನೀಡಲಾಗಿದೆ ; ಅಭಿವೃದ್ಧಿಪಡಿಸದೇ ಉಳಿದಿರುವ ಜಮೀನು ಎಷ್ಟು ; (ಜಿಲ್ಲಾವಾರು ಸಂಸ್ಥೆಗಳ ವಿವರದೊಂದಿಗೆ ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಹಂಚಿಕೆಯಾಗದೇ ಇರುವ ಜಮೀನು ಎಷ್ಟು; ಉಳಿದಿರುವ ಜಮೀನನ್ನು ಯಾವಾಗ ಹಂಚಿಕೆ ಮಾಡಲಾಗುತ್ತದೆ; ಸದರಿ ಇಲಾಖೆಯಿಂದ ಜಮೀನು ಪಡೆದಿರುವ ಸಂಸ್ಥೆಗಳ ಪೈಕಿ ಎಷ್ಟು ಸಂಸ್ಥೆಗಳು ಆರಂಭಗೊಂಡಿದೆ ; ಇದರಿಂದ ಎಷ್ಟು ನಿರುದ್ಯೋಗಿಗಳಿಗೆ ಉದ್ಯೋಗಾವಕಾಶಗಳು ಕಲ್ಪಿಸಲಾಗಿದೆ ; (ಸಂಸ್ಥೆವಾರು ಹಾಗೂ ಜಿಲ್ಲಾವಾರು ವಿವರ ಒದಗಿಸುವುದು)

(ಉ) ಜಮೀನು ಪಡೆದಿರುವ ಸಂಸ್ಥೆಗಳನ್ನು ಯಾವ ಕಾಲಮಿತಿಯೊಳಗೆ ಪ್ರಾರಂಭಿಸಬೇಕಾಗಿದೆ ; ಕಾಲಮಿತಿಯೊಳಗೆ ಪ್ರಾರಂಭಿಸದೇ ಇರುವ ಸಂಸ್ಥೆಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗುತ್ತದೆ ? (ಸಂಪೂರ್ಣ ವಿವರ ಒದಗಿಸುವುದು)

## ನಗರ ಸಭೆ ಮತ್ತು ಮಹಾನಗರ ಪಾಲಿಕೆಗಳಲ್ಲಿ ಜನನ ಮತ್ತು ಮರಣ ಪ್ರಮಾಣ ಪತ್ರಗಳ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೨೯ (೯೧೩) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರಸಭೆ ಮತ್ತು ಮಹಾನಗರ ಪಾಲಿಕೆಗಳಲ್ಲಿ ಜನನ ಮತ್ತು ಮರಣ ಹಾಗೂ ಇತರೆ ಯಾವ ಯಾವ ಪ್ರಮಾಣ ಪತ್ರಗಳನ್ನು ಜನಸಾಮಾನ್ಯರಿಗೆ ನೀಡಲಾಗುವುದು ; (ವಿವರ ಒದಗಿಸುವುದು)

(ಆ) ಕಳೆದ ೩ ವರ್ಷದ ಹಿಂದೆ ಸದರಿ ಪ್ರಮಾಣ ಪತ್ರಗಳನ್ನು ಪಡೆಯಲು ಸರ್ಕಾರ ಪಡೆಯುತ್ತಿದ್ದ ಶುಲ್ಕ ಎಷ್ಟು ;

(ಇ) ಪ್ರಸ್ತುತ ಸದರಿ ಪ್ರಮಾಣ ಪತ್ರಗಳಿಗೆ ಸರ್ಕಾರ ಪಡೆಯುತ್ತಿರುವ ಶುಲ್ಕ ಎಷ್ಟು ; ಸದರಿ ಪ್ರಮಾಣ ಪತ್ರಗಳ ಬೆಲೆ ಏರಿಕೆ ಮಾಡಿರುವುದರಿಂದ ಸರ್ಕಾರಕ್ಕೆ ಬಂದಿರುವ ಆದಾಯ ಎಷ್ಟು ? (ಸಂಪೂರ್ಣ ವಿವರ ಒದಗಿಸುವುದು)

## ಕೈಗಾರಿಕೆ ವಲಯಕ್ಕೆ ಜಮೀನುಗಳನ್ನು ವಶಪಡಿಸಿಕೊಂಡಿರುವ ಬಗ್ಗೆ

**ಶ್ರೀ ಎನ್. ನಾಗರಾಜು (ಎಂ.ಟಿ.ಬಿ) ವಿಧಾನಸಭೆಯಿಂದ ಚುನಾಯಿತರಾದವರು) :–**

೮೩೦ (೭೯೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಕಳೆದ ೨ ವರ್ಷಗಳಿಂದ ಕೈಗಾರಿಕಾ ವಲಯ ವಿಸ್ತರಣೆಗಾಗಿ ಸರ್ಕಾರ ವಶಪಡಿಸಿಕೊಂಡಿರುವ ಜಮೀನುಗಳ ವಿಸ್ತೀರ್ಣ ಎಷ್ಟು ; (ವರ್ಷವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಈ ಪೈಕಿ ಖಾಸಗಿ ಜಮೀನೆಷ್ಟು ಮತ್ತು ಸರ್ಕಾರಿ ಜಮೀನೆಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಖಾಸಗಿ ಜಮೀನುಗಳಿಗೆ ಅಲ್ಲಿನ ಮಾರುಕಟ್ಟೆ ದರವೆಷ್ಟು ; ಸರ್ಕಾರ ನಿಗದಿಪಡಿಸಿರುವ ದರವೆಷ್ಟು ; (ಮಾಹಿತಿ ನೀಡುವುದು)

(ಈ) ಕೈಗಾರಿಕೆಗಳಿಗೆ ಜಮೀನು ಹಂಚಿಕೆ ಮಾಡುವಾಗ ಸರ್ಕಾರ ಅನುಸರಿಸುವ ಮಾನದಂಡಗಳೇನು ? (ವಿವರ ನೀಡುವುದು)

## ಹೊಸಕೋಟೆ ನಗರಸಭೆಗೆ ಅನುದಾನದ ಬಗ್ಗೆ

**ಶ್ರೀ ಎನ್. ನಾಗರಾಜು (ಎಂ.ಟಿ.ಬಿ) ವಿಧಾನಸಭೆಯಿಂದ ಚುನಾಯಿತರಾದವರು) :–**

೮೩೧ (೭೯) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೊಸಕೋಟೆ ನಗರಸಭೆಗೆ ಕಳೆದ ೨ ವರ್ಷಗಳಲ್ಲಿ ವಿವಿಧ ಯೋಜನೆಗಳಡಿ ಮಂಜೂರಾಗಿರುವ ಅನುದಾನವೆಷ್ಟು ; (ಮಾಹಿತಿ ನೀಡುವುದು)

(ಆ) ವಿವಿಧ ಯೋಜನೆಯಡಿಯಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಪೂರ್ಣಗೊಂಡಿರುವ/ಬಾಕಿ ಇರುವ ಕಾಮಗಾರಿಗಳೆಷ್ಟು ; (ಪಟ್ಟಿ ನೀಡುವುದು)

(ಈ) ಬಿಡುಗಡೆಯಾದ ಅನುದಾನವೆಷ್ಟು ? (ವಿವರ ನೀಡುವುದು)

## ಕಲಬುರಗಿ–ಯಾದಗಿರಿ ಮತ್ತು ಬೀದರ್ ಹಾಲು ಒಕ್ಕೂಟದಿಂದ ಹಾಲಿನ ಪುಡಿ ಸರಬರಾಜು ಟೆಂಡರ್ ಅಕ್ರಮದ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೩೨ (೯೯೮) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಯಾದಗಿರಿ ಹಾಗೂ ಬೀದರ್ ಹಾಲು ಒಕ್ಕೂಟದಿಂದ ಕ್ಷೀರಭಾಗ್ಯ ಯೋಜನೆಯಡಿ ಶಾಲೆಗಳಿಗೆ, ಅಂಗನವಾಡಿಗಳಿಗೆ ಹಾಲಿನಪುಡಿ ಸಾಗಣೆ ಮಾಡುವ ವಾಹನ ಟೆಂಡರ್‌ನಲ್ಲಿ ಅಕ್ರಮ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಕ್ರಮಕ್ಕೆ ಕಾರಣಕರ್ತರ ವಿರುದ್ಧ ಕೈಗೊಂಡ ಕ್ರಮಗಳೇನು ;

(ಆ) ಸದರಿ ಜಿಲ್ಲೆಗಳಲ್ಲಿ ಹಾಲಿನ ಪುಡಿ ಸರಬರಾಜು ಮಾಡಲು ಇ– ಟೆಂಡರ್ ಕರೆಯಲಾಗಿದೆಯೇ ; ಟೆಂಡರ್‌ನಲ್ಲಿ ಭಾಗವಹಿಸಿದ ಟ್ರಾನ್ಸ್‌ಪೋರ್ಟ್ ಕಂಪನಿಗಳು ಯಾವವು ; ನಿಗದಿಪಡಿಸಿದ ಮಾನದಂಡಗಳೇನು ; ಹಾಲಿನ ಪುಡಿ ಸರಬರಾಜು ಮಾಡಲು ಯಾವ ಟ್ರಾನ್ಸ್‌ಪೋರ್ಟ್ ಕಂಪನಿಗೆ ಟೆಂಡರ್ ನೀಡಲಾಗಿದೆ ;

(ಇ) ಈ ಜಿಲ್ಲೆಗಳಲ್ಲಿ ಬರುವ ಎಷ್ಟು ಶಾಲೆ ಹಾಗೂ ಅಂಗನವಾಡಿಗಳಿಗೆ ಕ್ಷೀರಭಾಗ್ಯ ಯೋಜನೆಯಡಿ ಹಾಲಿನಪುಡಿ ಸರಬರಾಜು ಮಾಡಲಾಗುತ್ತಿದೆ ; ಇದಕ್ಕೆ ವಾರ್ಷಿಕ ಎಷ್ಟು ಹಣ ಬೇಕಾಗುತ್ತದೆ ? (ವಿವರ ನೀಡುವುದು)

## ಯಾದಗಿರಿಯ ಕಡೇಚೂರು–ಬಾಡಿಯಾಳ ಕೈಗಾರಿಕಾ ಪ್ರದೇಶದಲ್ಲಿ ರಾಸಾಯನಿಕ ಕಂಪನಿಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೩೩ (೯೯೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯಾದಗಿರಿಯ ಕಡೇಚೂರು –ಬಾಡಿಯಾಳ ಕೈಗಾರಿಕಾ ಪ್ರದೇಶದಲ್ಲಿ ವಿಷಾನಿಲ ಹೊರ ಸೂಸುವ ಹಾಗೂ ವಿಷತ್ಯಾಜ್ಯದ ನೀರು ನದಿಗೆ ಸೇರಿ ಕುಡಿಯುವ ನೀರನ್ನು ವಿಷವನ್ನಾಗಿ ಮಾಡಿ ಮಕ್ಕಳು, ವಯೋವೃದ್ಧರು ಕಣ್ಣು, ಚರ್ಮ ಹಾಗೂ ಉಸಿರಾಟದ ಸಮಸ್ಯೆಯಿಂದ ಬಳಲುವಂತೆ ಮಾಡುತ್ತಿರುವ ಈ ರಾಸಾಯನಿಕ ಕಂಪನಿಗಳ ವಿರುದ್ಧ ಜನಾಕ್ರೋಶ ವ್ಯಕ್ತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ಕಂಪನಿಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಈ ಕೈಗಾರಿಕಾ ಪ್ರದೇಶದಲ್ಲಿರುವ ರಾಸಾಯನಿಕ ಕಂಪನಿಗಳನ್ನು ಬಂದ್ ಮಾಡಿ ಕಠಿಣ ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಗ್ರಾಮ ಪಂಚಾಯತ್ ಸದಸ್ಯರು ಗ್ರಾಮ ಸಭೆಯಲ್ಲಿ ಠರಾವು ಪಾಸ್ ಮಾಡಿರುವುದು ಸರಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳಾವುವು ; (ವಿವರ ನೀಡುವುದು, ಠರಾವು ಪ್ರತಿ ಒದಗಿಸುವುದು)

(ಇ) ಏರೋ ಸ್ಪೇಸ್ ಕಂಪನಿ ರಾಜ್ಯದ ಕೈ ತಪ್ಪಿತು ಎಂದು ಹತಾಶರಾಗುವ ಬದಲು ಕಡೇಚೂರು–ಬಾಡಿಯಾಳ ಪ್ರದೇಶದಲ್ಲಿ ಖಾಲಿ ಇರುವ ಎರಡು ಸಾವಿರ ಎಕರೆಯಲ್ಲಿ ಏರೋಸ್ಪೇಸ್ ಕಂಪನಿ ನಿರ್ಮಾಣ ಮಾಡಿ ಹೈದರಾಬಾದ್ ಕರ್ನಾಟಕದ ಯುವ ಜನತೆಗೆ ಉದ್ಯೋಗ ನೀಡಿ ನಿರುದ್ಯೋಗ ಸಮಸ್ಯೆಯನ್ನು ಪರಿಹಾರ ಮಾಡುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ ? (ವಿವರ ನೀಡುವುದು)

## ಕಲಬುರಗಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕಸ ಸಂಗ್ರಹ ಸಮರ್ಪಕವಾಗಿ ನಡೆಯದಿರುವ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

ಲಖಳ (೯೦೦) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ನಗರದಲ್ಲಿ ಮನೆ–ಮನೆ ಕಸ ಸಂಗ್ರಹ ಸಮರ್ಪಕವಾಗಿ ನಡೆಯದ ಕಾರಣ ಬೀದಿ ಬದಿ ಹಾಗೂ ಖಾಲಿ ಇರುವ ನಿವೇಶನಗಳಲ್ಲಿ ಕಸ ಹಾಕುತ್ತಿದ್ದು ಇದರಿಂದ ಅಕ್ಕ ಪಕ್ಕದ ನಿವಾಸಿಗಳಿಗೆ ತೊಂದರೆಯಾಗುತ್ತಿರುವುದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮವೇನು ;

(ಆ) ಕಲಬುರಗಿ ಮಹಾನಗರ ಪಾಲಿಕೆಯಿಂದ ನಗರ ವ್ಯಾಪ್ತಿಯಲ್ಲಿ ಕಸ ಸಂಗ್ರಹಿಸುವ ವಾಹನಗಳು ತುಕ್ಕು ಹಿಡಿದಿದ್ದು ಈ ವಾಹನಗಳಲ್ಲಿ ಕಸ ಸಾಗಣೆ ಮಾಡುವಾಗ ರಸ್ತೆಯಲ್ಲೆಲ್ಲ ಚೆಲ್ಲುತ್ತ ಸಾಗುವುದರಿಂದ ರಸ್ತೆಯಲ್ಲಿ ಓಡಾಡುವ ಸಾರ್ವಜನಿಕರಿಗೆ ಕಿರಿಕಿರಿ ಉಂಟಾಗುತ್ತಿದ್ದು ಪಾಲಿಕೆ ಬಳಿ ಕಸ ಸಂಗ್ರಹಿಸಿ ಸಾಗಾಟ ಮಾಡಲು ವ್ಯವಸ್ಥಿತ ವಾಹನಗಳಿಲ್ಲವೇ ;

(ಇ) ಮಹಾನಗರ ಪಾಲಿಕೆ ಕಸ ಸಂಗ್ರಹ ಮತ್ತು ಸಾಗಾಟಕ್ಕೆ ವಾಹನಕೊಳ್ಳಲು ಹಣಕಾಸಿನ ತೊಡಕುಗಳಿವೆಯೇ ; ಪಾಲಿಕೆ ವಾರ್ಷಿಕ ಆಯವ್ಯಯ ಎಷ್ಟು ; ಈಗಾಗಲೇ ವಾಹನ ಖರೀದಿಸಲು ಕ್ರಮ ವಹಿಸಲಾಗಿದೆಯೇ ? (ವಿವರ ನೀಡುವುದು)

## ರಾಜ್ಯದ ಎ.ಪಿ.ಎಂ.ಸಿ ಮಾರುಕಟ್ಟೆಗಳಲ್ಲಿ ದಲ್ಲಾಳಿಗಳ ಸಮಸ್ಯೆ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :–**

೮೩೫ (೮೫೭) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರೈತರು ಬೆಳೆದ ಉತ್ಪನ್ನಗಳನ್ನು ಎ.ಪಿ.ಎಂ.ಸಿ ಮಾರುಕಟ್ಟೆಯಲ್ಲಿ ಮಾರಾಟ ಮಾಡಲು ಇರುವ ನಿಯಮಗಳೇನು ; (ನಿಯಮಗಳ ಪ್ರತಿ ನೀಡುವುದು)

(ಆ) ರೈತರು ಕೃಷಿ ಮಾರುಕಟ್ಟೆಗೆ ಪ್ರವೇಶಿಸಲು ಯಾವುದಾದರೂ ಶುಲ್ಕವಿದೆಯೇ ರಾಜ್ಯದ ರೈತರು ಬೆಳೆದ ಉತ್ಪನ್ನಗಳನ್ನು ಎ.ಪಿ.ಎಂ.ಸಿ ಮಾರುಕಟ್ಟೆಯಲ್ಲಿ ಮಾರಾಟ ಮಾಡಲು ರೈತರಿಂದ ದಲ್ಲಾಳಿಗಳು ಕಮಿಷನ್ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸಹಕಾರ ನೀಡಿದ ಅಂತಹ ಅಧಿಕಾರಿಗಳು ಮತ್ತು ದಲ್ಲಾಳಿಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ?

## ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳಲ್ಲಿ ಬುಡಕಟ್ಟು ಜನರಿಗೆ ಇರುವ ಯೋಜನೆಗಳ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :–**

೮೩೭ (೮೫೮) ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತಿಗಳಲ್ಲಿ ಬುಡಕಟ್ಟು ಜನರಿಗಾಗಿ ಇರುವ ಯೋಜನೆಗಳು ಯಾವವು ;

(ಆ) ಯೋಜನೆಯ ಲಾಭವನ್ನು ಪಡೆಯಲು ಫಲಾನುಭವಿಗಳು ಅನುಸರಿಸಬೇಕಾದ ಮಾನದಂಡಗಳು ಮತ್ತು ಷರತ್ತುಗಳು ಯಾವುವು ;

(ಇ) ಬುಡಕಟ್ಟು ಯೋಜನೆಗಳಿಗೆ ಕಳೆದ ಸಾಲಿನಲ್ಲಿ ಮೀಸಲಿಟ್ಟ ಅನುದಾನ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಅನುದಾನವು ಸಮರ್ಪಕವಾಗಿ ಬುಡಕಟ್ಟು ಜನರಿಗಾಗಿ ಉಪಯೋಗವಾಗುತ್ತಿದೆಯೇ ? (ಮಾಹಿತಿ ನೀಡುವುದು)

## ಸಹಕಾರ ಇಲಾಖೆಯಲ್ಲಿ ವಿವಿಧ ಸಾಲ ಸೌಲಭ್ಯಗಳ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :–**

೮೩೭ (೮೫೯) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಹಕಾರಿ ಸಂಸ್ಥೆಗಳಿಂದ ರೈತರಿಗೆ ದೊರೆಯುತ್ತಿರುವ ವಿವಿಧ ಸಾಲ ಸೌಲಭ್ಯಗಳು ಯಾವವು ;

(ಆ) ಅಲ್ಪಾವಧಿ, ಮಧ್ಯಮಾವಧಿ ಮತ್ತು ದೀರ್ಘಾವಧಿ ಸಾಲ ಸೌಲಭ್ಯಗಳನ್ನು ಪಡೆಯಲು ನಿಗದಿಪಡಿಸಿರುವ ಮಾನದಂಡ ಹಾಗೂ ಷರತ್ತುಗಳೇನು ;

(ಇ) ರಾಜ್ಯದಲ್ಲಿ ಸಹಕಾರ ಇಲಾಖೆಯಲ್ಲಿ ಬುಡಕಟ್ಟು ಜನರಿಗಾಗಿ ಇರುವ ಸಾಲ ಸೌಲಭ್ಯಗಳು ಮತ್ತು ಮಾನದಂಡಗಳು ಯಾವುವು ?

## ರಾಜ್ಯದಲ್ಲಿ ಕೆಐಎಡಿಬಿ ಇಲಾಖೆ ವತಿಯಿಂದ ನಿರ್ಮಾಣಗೊಂಡಿರುವ ಕೈಗಾರಿಕೆ ಬಗ್ಗೆ

**ಶ್ರೀ ಡಿ. ಟಿ. ಶ್ರೀನಿವಾಸ್ (ಡಿ.ಟಿ.ಎಸ್.) (ಶಿಕ್ಷಕರ ಕ್ಷೇತ್ರ) :–**

೮೩೮ (೯೦೩) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೆ.ಐ.ಎ.ಡಿ.ಬಿ ವತಿಯಿಂದ ನಿರ್ಮಾಣಗೊಂಡಿರುವ ಕೈಗಾರಿಕೆ ಪ್ರದೇಶದಲ್ಲಿ ಅತ್ಯಂತ ಹಿಂದುಳಿದ ಪ್ರವರ್ಗ–೧ರ ಜಾತಿಗಳಿಗೆ ಶೇ.೪%ರಷ್ಟು ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆಯೇ ;

(ಆ) ನಿವೇಶನಗಳನ್ನು ಹಂಚಿಕೆ ಮಾಡಿದ್ದಲ್ಲಿ, ಎಷ್ಟು ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ ; (ಪೂರ್ಣ ವಿವರಗಳನ್ನು ನೀಡುವುದು)

(ಇ) ಸರ್ಕಾರದ ಆದೇಶದ ಪ್ರಕಾರ ಮೀಸಲಾತಿಯನ್ನು ಕಲ್ಪಿಸಬೇಕಲ್ಲವೇ; ಹಿಂದುಳಿದ ಪ್ರವರ್ಗ–೧ರ ಜಾತಿಗಳಿಗೆ ಶೇ.೪% ಮೀಸಲಾತಿಯನ್ನು ಕಲ್ಪಿಸಬೇಕಲ್ಲವೇ ;

(ಈ) ರಾಜ್ಯದಲ್ಲಿ ಇದುವರೆವಿಗೂ ಕೈಗಾರಿಕೆಗಳ ಅಭಿವೃದ್ಧಿಗಾಗಿ ರಚಿಸಿರುವ ಕೈಗಾರಿಕಾ ಪ್ರದೇಶಗಳು ಯಾವುವು ? (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿ ಬರುವ ನಗರಸಭೆ ಮತ್ತು ಮಹಾನಗರ ಪಾಲಿಕೆಗಳ ಬಗ್ಗೆ

**ಶ್ರೀ ಡಿ. ಟಿ. ಶ್ರೀನಿವಾಸ್ (ಡಿ.ಟಿ.ಎಸ್.) (ಶಿಕ್ಷಕರ ಕ್ಷೇತ್ರ) :–**

೮೩೯ (೯೦೪) ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರಾಭಿವೃದ್ಧಿ ಇಲಾಖೆಯಡಿ ಬರುವ ನಗರಸಭೆ ಮತ್ತು ಮಹಾನಗರ ಪಾಲಿಕೆಗಳ ಸಂಖ್ಯೆ ಎಷ್ಟು ;

(ಆ) ನಗರಸಭೆ ಮತ್ತು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಸ್ವತ್ತುಗಳ ಸಂಖ್ಯೆ ಎಷ್ಟು ; ಈ ಪೈಕಿ ಇ–ಖಾತಾ ಆಗದಿರುವ ಸ್ವತ್ತುಗಳ ಸಂಖ್ಯೆ ಎಷ್ಟು ; ಬಾಕಿಯಿರುವ ಸ್ವತ್ತುಗಳಿಗೆ ಇ–ಖಾತಾ ನೀಡುವುದು ಯಾವಾಗ ;

(ಇ) ಇ–ಖಾತಾವನ್ನು ನೀಡಿದ ನಂತರ ಕಾನೂನಾತ್ಮಕವಾಗಿ ಸ್ವತ್ತನ್ನು ಖರೀದಿದಾರರಿಗೆ ಪೂರ್ಣವಾಗಿ ವರ್ಗಾವಣೆ ಮಾಡಲಾಗಿದೆಯೇ ;

(ಈ) ನಗರಸಭೆ ಮತ್ತು ಪುರಸಭೆಗಳಿಂದ ರೆವಿನ್ಯೂ ನಿವೇಶನಗಳಿಗೆ ನೀಡಿರುವ ಇ–ಖಾತಾಗಳು ಕಾನೂನು ಬದ್ಧವೇ ; ಇವುಗಳನ್ನು ಸಕ್ರಮಗೊಳಿಸಲು ಸರ್ಕಾರದ ಹಂತದಲ್ಲಿ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಕೃಷಿ ಮಾರುಕಟ್ಟೆಗಳ ಬಗ್ಗೆ

**ಶ್ರೀ ಡಿ. ಟಿ. ಶ್ರೀನಿವಾಸ್ (ಡಿ.ಟಿ.ಎಸ್.) (ಶಿಕ್ಷಕರ ಕ್ಷೇತ್ರ) :–**

೮೪೦ (೯೦೫) ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಕೃಷಿ ಉತ್ಪನ್ನ ಮಾರುಕಟ್ಟೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದ ಎಲ್ಲಾ ಮಾರುಕಟ್ಟೆಗಳಿಗೆ ಸ್ವಂತ ಕಟ್ಟಡವನ್ನು ನಿರ್ಮಿಸಲಾಗಿದೆಯೇ ;

(ಇ) ನಿರ್ಮಿಸಿದ್ದಲ್ಲಿ, ಯಾವ ಯಾವ ನಗರ ಪ್ರದೇಶಗಳಲ್ಲಿ ನಿರ್ಮಿಸಲಾಗಿದೆ ?

## ರಾಜ್ಯದಲ್ಲಿ ಬರುವ ಸಹಕಾರ ಸಂಘ ಸಂಸ್ಥೆಗಳ ಬಗ್ಗೆ ಮಾಹಿತಿ ಒದಗಿಸುವುದು

**ಶ್ರೀ ಡಿ. ಟಿ. ಶ್ರೀನಿವಾಸ್ (ಡಿ.ಟಿ.ಎಸ್.) (ಶಿಕ್ಷಕರ ಕ್ಷೇತ್ರ) :–**

೮೪೧ (೯೦೬) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಹಕಾರ ಇಲಾಖೆಯಡಿ ಬರುವ ಸಹಕಾರ ಸಂಘಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಸಹಕಾರ ಸಂಘಗಳ ಪದಾಧಿಕಾರಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಪರಿಶಿಷ್ಟ ಜಾತಿ/ ಪರಿಶಿಷ್ಟ ವರ್ಗದವರಿಗೆ ಇರುವ ಸದಸ್ಯತ್ವದ ಸೀಟುಗಳು ಪ್ರವರ್ಗ–೧ರ ಜಾತಿಯ ಜನರಿಗೆ ಮೀಸಲಾಗಿದೆಯೇ ; ಮೀಸಲು ಇಟ್ಟಿದ್ದಲ್ಲಿ, ಎಷ್ಟು ಸೀಟುಗಳನ್ನು ಮೀಸಲಿರಿಸಲಾಗಿದೆ ? (ಮಾಹಿತಿ ನೀಡುವುದು)

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. O60/350 ಪ್ರತಿಗಳು/05–08–2025